ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 127

28-10-2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 127

## ದಾವಣಗೆರೆ ಕನಿಪ ಜಿಲ್ಲಾ ಘಟಕಕ್ಕೆ 67 ನಾಮಪತ್ರ ಸಲ್ಲಿಕೆ



**ದಾವಣಗೆರೆ:** ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ದಾವಣಗೆರೆ ಜಿಲ್ಲಾ ಘಟಕದ ಚುನಾವಣೆ ನವೆಂಬರ್ 9, 2025 ರಂದು ನಡಯಲಿದ್ದು, ಅಂತಿಮ ದಿನವಾದ ಸೋಮವಾರ ಒಟ್ಟು 67 ನಾಮ ಪತ್ರ ಸಲ್ಲಿಕೆಯಾಗಿವೆ ಎಂದು ಚುನಾವಣಿ ಅಧಿಕಾರಿ ಮಲ್ಲಿಕಾರ್ಜುನ ಕಬ್ಬೂರು ತಿಳಿಸಿದ್ದಾರೆ.

ಅಧ್ಯಕ್ಷ –4, ಉಪಾಧ್ಯಕ್ಷ–10

ಪ್ರಧಾನ ಕಾರ್ಯದರ್ಶಿ – 3, ಕಾರ್ಯದರ್ಶಿ –7, ಖಜಾಂಚಿ –2, ರಾಜ್ಯ ಕಾರ್ಯಕಾರಿ ಸಮಿತಿ–4, ಜಿಲ್ಲಾ ಸಮಿತಿ ಸದಸ್ಯ –37 ಸೇರಿ ಒಟ್ಟು–67 ನಾಮ ಪತ್ರ ಸಲ್ಲಿಕೆಯಾಗಿವೆ ಎಂದು ಮಾಹಿತಿ ನೀಡಿದ್ದಾರೆ.

ನಾಮ ಪತ್ರ ಪರಿಶೀಲನೆ ಅಕ್ಟೋಬರ್ 28, 2025ರಂದು ಮಂಗಳವಾರ ಬೆಳಗ್ಗೆ 11ಕ್ಕೆ ನಡಯಲಿದೆ. ಜಿಲ್ಲಾ ಸಮಿತಿ ಸದಸ್ಯತ್ವದ ನಾಮ ಪತ್ರಗಳನ್ನು ಬೆಳಿಗ್ಗೆ 11 ರಿಂದ 12ರ ತನಕ ಪರಿಶೀಲನೆ ಮಾಡಲಾಗುವುದು. ಜಿಲ್ಲಾ ಪದಾಧಿಕಾರಿಗಳ ಹಾಗೂ ರಾಜ್ಯ ಕಾರ್ಯಕಾರಿ ಸಮಿತಿಯ ನಾಮ ಪತ್ರಗಳನ್ನು ಬೆಳಿಗ್ಗೆ 12.30 ರಿಂದ 1.30 ರ ವರಗೆ ಪರಿಶೀಲನೆ ಮಾಡಲಾಗುವುದು.

ಜಿಲ್ಲಾ ಪದಾಧಿಕಾರಿಗಳ ಹುದ್ದೆಗೆ ನಾಮ ಪತ್ರ ಸಲ್ಲಿಸಿರುವವರು ತಾವು ಈ ಹಿಂದೆ ಆಯ್ಕೆಯಾದ ಪ್ರಮಾಣ ಪತ್ರಗಳನ್ನು ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಚುನಾವಣೆ ಅಧಿಕಾರಿಗಳಿಗೆ ಹಾಜರಿಪಡಿಸಬೇಕು.

# ‘ಕಾಂಗ್ರೆಸ್ ಹೈಕಮಾಂಡ್ ಒಪ್ಪಿದರೇ 5 ವರ್ಷ ಕಾಲ ನಾನೇ ಮುಖ್ಯಮಂತ್ರಿ’: ಸಿದ್ದರಾಮಯ್ಯ

**ಮಂಗಳೂರು:** ಕರ್ನಾಟಕದಲ್ಲಿ ಮುಖ್ಯಮಂತ್ರಿ ಸ್ಥಾನ ಬದಲಾವಣೆ ಕುರಿತಾದ "ನವೆಂಬರ್ ಕ್ರಾಂತಿ"ಯ ಬಗ್ಗೆ ವ್ಯಾಪಕ ಪರ–ವಿರೋಧ ಚರ್ಚೆಗಳು ನಡೆಯುತ್ತಿರುವಂತೆಯೇ ಇತ್ತ ಸಿಎಂ ಸಿದ್ದರಾಮಯ್ಯ ಈ ಚರ್ಚೆಗೆ ಮತ್ತೊಂದು ಟ್ವಿಸ್ಟ್ ನೀಡುವ ಹೇಳಿಕೆ ನೀಡಿದ್ದಾರೆ.

ಕಾಂಗ್ರೆಸ್ ಸರ್ಕಾರ ನವೆಂಬರ್‌ನಲ್ಲಿ ತನ್ನ ಐದು ವರ್ಷಗಳ ಅವಧಿಯ ಅರ್ಧಭಾಗ ತಲುಪಿರುವಂತೆಯೇ ನಾಯಕತ್ವದಲ್ಲಿ ಸಂಭವನೀಯ ಬದಲಾವಣೆಯ ಬಗ್ಗೆ ಊಹಾಪೋಹಗಳೆದ್ದಿವೆ.

ಇದನ್ನು ಕೆಲವರು "ನವೆಂಬರ್ ಕ್ರಾಂತಿ" ಎಂದು ಕರೆಯುತ್ತಿದ್ದು, ಈ ಕುರಿತ ಚರ್ಚೆಗಳು ವ್ಯಾಪಕವಾಗಿವೆ. ಆದಾಗ್ಯೂ, ಸಿಎಂ ಸಿದ್ದರಾಮಯ್ಯ ಕೂಡ ಐದು ವರ್ಷಗಳ ಪೂರ್ಣ ಅವಧಿಯನ್ನು ಪೂರ್ಣಗೊಳಿಸುವುದಾಗಿ ನಿರಂತರವಾಗಿ ಪುನರುಚ್ಚರಿಸುತ್ತಿದ್ದಾರೆ.



ಆದರೆ ಇದೀಗ ಮೊದಲ ಬಾರಿಗೆ ಸಿಎಂ ಸ್ಥಾನದ ಬದಲಾವಣೆ ಕುರಿತು ಸಿಎಂ ಸಿದ್ದರಾಮಯ್ಯ ಹೈಕಮಾಂಡ್ ನತ್ತ ಬೊಟ್ಟು ಮಾಡಿ ತೋರಿಸುತ್ತಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ನಿರ್ಧಾರಕ್ಕೆ ಒಳಪಟ್ಟು ಐದು ವರ್ಷಗಳ ಪೂರ್ಣ ಅವಧಿಗೆ ಅಧಿಕಾರದಲ್ಲಿ ಮುಂದುವರಿಯುವುದಾಗಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ. ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಉಳಿಯುವಿರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, "ಹೈಕಮಾಂಡ್ ನಿರ್ಧರಿಸಿದರೆ" ಎಂದು ಮಾರ್ಮಿಕವಾಗಿ ಹೇಳಿದರು.

ಸಿದ್ದರಾಮಯ್ಯ ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂಬ ಅವರ ಆಪ್ತ ಮತ್ತು ಮಾಜಿ ಸಚಿವ ಕೆ ಎನ್ ರಾಜಣ್ಣ ಅವರ ಹೇಳಿಕೆಯ ಬಗ್ಗೆ ಕೇಳಿದಾಗ, "ಅದು ಅವರ ವೈಯಕ್ತಿಕ ಅಭಿಪ್ರಾಯ" ಎಂದು ಸಿದ್ದರಾಮಯ್ಯ ಹೇಳಿದರು.

ಕಾಂಗ್ರೆಸ್‌ನಲ್ಲಿರುವ ಬಹು ಮುಖ್ಯಮಂತ್ರಿ ಆಕಾಂಕ್ಷಿಗಳ ಕುರಿತು ಮಾತನಾಡಿದ ಸಿದ್ದರಾಮಯ್ಯ, "ಪ್ರಜಾಪ್ರಭುತ್ವದಲ್ಲಿ, ಸ್ಪರ್ಧೆಯಲ್ಲಿರುವವರಿಗೆ ಸ್ಪರ್ಧಿಸಬೇಡಿ ಎಂದು ನಾವು ಹೇಳಲು ಸಾಧ್ಯವಿಲ್ಲ. ಅದು ಅವರ ಹಕ್ಕು. ಯಾರಾದರೂ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಹೇಳಿಕೊಳ್ಳಬಹುದು, ಆದರೆ ಅಂತಿಮವಾಗಿ, ಹೈಕಮಾಂಡ್ ನಿರ್ಧರಿಸುತ್ತದೆ." ನಾಯಕತ್ವ ಬದಲಾವಣೆಯ ವಿಷಯ ಏಕೆ ನಿರಂತರವಾಗಿ ಹೊರಹೊಮ್ಮುತ್ತಿದೆ ಎಂಬ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಅವರು, "ನೀವು (ಮಾಧ್ಯಮ) ಕೇಳುತ್ತಲೇ ಇರುವುದರಿಂದ" ಈ ಪ್ರಶ್ನೆಗಳು ಉದ್ಭವಿಸುತ್ತಿವೆ ಎಂದು ಉತ್ತರಿಸಿದರು.

ಅಧಿಕಾರ ಹಂಚಿಕೆ ಒಪ್ಪಂದ?

ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಊಹಾಪೋಹಗಳು ಕೆಲವು ಸಮಯದಿಂದ ಮುಂದುವರೆದಿದ್ದು, ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಅಧಿಕಾರ ಹಂಚಿಕೆ ಒಪ್ಪಂದ ನಡೆದಿದೆ ಎಂದು ವರದಿಗಳು ಸೂಚಿಸುತ್ತವೆ.

## ಇಂದು ಶ್ರೀ ಶಂಕರ ಭಾರತಿ ಸ್ವಾಮೀಜಿ ನಗರಕ್ಕೆ

**ದಾವಣಗೆರೆ:** ಯಡತೊರೆ ಶ್ರೀ ಯೋಗಾನಂದೇಶ್ವರ ಮಠದ ಪೀಠಾಧೀಶ್ವರರಾದ ಶ್ರೀ ಶಂಕರ ಭಾರತಿ ಸ್ವಾಮೀಜಿಯವರು ಅ.28ರ ಇಂದು ಇಲ್ಲಿನ ಶ್ರೀ ಶಾರದಾಂಬ ದೇವಸ್ಥಾನಕ್ಕೆ ಆಗಮಿಸಲಿದ್ದಾರೆ. ಇಂದು ಸಂಜೆ 5:ಗಂಟೆಗೆ ಆಗಮಿಸಲಿರುವ ಶ್ರೀಗಳನ್ನು ಪೂರ್ಣ ಕುಂಭದಿಂದ ಸ್ವಾಗತಿಸಿ , ಶ್ರೀಗಳಿಗೆ ಧೂಳಿಪಾದ ಪೂಜೆ ಸಲ್ಲಿಸಲಾಗುತ್ತದೆ. ನಂತರ ಶ್ರೀಗಳಿಂದ ಆಶೀರ್ವಚನ ಮತ್ತು ಭಕ್ತರಿಗೆ ಫಲಮಂತ್ರಾಕ್ಷತೆ ವಿತರಣೆ ಕಾರ್ಯಕ್ರಮಗಳು ಜರುಗಲಿವೆ ಆದ್ದರಿಂದ ಭಕ್ತರು ಶ್ರೀಗಳವರ ದರ್ಶನಕ್ಕೆ ಆಗಮಿಸಬೇಕೆಂದು ಶ್ರೀ ಶಂಕರ ಸೇವಾ ಸಂಘದ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಕೋರಿದ್ದಾರೆ.

## ಮಾಸಡಿ ಗ್ರಾಪಂ ಅಕ್ರಮ ಖಂಡಿಸಿ ಪ್ರತಿಭಟನೆ

ದಾವಣಗೆರೆ: ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಮಾಸಡಿ ಗ್ರಾಮ ಪಂಚಾಯತಿಯಲ್ಲಿ 14–15 ನೇ ಹಣಕಾಸಿನಲ್ಲಿ ಬಂದಿರುವ ಎಲ್ಲಾ ಅನುದಾನವನ್ನು ಬೊಗಸ್ ಬಿಲ್ಲು ಬರೆಸಿ ಕಬಳಿಸಿರುವುದನ್ನು ಖಂಡಿಸಿ ಗ್ರಾಮಸ್ಥರು ಗ್ರಾಮಪಂಚಾಯತಿಯ ಮುಂದೆ ಧರಣಿ ಕೂತು ಪ್ರತಿಭಟನೆ ನಡೆಸಿದರು.

## ಬಿ.ಪಿ.ಹರೀಶ್ ಸುಳ್ಳು ಹೇಳುವುದನ್ನು ಬಿಟ್ಟು ತಮ್ಮ ಕ್ಷೇತ್ರ ಅಭಿವೃದ್ಧಿ ಮಾಡಲಿ: ಯುವ ಕಾಂಗ್ರೆಸ್

**ದಾವಣಗೆರೆ.ಅ.27:** ಎರಡು ಬಾರಿ ಶಾಸಕರಾಗಿರುವ ಬಿ.ಪಿ.ಹರೀಶ್ ಮಾತನಾಡುವ ಮಾತುಗಳು ನಾಲ್ಕು ಜನರಿಗೆ ಆದರ್ಶವಾಗಿರಬೇಕು. ಆದರೆ ಅವರು ನಾಲಿಗೆಗೂ ಮೆದುಳಿಗೂ ಸಂಬಂಧನೆ ಇಲ್ಲ ಎಂಬ ರೀತಿ ವರ್ತಿಸುತ್ತಿದ್ದಾರೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ವರುಣ್ ಬೆಣ್ಣೆಹಳ್ಳಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಮಂತ್ರಿಗಳ ಬಗ್ಗೆ ಮಾತನಾಡುವ ಶಾಸಕ ಬಿ.ಪಿ. ಹರೀಶ್ ಹರಿಹರದಲ್ಲಿ 40 ವರ್ಷದಿಂದ ಸುದೀರ್ಘ ರಾಜಕಾರಣ ಮಾಡುತ್ತಿದ್ದಿರೂ, ಅಲ್ಲಿನ ಜನತೆಗೆ ಏನು ಕೊಡುಗೆ ನೀಡಿಲ್ಲ. ಕಿರ್ಲೋಸ್ಕರ್ ಕಂಪನಿ ಮುಚ್ಚಿತು. ಅದಕ್ಕೆ ಪರ್ಯಾಯವಾಗಿ ಯಾವ ಕಂಪನಿಯನ್ನು ಅಪ್ರೋಚ್ ಮಾಡಿ ತರಲಿಲ್ಲ. ಮೂವತ್ತು ತಿಂಗಳು ಆಯಿತು ತಾವು ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ಬಳಿ ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿಗಳ ಹತ್ತಿರ ಸಂಬಂಧಪಟ್ಟ ಇಲಾಖೆ ಮಂತ್ರಿಗಳ ಹತ್ರ ಎಷ್ಟು ಅರ್ಜಿ ಕೊಟ್ಟಿದ್ದೀರಿ ತಿಳಿಸಲಿ ಎಂದರು.

ಕೇಂದ್ರ ಸರ್ಕಾರದ ಶಾಸಕರುಗಳು, ಮಂತ್ರಿಗಳೂ ಎಲ್ಲರೂ ಪರಿಚಯವಿದ್ದರೂ ಮರಿಯಮ್ಮನಹಳ್ಳಿ ಹೊನ್ನಾಳಿ ಹೆದ್ದಾರಿ ವಿಚಾರದಲ್ಲಿ ತಾವು ಹೋಗಿ ಕೆಲಸ ಮಾಡಿಸಿಕೊಂಡು ಬರಲಿಲ್ಲ. ಆದರೆ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮೂರು ಬಾರಿ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಮಂತ್ರಿಗಳನ್ನು ಭೇಟಿ ಮಾಡಿ ಹೆದ್ದಾರಿ ಕಾರ್ಯಕ್ಕೆ ಚಾಲನೆ ನೀಡಿದ್ದಾರೆ ಎಂದು ಹೇಳಿದರು.

ಶಾಸಕರು ಸುಮ್ಮನೆ ಆರೋಪ ಮಾಡುವುದನ್ನು ಬಿಟ್ಟು ಅಭಿವೃದ್ಧಿ ಕಡೆ ಗಮನಕೊಡಬೇಕು. ಹಾಗೂ ಜಿಲ್ಲಾಮಂತ್ರಿಗಳ ವಿರುದ್ಧ ಮಾಡಿರುವ ಸುಳ್ಳು ಆರೋಪಕ್ಕೆ ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು. ಇಲ್ಲವಾದರೆ ಅವರ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

## ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯಿಂದ ಪ್ರತಿಭಟನೆ

**ದಾವಣಗೆರೆ.ಅ.27:** ಭತ್ತ ಮತ್ತು ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನಿಗದಿ ಹಾಗೂ ಖರೀದಿ ಕೇಂದ್ರ ಸ್ಥಾಪಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾ ಘಟಕದಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಸೋಮವಾರ ನಗರದ ಜಯದೇವ ವೃತ್ತದಿಂದ ಹಸಿರು ಸೇನೆ ಜಿಲ್ಲಾ ಘಟಕದ ಪದಾಧಿಕಾರಿಗಳು ಹಾಗೂ ರೈತರು ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪಿಬಿ ರಸ್ತೆ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆಯಲ್ಲಿ ತೆರಳಿ, ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಸಂಘದ ಜಿಲ್ಲಾಧ್ಯಕ್ಷ ಗುಮ್ಮನೂರು ಬಸವರಾಜ ಮಾತನಾಡಿ, ಜಿಲ್ಲಾಡಳಿತಕ್ಕೆ ರೈತರ ಬಗ್ಗೆ ಕಾಳಜಿಯೇ ಇಲ್ಲ. ನಾಮಕಾವಸ್ಥೆಗೆ ಮಾತ್ರ ನೊಂದಣಿ ಕೇಂದ್ರ ತೆರೆದಿದೆ. ಅದರ ಸಾಫ್ಟ್‌ವೇರ್‌ನಲ್ಲೂ ಸಮಸ್ಯೆಗಳಿವೆ. ಫ್ರೂಟ್ ಐಡಿ ತಂದರೂ ಇನ್ನಷ್ಟು ದಾಖಲೆ ತರಬೇಕೆಂದು ಅಧಿಕಾರಿಗಳು ಹೇಳುತ್ತಾರೆ. ಕೂಡಲೇ ಈ ಸಮಸ್ಯೆ ಬಗೆಹರಿಸಿ ಫ್ರೂಟ್ ಐಡಿಯೊಂದಕ್ಕೆ ನೊಂದಣಿ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾದ್ಯಂತ ಪ್ರತಿ ತಾಲೂಕು ಕೇಂದ್ರಗಳಲ್ಲೂ ಭತ್ತ ಮತ್ತು ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತಕ್ಷಣದಿಂದಲೇ ಸ್ಥಾಪಿಸಬೇಕು. ಮೆಕ್ಕೆಜೋಳ, ಭತ್ತ ಇತರೆ ಬೆಳೆಗಳು ಈಗಾಗಲೇ ಕಟಾವಿಗೆ ಬಂದಿವೆ. ಇಷ್ಟಾದರೂ ಸರ್ಕಾರ ಇನ್ನೂ ಸಹ ಬೆಳೆಗಳಿಗೆ ಸೂಕ್ತ ಬೆಲೆಯನ್ನು ಘೋಷಣೆ ಮಾಡಿಲ್ಲ. ಮೆಕ್ಕೆಜೋಳಕ್ಕೆ 1800 ರೂ.ನಂತೆ ಎಪಿಎಂಸಿ ಮಾರುಕಟ್ಟೆಯಲ್ಲಿ ವರ್ತಕರು ರೈತರಿಂದ ಖರೀದಿಸುತ್ತಿದ್ದಾರೆ. ಭತ್ತವನ್ನು 1700 ರೂ.ನಿಂದ 1900 ರೂ.ವರೆಗೆ ಖರೀದಿಸುತ್ತಿದ್ದಾರೆ. ಇದೇ ರೀತಿ ಮುಂದುವರಿದರೆ ರೈತರ ಕಣ್ಣನಲ್ಲಿ ಕಣ್ಣೀರಿನ ಬದಲು ರಕ್ತ ಸುರಿಯುತ್ತದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಭತ್ತಕ್ಕೆ 3500 ರೂ ಹಾಗೂ ಮೆಕ್ಕೆಜೋಳಕ್ಕೆ 3000 ರೂ ಬೆಂಬಲ ಬೆಲೆ ಘೋಷಣೆ ಮಾಡಿ, ಬೆಂಬಲ ಬೆಲೆಯಡಿ ಖರೀದಿ ಕೇಂದ್ರದಲ್ಲೇ ಖರೀದಿಸಬೇಕು. ಸೇನೆಯ ಬೇಡಿಕೆಯಂತೆ ದರ ಘೋಷಣೆ ಮಾಡಬೇಕು. ಯಾವುದೇ ಕಾರಣಕ್ಕೂ ನಾವು ಹೇಳಿದ ಬೆಲೆಗಿಂತಲೂ ಕಡಿಮೆ ಬೆಲೆ ಘೋಷಿಸಿದರೆ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಬೇಕಾಗುತ್ತದೆ ಎಂದು ಅವರು ಹೇಳಿದರು.

ಬೆಳೆ ಬೆಳೆಯಲು ಮಾಡಿದ ಸಾಲ ತೀರಿಸಲಾಗದೇ ರೈತರು ಸಂಕಷ್ಟಪಡುವಂತಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ತಾಲೂಕು ಕೇಂದ್ರಗಳಲ್ಲಿ ಖರೀದಿ ಕೇಂದ್ರಗಳನ್ನು ತಕ್ಷಣ ಸ್ಥಾಪಿಸಬೇಕು. ನಮ್ಮ ಬೇಡಿಕೆಗೆ ಸ್ಪಂದಿಸದಿದ್ದರೆ ಜಿಲ್ಲಾದ್ಯಂತ ಹಸಿರು ಸೇನೆ ನೇತೃತ್ವದಲ್ಲಿ ಕೃಷಿ ಇಲಾಖೆಯ ಎಲ್ಲಾ ಅಧಿಕಾರಿಗಳ ಮನೆ ಮುಂದೆ ಧರಣಿ, ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಗುಮ್ಮನೂರು ಬಸವರಾಜ ಎಚ್ಚರಿಸಿದರು.

ದೊಣ್ಣೆಹಳ್ಳಿ ಲೋಕಣ್ಣ, ಸಿದ್ದಪ್ಪ ನಾಯಕ ಹುಚ್ಚವ್ವನಹಳ್ಳಿ, ಕೆಂಚಮ್ಮನಹಳ್ಳಿ ಆರ್. ಹನುಮಂತಪ್ಪ, ಚಿಕ್ಕತೊಗಲೇರಿ ಮಲ್ಲಿಕಾರ್ಜುನ, ಕೋಲ್ಕುಂಟೆ ಉಚ್ಚೆಂಗೆಪ್ಪ, ಭರಮಸಮುದ್ರ ಬಿ.ಕುಮಾರ, ವಟೇಗನಹಳ್ಳಿ ಎನ್.ಸುನಿಲ, ನೀರ್ಥಡಿ ಭೀಮಣ್ಣ, ಬಸಣ್ಣ ಬೊಮ್ಮನಹಳ್ಳಿ, ಅತ್ತಿಗೆರೆ ಮೂರ್ತೆಪ್ಪ, ಕೃಷ್ಣಪ್ಪ ಜಗಳೂರು, ಪುಟ್ಟಪ್ಪ, ಬಿ. ಎಚ್.ಬಸವರಾಜ, ಎಚ್.ಬಿ.ಮೂರ್ತೆಪ್ಪ, ಎ.ಟಿ.ವೆಂಕಟೇಶ, ಚಂದ್ರಪ್ಪ, ಎನ್. ಆರ್.ಸಂತೋಷ ಇತರರು ಪ್ರತಿಭಟನೆಯಲ್ಲಿ ಇದ್ದರು.

## ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರು

### ಚುನಾವಣಾ ಆಯೋಗಕ್ಕೆ ಬೆಂಗಳೂರು ಸೆಂಟ್ರಲ್‌ನ ‘ವೋಟ್ ಚೋರಿ’ ಡೇಟಾ ಸಲ್ಲಿಕೆ

**ಬೆಂಗಳೂರು:** ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರಿದ್ದಾರೆ. ಮತಗಳ್ಳತನ ನಡೆಯದಿದ್ದರೆ ಬೆಂಗಳೂರು ಸೆಂಟ್ರಲ್ ಕ್ಷೇತ್ರಕ್ಕೆ ಕಾಂಗ್ರೆಸ್ ಸಂಸದರು ಆಯ್ಕೆ ಆಗುತ್ತಿದ್ದರು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಸನ್ ರೈಸ್ ಸರ್ಕಲ್‌ನಲ್ಲಿ ಮತಗಳ್ಳತನ (ವೋಟ್ ಚೋರಿ) ವಿರುದ್ಧ ನಡೆಯುತ್ತಿರುವ ‘ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನ’ಕ್ಕೆ ಚಾಲನೆ ನೀಡಿ ಅವರು ಮಾತನಾಡಿದ ಅವರು, ನಕಲಿ ಮತದಾರರ ಪಟ್ಟಿಯನ್ನು ದಾಖಲೆ ಸಮೇತ ಚುನಾವಣಾ ಆಯೋಗ–ಕ್ಕೆ ಸಲ್ಲಿಸಿದ್ದರೂ, ಇನ್ನು ಯಾವುದೇ ಕ್ರಮ



ಆಗಿಲ್ಲ. ನಕಲಿ ಮತಗಳ ಅಳಿಸುವ ಪ್ರಕ್ರಿಯೆಗೆ ಚುನಾವಣಾ ಆಯೋಗ ಇನ್ನೂ ಮೀನಮೇಷ ಎಣಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

ದೇಶದಲ್ಲಿ ಈಗಾಗಲೇ ಮತಗಳ್ಳತನ ವಿರುದ್ಧ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿಯವರು ಸವಿಸ್ತಾರವಾಗಿ ದೇಶದ ಜನತೆಗೆ ದಾಖಲೆಯ ಸಮೇತವಾಗಿ ನಿರೂಪಿಸಿದ್ದಾರೆ. ಇದು ಇಡೀ ದೇಶವೇ ಆತಂಕಪಡುವ ಸ್ಥಿತಿಯಲ್ಲಿದೆ. ಸಾಂವಿಧಾನಿಕ ಪೀಠಗಳನ್ನು ಬಿಜೆಪಿ ತಮ್ಮ ಮತ ಬ್ಯಾಂಕ್ ಮಾಡಿಕೊಂಡಿರುವುದು ಖಂಡನೀಯ ಎಂದು ದಿನೇಶ್ ಗುಂಡೂರಾವ್ ಟೀಕಿಸಿದರು.

ಕರ್ನಾಟಕ ರಾಜ್ಯದ ಮಹದೇವಪುರ ಕ್ಷೇತ್ರದಲ್ಲಿ ಸುಮಾರು 1 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರನ್ನು ಸೃಷ್ಟಿಸಿ, ಅವರಿಂದ ಮತದಾನ ಪಡೆದುಕೊಂಡು ಅಧಿಕಾರಕ್ಕೆ ಬಂದ ಬಿಜೆಪಿ ಸರಕಾರಕ್ಕೆ ಜನರು ಪ್ರಶ್ನೆ ಮಾಡಬೇಕಾಗಿದೆ.

ಇದು ಸಂಪೂರ್ಣ ಪ್ರಜಾಪ್ರಭುತ್ವದ ಕಗ್ಗೊಲೆ. ಆಯೋಗವನ್ನು ತಮ್ಮ ಕೈಗೊಂಬೆಯಾಗಿಸಿಕೊಂಡು ಇಲ್ಲದೇ ಇರುವ ಮತದಾರರನ್ನು ಸೃಷ್ಟಿಸಿ, ಸಾಂವಿಧಾನಿಕ ಮೌಲ್ಯಗಳನ್ನು ಮೂಲೆಗುಂಪು ಮಾಡಿ ಮತಗಳ್ಳತನ ನಡೆಸಿ ಅಧಿಕಾರಕ್ಕೆ ಬಂದಿರುವುದು ಶೋಚನೀಯ. ನಾವು ನಡೆಸುತ್ತಿರುವ ಮತಗಳ್ಳತನ ‘ವೋಟ್ ಚೋರಿ’ ವಿರುದ್ಧ ನಡೆಯುತ್ತಿರುವ ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನ ಕಾರ್ಯಕ್ರಮವನ್ನು ಯಶ್ವಸಿಯಾಗಿ ನಡೆಸಿ ಕಣ್ಣಿಗೆ ಕಪ್ಪು ಪಟ್ಟಿ ಕಟ್ಟಿಕೊಂಡು ನಿದ್ರೆ ಮಾಡುತ್ತಿರುವ ಅಧಿಕಾರಿಗಳನ್ನು ಎಚ್ಚರಿಸಬೇಕಾಗಿದೆ.

ದೇಶಾದ್ಯಂತ ಈ ಸಹಿ ಸಂಗ್ರಹ ನಡೆ–ಯುತ್ತಿದ್ದು ಗಾಂಧಿನಗರ ಕ್ಷೇತ್ರದಿಂದಲೂ ಸುಮಾರು 1 ಲಕ್ಷಕ್ಕೂ ಅಧಿಕ ಸಹಿ ಸಂಗ್ರಹ ಮಾಡುವ ಗುರಿಯನ್ನು ಹೊಂದಿದೆ ಎಂದರು.

## ವೈದ್ಯಕೀಯ ಕಾಲೇಜಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಆಗ್ರಹಿಸಿ ಮನವಿ



**ಚಿಕ್ಕಮಗಳೂರು:** ಇಲ್ಲಿನ ವೈದ್ಯಕೀಯ ಕಾಲೇಜು ಮತ್ತು ಹಾಸ್ಟೆಲ್‌ಗೆ ಮೂಲಭೂತ ಸೌಕರ್ಯಗಳನ್ನು ಶೀಘ್ರವೇ ಕಲ್ಪಿಸುವಂತೆ ಆಗ್ರಹಿಸಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್‌ರವರಿಗೆ ಮನವಿ ಸಲ್ಲಿಸಿದರು.

ನಂತರ ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಜಸಂತಾಅನಿಲ್ ಕುಮಾರ್ ಅವರು ಕಾಲೇಜು ಮತ್ತು ಹಾಸ್ಟೆಲ್‌ಗಳಲ್ಲಿ ನೀರಿನ ಸೌಲಭ್ಯದ ಕೊರತೆಯಿದೆ. ವಿದ್ಯುತ್‌ಚ್ಚಕ್ತಿ ಮತ್ತು ಇಂಟರ್‌ನೆಟ್ ಸೌಲಭ್ಯವಿಲ್ಲ. ಹೆಣ್ಣುಮಕ್ಕಳ ವಸತಿ ನಿಲಯದಲ್ಲಿ ಭದ್ರತೆಯನ್ನು ಒಳಗೊಂಡಿಲ್ಲ ಎಂದು ಹೇಳಿದರು.

ಆಹಾರದ ಸ್ವಚ್ಚತೆ, ಗುಣಮಟ್ಟ, ಸಾಕಷ್ಟು ಆಹಾರವನ್ನು ನೀಡುತ್ತಿಲ್ಲ, ಸ್ವಚ್ಚತಾ ಸಿಬ್ಬಂದಿಯ ಕೊರತೆ ಇದೆ. ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಇರುವುದಿಲ್ಲ. ನಾಲ್ಕನೇ ವರ್ಷದ ವಿದ್ಯಾರ್ಥಿಗಳಿಗೆ ಅಧ್ಯಾಪಕರ ಕೊರತೆ ಇದೆ ಎಂದು ಹೇಳಿದ್ದಾರೆ.

ಕಾಲೇಜು ಮತ್ತು ಹಾಸ್ಟೆಲ್ ಕ್ಯಾಂಪಸ್‌ಗಳಲ್ಲಿ ಜೇನುಗೂಡು ಕಟ್ಟಿದ್ದು, ಜೇನುನೊಣಗಳು ಹಾಸ್ಟೆಲ್ ಕೊಠಡಿ ಒಳ ಪ್ರವೇಶಿಸದಂತೆ ಕಿಟಕಿಗಳಿಗೆ ಮೆಸ್ ಹಾಗೂ ಕರ್ಟನ್‌ಗಳನ್ನು ಅಳವಡಿಸಬೇಕೆಂದು ಒತ್ತಾಯಿಸಿದರು.

ಅಡುಗೆ ಕೋಣೆಯಲ್ಲಿಯೇ ಪಾತ್ರೆಗಳನ್ನು ತೊಳೆಯುತ್ತಿದ್ದು, ಅಡುಗೆ ಕೊಠಡಿ ಸ್ವಚ್ಚವಾಗಿಲ್ಲ, ಹಣ್ಣು–ತರಕಾರಿಗಳ ಗುಣಮಟ್ಟ ಹಾಗೂ ಶೌಚಾಲಯಗಳ ಸ್ವಚ್ಚತೆ ಕೊರತೆ, ಪೋಷಕರಿಗೆ ವೇಟಿಂಗ್ ರೂಂ ಕೊರತೆ ಇದೆ ಎಂದು ತಿಳಿಸಿದ್ದಾರೆ.

## ನವೆಂಬರ್ 2ರಂದು ಕನ್ನಡ ರಾಜ್ಯೋತ್ಸವ ಮತ್ತು ಕನ್ನಡ ಗೀತೆಗಳ ಸಮೂಹ ನೃತ್ಯ ಸ್ಪರ್ಧೆ

**ದಾವಣಗೆರೆ.ಅ.27:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವ ಮತ್ತು ಕನ್ನಡ ಗೀತೆಗಳ ಸಮೂಹ ನೃತ್ಯ ಸ್ಪರ್ಧೆಯ ಉದ್ಘಾಟನೆ ಕಾರ್ಯಕ್ರಮ ನವೆಂಬರ್ 2ರಂದು ಸಂಜೆ 4 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ನಡೆಯಲಿದೆ.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ ಎಸ್.ಒಡೇನಪುರ ಮಾತನಾಡಿ, ತಮ್ಮ ಅಧ್ಯಕ್ಷತೆಯ ಕಾರ್ಯಕ್ರಮವನ್ನು ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಕಸಾಪ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ ಪಾಲ್ಗೊಳ್ಳಲಿದ್ದಾರೆ ಎಂದರು.

ಕನ್ನಡ ರಾಜ್ಯೋತ್ಸವ ಅಂಗವಾಗಿ ಜಿಲ್ಲೆಯ ರಾಜ್ಯ ಸರ್ಕಾರಿ ನೌಕರರು, ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಕನ್ನಡ ನಾಡಿನ ಹಿರಿಮೆ, ಭಾಷಾಭಿಮಾನ ಪ್ರತಿಬಿಂಬಿಸುವ ಗೀತೆಗಳ ಸಮೂಹ ನೃತ್ಯ ಸ್ಪರ್ಧೆಯನ್ನು ಆಯೋಜಿಸಲಾಗಿದೆ. 16 ವರ್ಷ ಮೇಲ್ಪಟ್ಟವರು ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದ್ದು, ಹೆಸರು ನೋಂದಾಯಿಸಲು ಅ.31 ಕೊನೆಯ ದಿನವಾಗಿದೆ. ವಿಜೇತ ತಂಡಗಳಿಗೆ ಪ್ರಥಮ ಬಹುಮಾನ 25,000 ರೂ., ದ್ವಿತೀಯ ಬಹುಮಾನ 15,000 ರೂ., ತೃತೀಯ ಬಹುಮಾನವಾಗಿ 10,000 ರೂ. ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ:97405 04646 ಸಂಪರ್ಕಿಸುವಂತೆ ಅವರು ಮನವಿ ಮಾಡಿದರು.

ಸಾಹಿತ್ಯ ಪರಿಷತ್ತಿನ ಬಿ.ವಾಮದೇವಪ್ಪ, ಬಿ.ದಿಳ್ಳೆಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ಬಿ.ಪಾಲಾಕ್ಷಿ, ತಿಪ್ಪೇಸ್ವಾಮಿ, ಓಬಳಪ್ಪ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ಜನಾಂಗೀಯ ದ್ವೇಷ; ಬ್ರಿಟನ್‌ನಲ್ಲಿ ಭಾರತೀಯ ಮೂಲದ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ

**ಲಂಡನ್:** ಯುನೈಟೆಡ್ ಕಿಂಗ್‌ಡಮ್‌ನ (ಯುಕೆ) ವೆಸ್ಟ್ ಮಿಡ್‌ಲ್ಯಾಂಡ್ಸ್‌ನಲ್ಲಿ 20 ವರ್ಷದ ಭಾರತೀಯ ಮೂಲದ ಮಹಿಳೆಯ ಮೇಲೆ ಅತ್ಯಾಚಾರ ನಡೆದಿದೆ ಎಂದು ಆರೋಪಿಸಲಾಗಿದೆ.

ವೆಸ್ಟ್ ಮಿಡ್‌ಲ್ಯಾಂಡ್ಸ್ ಪೊಲೀಸರ ಪ್ರಕಾರ, ಮಹಿಳೆಯ ಜನಾಂಗೀಯ ದ್ವೇಷದ ಹಿನ್ನಲೆ ಈ ದೌರ್ಜನ್ಯ ನಡೆಸಲಾಗಿದೆ. ಇದು ಯುವತಿಯ ಮೇಲೆ ನಡೆದ ಅತ್ಯಂತ ಭಯಾನಕ ದಾಳಿಯಾಗಿದ್ದು, ಇದಕ್ಕೆ ಕಾರಣರಾದ ವ್ಯಕ್ತಿಯನ್ನು ಬಂಧಿಸಲು ನಾವು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದ್ದೇವೆ" ಎಂದು ವೆಸ್ಟ್ ಮಿಡ್‌ಲ್ಯಾಂಡ್ಸ್ ಪೊಲೀಸರ ತನಿಖೆಯನ್ನು ನೋಡಿಕೊಳ್ಳುತ್ತಿರುವ ಪತ್ತೇದಾರಿ ಸೂಪರಿಂಟೆಂಡೆಂಟ್ (ಡಿಎಸ್) ರೊನಾನ್ ಟೈರರ್ ಹೇಳಿದ್ದಾರೆ.

## ದೇಶದಲ್ಲಿ ರಾಷ್ಟ್ರೀಯ ಭಗತ್ ಸಿಂಗ್ ಎಂಪ್ಲಾಯ್‌ಮೆಂಟ್ ಗ್ಯಾರಂಟಿ ಆಕ್ಟ್ ಜಾರಿಯಾಗಲಿ : ಸಂತೋಷ್ ಆಗ್ರಹ

**ದಾವಣಗೆರೆ:** ದೇಶದಲ್ಲಿ ರಾಷ್ಟ್ರೀಯ ಭಗತ್ ಸಿಂಗ್ ಎಂಪ್ಲಾಯ್‌ಮೆಂಟ್ ಗ್ಯಾರಂಟಿ ಆಕ್ಟ್ ಜಾರಿಯಾಗಲಿ ಎಂದು ಎಐವೈಎಫ್ ರಾಜ್ಯ ಕಾರ್ಯದರ್ಶಿ ಹೆಚ್. ಎಂ. ಸಂತೋಷ್ ಆಗ್ರಹಿಸಿದರು.

ನಗರದ ಕಾಂ. ಪಂಪಾಪತಿ ಭವನದಲಿ ನಡೆದ ಅಖಿಲ ಭಾರತ ಯುವಜನ ಫೆಡರೇಶನ್‌ನ 11ನೇ ಜಿಲ್ಲಾ ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿನ ಭಗತ್ ಸಿಂಗ್, ರಾಜಗುರು, ಸುಖದೇವ್ ಅವರ ಕನಸುಗಳನ್ನು ಸಕಾರ ಗೊಳಿಸಬೇಕು. ದೇಶದಲ್ಲಿ ಧರ್ಮ, ಕೋಮುವಾದ, ಸಾಂಸ್ಕೃತಿಕ ಚಟುವಟಿಕೆಗಳ ಮೇಲೆ ದಬ್ಬಾಳಿಕೆ ನಡೆಸುತ್ತಾ, ಬಂಡವಾಳ ಶಾಹಿ ವ್ಯವಸ್ಥೆ ಪ್ರಭುತ್ವ ಸಾಧಿಸುತ್ತಿದ್ದು, ಬಂಡವಾಳ ಶಾಹಿ, ವೈದಿಕ ಶಾಹಿ ವ್ಯವಸ್ಥೆಯಿಂದ ಯುವ ಜನಾಂಗ ಜಾಗೃತಗೊಂಡು ಸಂವಿಧಾನಬದ್ಧ ಹಕ್ಕುಗಳಿಗಾಗಿ ಸಂಘಟಿ–ತ ಹೋರಾಟ ಮಾಡುವುದು ಅನಿವಾರ್ಯ




ಎಂದು ಕರೆ ನೀಡಿದರು.

ಸರ್ಕಾರಿ ಸ್ವಾಮ್ಯದಲ್ಲಿನ ಕಂಪನಿಗಳು ಖಾಸಗಿಕರಣ ಗೊಳ್ಳುತ್ತಿವೆ, ಇದರಿಂದ ಸಾರ್ವಜನಿಕ ಕ್ಷೇತ್ರದಲ್ಲಿ ಉದ್ಯೋಗ ಭದ್ರತೆಗೆ ಕೊಡಲಿ ಪೆಟ್ಟು ಬೀಳುತ್ತಿದೆ. ಸರ್ಕಾರಿ ಶಾಲೆ, ಆಸ್ಪತ್ರೆ, ರೈಲ್ವೆ ಬ್ಯಾಂಕ್ ಕ್ಷೇತ್ರಗಳನ್ನು ಖಾಸಗಿಕರಣದಿಂದ ತಪ್ಪಿಸಬೇಕು, ದಾವಣಗೆರೆಯಲ್ಲಿ ಒಂದು ಕಾಲದಲ್ಲಿ ಸಾರ್ವಜನಿಕ ಕಂಪನಿಗಳಿಂದ ಬಡವರು ಬದುಕು ಕಟ್ಟಿಕೊಂಡಿದ್ದ ಇತಿಹಾಸವಿದೆ. ಪ್ರಸಕ್ತ ಆಡಳಿತ ವ್ಯವಸ್ಥೆಯಿಂದ ಯುವಕರ ಬದುಕು ಬೀದಿಗೆ ಬೀಳುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸನಾತನ ಧರ್ಮದ ಸಂಸ್ಕೃತಿಯ ಮೇಲೆ, ದೇಶ ಕಟ್ಟುವುದು ದೇಶಪ್ರೇಮವಲ್ಲ. ಮಹಿಳೆಯರಿಗೆ ಸಮಾನತೆ, ಬಹುತ್ವ ಉಳಿಸುವುದು, ರೈತರ ಬೆಳೆಗೆ ಸೂಕ್ತ ಬೆಂಬಲ ಬೆಲೆ ನೀಡುವುದು ಯುವ ಜನರಿಗೆ ಉದ್ಯೋಗ ಭದ್ರತೆ ನೀಡುವುದು ದೇಶಪ್ರೇಮವಾಗಿದೆ. ದೇಶದಲ್ಲಿ ಸಂಘ ಪರಿವಾರದವರ ಮಕ್ಕಳು ಉನ್ನತ ವ್ಯಾಸಂಗ, ಐಶಾರಾಮಿ ಜೀವನ ಸಾಗಿಸುತ್ತಿದ್ದರೆ, ಕೋಮುವಾದ ಧರ್ಮಾಂಧತೆಯಲ್ಲಿ ಸಿಲುಕಿ ಬಡವರ ಮಕ್ಕಳು ದಿವಾಳಿಯಾಗು ತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಕಮುನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿ ಆವರಗೆರೆ ಚಂದ್ರು ಯುವಕರು ಬದುಕಿನ ಹಕ್ಕಿಗಾಗಿ ಹೋರಾಟ ಮನೋಭಾವ ಮೈಗೂಡಿಸಿಕೊಳ್ಳಬೇಕಿದೆ. ಸಮಾಜದಲ್ಲಿನ ಅಶಾಂತಿ, ಅಸಮಾನತೆ, ನಿರುದ್ಯೋಗ ತಾಂಡವ ವಾಡುತ್ತಿದ್ದು, ಸಂಘಟಿತ ಹೋರಾಟ ನಡೆಸಬೇಕಿದೆ. ರಾಜಕೀಯ ಪ್ರಜ್ಞೆ ಅಳವಡಿಸಿಕೊಂಡು ದೇಶದ ಹಿತ ಕಾಯುವ ಪಕ್ಷವನ್ನು ಆಡಳಿತಕ್ಕೆ ತರಬೇಕು ಎಂದು ಕರೆ ನೀಡಿದರು.

ದೇಶದಲ್ಲಿ ಕೇಂದ್ರದಲ್ಲಿನ ಬಿಜೆಪಿ ಆಡಳಿತ ಸರ್ಕಾರ ಚುನಾವಣೆ ವೇಳೆ ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿಯ ಭರವಸೆ ಹುಸಿಯಾಗಿದೆ. ಬಡ, ಶೋಷಿತ, ಮಹಿಳೆ, ರೈತ ಕಾರ್ಮಿಕರ, ವಿದ್ಯಾರ್ಥಿ ಯುವಜನರ ಹಕ್ಕುಗಳನ್ನು ಕಸಿಯುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

ಕಾಂ. ಸುರೇಶ್, ಕಾಂ. ಶೇಖರಪ್ಪ, ಕಾಂ. ಪಂಪಾಪತಿ ರೈತ ಕಾರ್ಮಿಕರ ಕಲ್ಯಾಣ ಅಭಿವೃದ್ಧಿ ಟ್ರಸ್ಟ್‌ನ ಖಜಾಂಚಿ ಎಲ್ಲಪ್ಪ ಧ್ವಜಾರೋಹಣ ನೆರವೇರಿಸಿದರು. ಇಪ್ಟಾ ರಾಜ್ಯ ಕಾರ್ಯದರ್ಶಿ ಪಿ. ಷಣ್ಮುಖ ಸ್ವಾಮಿ, ಎಐಡಿಆರ್‌ಎಂವಿ ಜಿಲ್ಲಾ ಗೌರವಾಧ್ಯಕ್ಷ ವಿ. ಲಕ್ಷ್ಮಣ, ಮಹಿಳಾ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಸರೋಜಾ, ಕೃಷಿ ಕಾರ್ಮಿಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಗಾ ರಂಗನಾಥ, ಅಖಿಲ ಭಾರತ ಕಿಸಾನ್ ಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಐರಣಿ ಚಂದ್ರು, ಎಐಎಸ್‌ಎಫ್ ಸಂಘಟನೆ ಜಿಲ್ಲಾಧ್ಯಕ್ಷ ಮಾದಿಹಳ್ಳಿ ಮಂಜುನಾಥ, ಇಪ್ಟಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ. ಬಾನಪ್ಪ ವೇದಿಕೆಯಲ್ಲಿದ್ದು ಮಾತನಾಡಿ ಸಮ್ಮೇಳನಕ್ಕೆ ಶುಭ ಹಾರೈಸಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ಪೋಷಕರ ಆರೋಗ್ಯ ಸುಧಾರಿಸುತ್ತದೆ ಮತ್ತು ಅವರು ನಿಮ್ಮ ಮೇಲೆ ಪ್ರೀತಿಯ ಮಳೆಗೈಯುತ್ತಾರೆ. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ವೃಷಭ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ.

### ಮಿಥುನ ರಾಶಿ

ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ. ಕಬ್ಬಿಣ ಬಿಸಿಯಿದ್ದಾಗಲೇ ನಾವು ಬಡಿಯಬೇಕೆಂದು ನೆನಪಿಡಿ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ. ಕಲೆ ಮತ್ತು ರಂಗಭೂಮಿಯ ಜೊತೆ ಸಂಪರ್ಕ ಹೊಂದಿರುವವರು ಸೃಜನಶೀಲವಾಗಿ ಅತ್ಯುತ್ತಮವಾದದ್ದನ್ನು ನೀಡಲು ಹೊಸ ಅವಕಾಶಗಳನ್ನು ಪಡೆಯುತ್ತಾರೆ.

### ಸಿಂಹ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಇಂದು ನೀವು ಎಂತಹ ಒಳ್ಳೆಯ ಕೆಲಸ ಮಾಡಿದ್ದೀರೆಂದು ತೋರಿಸಲು ನಿಮ್ಮ ಪ್ರೀತಿ ಅರಳುತ್ತದೆ. ಕೆಲಸದ ಸ್ಥಳದಲ್ಲಿ ನೀವು ಉತ್ತಮವಾಗಿ ಮಾಡಲು ಬಯಸಿದರೆ, ನಿಮ್ಮ ಕೆಲಸದಲ್ಲಿ ಆಧುನಿಕತೆಯನ್ನು ತರಲು ಪ್ರಯತ್ನಿಸಿ

### ಕನ್ಯಾ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ಸಂತೋಷಕ್ಕಾಗಿ ಹೊಸ ಸಂಬಂಧವನ್ನು ಎದುರುನೋಡಬಹುದು ನಿಮ್ಮ ಗುರಿಗಳೆಡೆಗೆ ಸದ್ದಿಲ್ಲದೆ ಕೆಲಸ ಮಾಡಿ ಮತ್ತು ನೀವು ಯಶಸ್ಸನ್ನು ಸಾಧಿಸುವ ಮುನ್ನ ನಿಮ್ಮ ಉದ್ದೇಶಗಳನ್ನು ಬಯಲು ಮಾಡಬೇಡಿ.

### ತುಲಾ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು.

### ವೃಶ್ಚಿಕ ರಾಶಿ

ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.
ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ. ಇಂದು ಮಾಡಿದ ಜಂಟಿ ಯೋಜನೆಗಳು ಕೊನೆಗೂ ಪ್ರಯೋಜನಕಾರಿಯಾದರೂ, ನೀವು ಪಾಲುದಾರರಿಂದ ಕೆಲವು ಪ್ರಮುಖ ವಿರೋಧವನ್ನು ಎದುರಿಸಬೇಕಾಗುತ್ತದೆ.

### ಧನು ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮಕರ ರಾಶಿ

ನೀವು ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು ಮತ್ತು ನಿಮ್ಮ ಭಯವನ್ನು ಸಾಧ್ಯವಾದಷ್ಟೂ ಬೇಗ ತೊಡೆದುಹಾಕಬೇಕು ಏಕೆಂದರೆ ಇವು ತಕ್ಷಣವೇ ನಿಮ್ಮ ಆರೋಗ್ಯವನ್ನು ಬಾಧಿಸಬಹುದು ಮತ್ತು ಒಳ್ಳೆಯ ಆರೋಗ್ಯವನ್ನು ಅನುಭವಿಸುವ ನಿಮ್ಮ ಹಾದಿಯಲ್ಲಿ ಅಡ್ಡ ಬರಬಹುದು.
ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

### ಕುಂಭ ರಾಶಿ

ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ.
ಸ್ನೇಹಿತರು ಹಾಗೂ ಕುಟುಂಬದ ಸದಸ್ಯರೊಡನೆ ಒಂದು ಸಂಜೆಯನ್ನು ಆಯೋಜಿಸಿ. ಪ್ರೀತಿಯಲ್ಲಿ ನಿರಾಶೆ ನಿಮ್ಮನ್ನು ಕಂಗೆಡಿಸುವುದಿಲ್ಲ. ಕೆಲವರಿಗೆ ಅರೆಕಾಲಿಕ ಉದ್ಯೋಗಗಳು.

### ಮೀನ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷ ಕೂಟವನ್ನುಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

# ಅಭಿವೃದ್ಧಿಯೊಂದಿಗೆ ರೈತರ ಬದುಕು ಹಸನು ಮಾಡುವ ಕಾರ್ಯ



**ಚಿಕ್ಕಮಗಳೂರು:** ಭದ್ರ ಉಪ ಕಣಿವೆ ಯೋಜನೆಯ ಮೂರನೇ ಹಂತದ ಕಾಮಗಾರಿಗೆ ನವೆಂಬರ್ ತಿಂಗಳ ಅಂತ್ಯಕ್ಕೆ ಶಂಕುಸ್ಥಾಪನೆ ನೆರವೇರಿಸುತ್ತೇವೆ. ಈ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಡಿ.ಕೆ. ಶಿವಕುಮಾರ್ ಸೇರಿದಂತೆ ವಿವಿಧ ಸಚಿವರು ಉಪಸ್ಥಿತರಿರಲಿದ್ದಾರೆ ಎಂದು ಶಾಸಕ ಎಚ್.ಡಿ. ತಮ್ಮಯ್ಯ ತಿಳಿಸಿದರು.

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಈಶ್ವರ ಹಳ್ಳಿ ಹಾಗೂ ಕಳಸಾಪುರ ಕೆರೆಗೆ ಬಾಗಿನ ಅರ್ಪಣೆ ಮಾಡಿ ಮಾತನಾಡಿದ ಅವರು, ಇನ್ನು ಎರಡು ವರ್ಷದ ಒಳಗಾಗಿ ರಣಘಟ್ಟ ಯೋಜನೆ ಪೂರ್ಣಗೊಳಿಸಿ ಕೆರೆಗಳಿಗೆ ನೀರು ಹರಿಸುತ್ತೇವೆ. ಇದರೊಂದಿಗೆ ಭದ್ರ ಉಪಕರಣಗಳು ಯೋಜನೆಯ ಮೂರನೇ ಹಂತದ ಕಾಮಗಾರಿ ಪೂರ್ಣಗೊಂಡಲ್ಲಿ ಎಲ್ಲಾ ಕೆರೆಗಳನ್ನು ಪ್ರತಿ ವರ್ಷ ತುಂಬಿಸಬಹುದು ಎಂದು ಅಭಿಪ್ರಾಯಪಟ್ಟರು.

ಗಾಳಿ, ನೀರು, ಭೂಮಿಯನ್ನು ತಾಯಿಗೆ ಹೋಲಿಸಿ ಪೂಜೆ ಮಾಡುವುದು ಭಾರತದಲ್ಲಿ ಮಾತ್ರ. ಹಿಂದಿನಿಂದಲೂ ನಮ್ಮ ಹಿರಿಯರು ಈ ಸಂಸ್ಕಾರ ಬೆಳೆಸಿಕೊಂಡು ಬಂದಿದ್ದಾರೆ. ಹೀಗಾಗಿಯೇ ಇಂದು ನಾವು ತುಂಬಿದ ಕೆರೆಗಳಿಗೆ ಬಾಗಿನ ಅರ್ಪಣೆ ಮಾಡುತ್ತಿದ್ದೇವೆ. ಇಡೀ ಪ್ರಪಂಚದಲ್ಲಿ ಕೃಷಿಯನ್ನೇ ಅವಲಂಬಿಸಿರುವ ದೇಶ ಯಾವುದಾದರೂ ಇದ್ದರೆ ಅದು ಭಾರತ ಮಾತ್ರ. ಕೃಷಿ ಎಂದರೆ ರೈತ. ರೈತ ಎಂದರೆ ಕೃಷಿ. ರೈತನೇ ನಮ್ಮ ದೇಶದ ಬೆನ್ನೆಲುಬು. ಹೀಗಾಗಿ ರೈತರ ಶ್ರೇಯೋಭಿವೃದ್ಧಿಗಾಗಿ ಪ್ರತಿಯೊಬ್ಬ ಜನ ಪ್ರತಿನಿಧಿಗಳು ಶ್ರಮಿಸಬೇಕು ಎಂದು ಹೇಳಿದರು.

ಮಳೆ ಬಂದ ಸಂದರ್ಭದಲ್ಲಿ ಕರಗಡ ಯೋಜನೆ ಮೂಲಕ ಈಶ್ವರಹಳ್ಳಿ ಹಾಗೂ ಕಳಸಾಪುರ ಭಾಗದ ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ಈ ಯೋಜನೆಗಾಗಿ ಮಲ್ಲಿಕಾರ್ಜುನ ಧರ್ಮೇಗೌಡ, ಸಿ.ಟಿ.ರವಿ, ಗಾಯತ್ರಿ ಶಾಂತೇಗೌಡ ಅವರ ಕೊಡುಗೆ ದೊಡ್ಡ ಮಟ್ಟದಲ್ಲಿ ಇದೆ. ಕರಗಡ ಯೋಜನೆಯಿಂದ ಕೇವಲ 3 ಕೆರೆಗಳನ್ನು ಮಾತ್ರ ತುಂಬಿಸಲು ಸಾಧ್ಯ. ಆದರೆ ಎತ್ತಿನಹೊಳೆ ಯೋಜನೆಯಿಂದಾಗಿ ದೇವನೂರು ಹಾಗೂ ಬೆಳವಡಿ ಭಾಗದ ಕೆರೆಗಳು ಭರ್ತಿಯಾಗಿವೆ. ರಣಘಟ್ಟ ಹಾಗೂ ಭದ್ರ ಉಪಕಣಿವೆ ಯೋಜನೆಗಳು ಪೂರ್ಣಗೊಂಡಲ್ಲಿ ಈ ಭಾಗದಲ್ಲಿ ಬರಗಾಲದ ಪ್ರಶ್ನೆಯೇ ಬರುವುದಿಲ್ಲ ಎಂದರು.

ದೇವಿ ಕೆರೆಯ ನಾಲೆ ಸರಿಯಾಗಿ ಇಲ್ಲದಿರುವ ಕಾರಣದಿಂದಾಗಿ ಕೆರೆ ಭರ್ತಿಯಾಗುತ್ತಿಲ್ಲ. ಹೀಗಾಗಿ ಕಟ್ಟಿನ ಹೊಳೆಯಿಂದ ದೇವಿಕೆರೆ ವರೆಗೆ ನೀರು ಹರಿಸಲು ನೂತನ ಕಾಲುವೆ ನಿರ್ಮಾಣಕ್ಕಾಗಿ ಸರ್ಕಾರ 9.9 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ಈ ಕಾಮಗಾರಿ ಪೂರ್ಣಗೊಂಡ ಬಳಿಕ ದೇವಿಕೆರೆಯು ಭರ್ತಿಯಾಗಲಿದೆ ಎಂದು ಮಾಹಿತಿ ನೀಡಿದರು.

ರಾಜ್ಯ ಸರ್ಕಾರ ಅಭಿವೃದ್ಧಿ ರಥದ ಜೊತೆ ಜೊತೆಗೆ ರೈತರ ಬಾಳನ್ನು ಹಸನು ಮಾಡುವ ರಥವನ್ನು ಎಳೆಯುತಿದೆ. ನಾನೂ ಸಹ ನೀರಾವರಿ ಯೋಜನೆಗಳು ಶಾಶ್ವತವಾಗಿರಬೇಕು ಎಂಬ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇನೆ. ಜನಪ್ರತಿನಿಧಿಗಳು ಯಾವಾಗಲೂ ರೈತರ ಪರವಾಗಿ ಕೆಲಸ ಮಾಡಬೇಕು. ನಾವು ಮಾಡಿದ ಪುಣ್ಯ ನಮ್ಮ ಖಾತೆಗೆ ಸೇರುತ್ತದೆ ಎಂಬುದನ್ನು ಮನಗಾಣಬೇಕು ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿ, ಪ್ರಕೃತಿಗೆ ನಮಿಸುವುದು ಹಾಗೂ ಸ್ಮರಿಸುವುದು ಭಾರತೀಯ ಸನಾತನ ಸಂಸ್ಕೃತಿಯ ಒಂದು ಭಾಗ. ಕರಗಡ ಏತ ನೀರಾವರಿ ಯೋಜನೆಯಿಂದ ಕೆರೆ ತುಂಬಿಸುವ ಯೋಜನೆ ಜಾರಿ ಮಾಡಿದ್ದೇವೆ. ಈ ಯೋಜನೆಯನ್ನು ಸರಿಯಾಗಿ ನಿರ್ವಹಣೆ ಮಾಡಿ ನೀರು ಹರಿಸಿದರೆ ಕೇವಲ 35 ದಿನಗಳಲ್ಲಿ ಈ ಕೆರೆಗಳು ಭರ್ತಿಯಾಗುತ್ತಿದ್ದವು. ಆದರೆ ಸರಿಯಾಗಿ ನಿರ್ವಹಣೆ ಮಾಡದ ಕಾರಣದಿಂದಾಗಿ ಅಕ್ಟೋಬರ್ ತಿಂಗಳ ಕೊನೆಗೆ ಕೆರೆ ತುಂಬಿದೆ. ಅದು ಮಳೆಯ ಕಾರಣದಿಂದಾಗಿ. ಒಂದು ವೇಳೆ ಮಳೆ ಬಾರದೆ ಇದ್ದಿದ್ದಲ್ಲಿ ಇಂದು ಕೆರೆಗೆ ಬಾಗಿನ ಅರ್ಪಣೆ ಮಾಡಲು ಸಾಧ್ಯವಾಗುತ್ತಿರಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಈಶ್ವರ ಹಳ್ಳಿ ಹಾಗೂ ಕಳಸಾಪುರ ಭಾಗಗಳಿಗೆ 2018 ರಿಂದ 23ರ ವರೆಗೆ 65 ಕೋಟಿ ರೂ ವೆಚ್ಚದಲ್ಲಿ ವಿವಿಧ ಕಾಮಗಾರಿ ಮಾಡಿದ್ದೇವೆ. ಮಾಗಡಿ-ಜಾವಗಲ್ ರಸ್ತೆಯನ್ನು 25 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಮಾಡಿದ್ದೇವೆ ಎಂದು ಮಾಹಿತಿ ನೀಡಿದರು.

1281 ಕೋಟಿ ರೂ. ವೆಚ್ಚದಲ್ಲಿ ಭದ್ರಾ ನದಿಯಿಂದ ಕೆರೆಗಳಿಗೆ ನೀರು ತುಂಬಿಸುವ ಭದ್ರಾ ಉಪಕಣಿವೆ ಯೋಜನೆ ಆರಂಭಿಸಲಾಗಿದೆ. ಮೊದಲ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ. ಇದೀಗ ಮೂರನೇ ಹಂತದ ಕಾಮಗಾರಿಗೆ ಟೆಂಡರ್ ಅಂತಿಮಗೊಂಡಿದೆ. ಇನ್ನು ರಣಘಟ್ಟ ಯೋಜನೆಯಲ್ಲಿ 900 ಮೀಟರ್ ಟನಲ್ ಕಾಮಗಾರಿ ಬಾಕಿ ಇದೆ ಎಂದು ವಿವರಿಸಿದರು.

ಬಾಗಿನ ಅರ್ಪಣೆ ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಅಧ್ಯಕ್ಷೆ ರೇಖಾ ಹುಲಿಯಪ್ಪ ಗೌಡ, ಬೆಳವಾಡಿ ರವೀಂದ್ರ, ಈಶ್ವರಹಳ್ಳಿ ಮಹೇಶ್, ಪ್ರಮುಖರಾದ ಶಂಕರನಾಯ್ಕ, ಕೆಂಗೇಗೌಡ, ಅಚ್ಚುತರಾಯರು, ಅಮೀರ್, ಮಧು, ಯೋಗೀಶ್, ಶಿವಮ್ಮ, ಚಂದ್ರಶೇಖರ್ ಮತ್ತಿತರರಿದ್ದರು.

## ಆರ್.ಎಸ್.ಎಸ್ ಕಾರ್ಯಕರ್ತರ ಪಥ ಸಂಚಲನ



**ಚನ್ನಗಿರಿ:** ಪಟ್ಟಣದ ತಾಲೂಕು ಕ್ರೀಡಾಂಗಣದಿಂದ ಹೊರಟ ಗಣವೇಷಧಾರಿಗಳು ಚನ್ನಗಿರಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಶಿಸ್ತಿನೊಂದಿಗೆ ಸಂಚರಿಸಿ ನಂತರ ತಾಲೂಕು ಕ್ರೀಡಾಂಗಣಕ್ಕೆ ತೆರಳಿ ಭಗವಾಧ್ವಜಕ್ಕೆ ನಮಿಸಿದರು. ಈ ಸಂದರ್ಭದಲ್ಲಿ ಆರ್.ಎಸ್.ಎಸ್. ಜಿಲ್ಲಾ ಪ್ರಮುಖ್ ಹರೀಶ್, ತಾಲೂಕು ಕಾರ್ಯವಾಹ ಮಧುಸೂದನ್‌ರಾವ್, ಜಿಲ್ಲಾ ಸಹಪ್ರಚಾರಕ್ ದಿನೇಶ್, ಸಂಘಚಾಲಕ್ ಚನ್ನಬಸಪ್ಪ ಮತ್ತು ಪ್ರಮುಖರು ಬಾಗವಹಿಸಿದ್ದರು. ಆರ್.ಎಸ್.ಎಸ್.ನ ಪಥಸಂಚಲನ ಕಾರ್ಯಕ್ರಮದಲ್ಲಿ ಬಿಗಿ ಪೋಲಿಸ್ ಬಂದೋಬಸ್ತ್ ಮಾಡಲಾಗಿತ್ತು.

## ಪಡೆದ ಸಾಲ ತಿರುವಳಿ ಮಾಡಿದ್ದರೂ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಬೆದರಿಕೆ

**ದಾವಣಗೆರೆ:** ಕಳೆದ 2018ರಲ್ಲಿ ನನ್ನ ಮದುವೆಗೆಂದು ಸಾಲ ಪಡೆದಿದ್ದ ಹಣವನ್ನು ಸಂಪೂರ್ಣವಾಗಿ ಹಿಂದುರುಗಿಸಿದರೂ ಈಗ ಹಣ ನೀಡಿಲ್ಲ ಎಂದು ಆರೋಪಿಸಿ ನನ್ನ ಮೇಲೆ ಸುಳ್ಳು ಚೆಕ್ ಬೌನ್ಸ್ ಕೇಸ್ ದಾಖಲು ಮಾಡಲಾಗಿದೆ ಎಂದು ವಂಚನೆಗೆ ಒಳಗಾದ ಸಂಗಾಹಳ್ಳಿ ಗ್ರಾಮದ ಎಸ್.ಬಿ.ಅಶೋಕ ದೂರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಚಿರಡೋಣಿ ಗ್ರಾಮದ ಕೆ.ಹಂಸತಾರಕಂ ಅವರಿಂದ ನಾನು ಈ ಹಿಂದೆ 2018ರಲ್ಲಿ ನನ್ನ ವಿವಾಹಕ್ಕೋಸ್ಕರ ಪಡೆದ ಒಂದು ಲಕ್ಷದ ಸಾಲದ ಹಣವನ್ನು ಮರು ಪಾವತಿ ಮಾಡಿದ್ದರೂ ಸಹ ಭದ್ರತೆಗಾಗಿ ನೀಡಿದ್ದ ನನ್ನ ಚೆಕ್ ವಾಪಾಸ್ಸು ಕೊಡದೇ ಇಟ್ಟುಕೊಂಡು ಕೆ.ಹಂಸತಾರಕಂ ಅವರು ಇದೀಗ ನನ್ನ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಬೆದರಿಕೆ ಹಾಕುತ್ತಿದ್ದಾರೆ ಎಂದು ದೂರಿದರು.

ಕೆ.ಹಂಸತಾರಕಂ ತನಗೆ ಯಾವುದೋ ಹಣ ಬಂದಿದ್ದು, ನಿನ್ನ ಖಾತೆಗೆ ಹಾಕುತ್ತೇನೆ. ನಂತರ ನನ್ನ ಹಣವನ್ನು ಬಿಡಿಸಿಕೊಡು ಅಂದು ನಂತರ ನನ್ನ ಖಾತೆಗೆ 5ಲಕ್ಷಕ್ಕೂ ಹೆಚ್ಚು ಹಣ ಹಾಕಿದ್ದರು. ಅದನ್ನು ಬಿಡಿಸಿಕೊಟ್ಟಿದ್ದೇನೆ. ನಾನು ಪಡೆದ ಸಾಲದ ಹಣಕ್ಕೆ ಭದ್ರತೆ ಉದ್ದೇಶಕ್ಕೆ ನೀಡಲಾಗಿದ್ದ ಚೆಕ್ ಇಟ್ಟುಕೊಂಡು ನನ್ನ ಮೇಲೆ ದೌರ್ಜನ್ಯ ಮಾಡುತ್ತಿದ್ದಾರೆ. ಈ ಬಗ್ಗೆ ಹಲವಾರು ಬಾರಿ ನನ್ನ ಚೆಕ್ ಕೇಳಿದರೂ ಅದನ್ನು ನನ್ನ ಮಗ ಸುಟ್ಟು ಹಾಕಿರುತ್ತಾನೆ ಎಂದು ಸುಳ್ಳು ಹೇಳಿ ಈಗ ಅದೇ ಚೆಕ್ಕನ್ನು ಬ್ಯಾಂಕ್‌ಗೆ ಹಾಜರುಪಡಿಸಿ ನನ್ನ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹಾಕುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಅಳಲು ತೋಡಿಕೊಂಡರು.

ಇದಲ್ಲದೇ ನೊಂದಾಯಿತ ಅಂಚೆ ಮೂಲಕ ಈ ಹಿಂದೆ ನೀಡಿದ ಚೆಕ್ ಆಧಾರದ ಮೇಲೆ ನನಗೆ ರೂ.5,05,000 ಗಳನ್ನು ಕೊಡಬೇಕು, ಇಲ್ಲವಾದಲ್ಲಿ ನಿನ್ನ ವಿರುದ್ಧ ಸೂಕ್ತ ಕ್ರಿಮಿನಲ್ ಮೊಕದ್ದಮೆ ನೀಡುತ್ತೇನೆ ಎಂದು ನೋಟೀಸ್ ನೀಡಿರುತ್ತಾರೆ. ಹಾಗಾಗಿ ಸಂಬಂಧಿಸಿದ ಅಧಿಕಾರಿಗಳು ಕೆ.ಹಂಸತಾರಕಂ ವಿರುದ್ಧ ಸೂಕ್ತ ಕಾನೂನು ಕೈಗೊಂಡು, ನನಗೆ ನ್ಯಾಯ ದೊರಕಿಸಿಕೊಡಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನೊಂದ ವ್ಯಕ್ತಿಯ ಪತ್ನಿ ಕಾವ್ಯ, ಸಂಗಾಹಳ್ಳಿಯ ಬೀರಪ್ಪ, ಮಂಜಮ್ಮ ಇತರರು ಇದ್ದರು.

### ಖೋ ಖೋ ಚಾಂಪಿಯನ್ ಷಿಪ್: ಕರ್ನಾಟಕ ಮತ್ತು ಕೇರಳಕ್ಕೆ ಪ್ರಶಸ್ತಿ

## ಡಿಸೆಂಬರ್ ಅಥವಾ ಮಾರ್ಚ್‌ನಲ್ಲಿ ರಾಷ್ಟ್ರಮಟ್ಟದ ಖೋ ಖೋ ಪಂದ್ಯಾವಳಿ: ದಿನೇಶ್ ಕೆ.ಶೆಟ್ಟಿ



**ದಾವಣಗೆರೆ:** ಡಿಸೆಂಬರ್ ಅಥವಾ ಮಾರ್ಚ್‌ನಲ್ಲಿ ದಾವಣಗೆರೆಯಲ್ಲಿ ರಾಷ್ಟ್ರಮಟ್ಟದ ಖೋ ಖೋ ಪಂದ್ಯಾವಳಿಯನ್ನು ಆಯೋಜಿಸಲಾಗುವುದು ಎಂದು ದಾವಣಗೆರೆ ಜಿಲ್ಲಾ ಖೋ ಖೋ ಸಂಸ್ಥೆಯ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಅವರು ತಿಳಿಸಿದರು.

ಅವರಿಂದು ದಾವಣಗೆರೆ ಜಿಲ್ಲಾ ಕ್ರಿಡಾಂಗಣದಲ್ಲಿ ಆಯೋಜಿಸಿರುವ 31ನೇ ದಕ್ಷಿಣ ಭಾರತ ಮಟ್ಟದ ಪುರುಷ ಮತ್ತು ಮಹಿಳೆಯರ ಖೋ ಖೋ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ದಾವಣಗೆರೆಯಲ್ಲಿ ಪ್ರತಿ ಕ್ರೀಡಾಕೂಟವನ್ನು ಪ್ರೋತ್ಸಾಹಿಸುತ್ತಾ ಬಂದಿರುವ ಡಾ॥ ಶಾಮನೂರು ಶಿವಶಂಕರಪ್ಪನವರು ಮತ್ತು ಎಸ್.ಎಸ್.ಮಲ್ಲಿಕಾರ್ಜುನ್ ಅವರು ಖೋ ಖೋ ರಾಷ್ಟ್ರಮಟ್ಟದ ಪಂದ್ಯಾವಳಿಗೂ ಸಹಕಾರ ನೀಡುವರು ಎಂದರು.

ಖೋ ಖೋ ಪಂದ್ಯಾವಳಿಯ ಮಹಿಳೆಯರ ವಿಭಾಗದಲ್ಲಿ ಕರ್ನಾಟಕ ಮೊದಲ ಸ್ಥಾನ ಪಡೆದರೆ, ಕೇರಳ ದ್ವಿತೀಯ ಸ್ಥಾನ, ತಮಿಳುನಾಡು ತೃತೀಯ ಸ್ಥಾನ ಪಡೆಯಿತು. ಪುರುಷರ ವಿಭಾಗದಲ್ಲಿ ಕೇರಳ ಮೊದಲ ಸ್ಥಾನ ಪಡೆದರೆ, ಕರ್ನಾಟಕ ದ್ವಿತೀಯ ಸ್ಥಾನ, ಆಂಧ್ರಪ್ರದೇಶ ತೃತೀಯ ಸ್ಥಾನ ಪಡೆಯಿತು.

ಮಹಿಳೆಯರ ವಿಭಾಗದಲ್ಲಿ ಬೆಸ್ಟ್ ಡಿಫೆಂಡರ್ ಆಗಿ ಆಂಧ್ರಪ್ರದೇಶದ ಕುಮಾರಿ, ಬೆಸ್ಟ್ ಅಟ್ಯಾಕರ್ ಆಗಿ ತಮಿಳುನಾಡಿನ ಜಯಶ್ರೀ, ಬೆಸ್ಟ್ ಆಲ್ ರೌಂಡರ್ ಆಗಿ ಕೇರಳದ ಕಾವ್ಯ ಕೃಷ್ಣ, ಹಾಗೂ ಪುರುಷರ ವಿಭಾಗದಲ್ಲಿ ಬೆಸ್ಟ್ ಡಿಪೆಂಡರ್ ಆಗಿ ತೆಲಂಗಾಣದ ಜಿ.ದಿನೇಶ್, ಬೆಸ್ಟ್ ಅಟ್ಯಾಕರ್ ಆಗಿ ಆಂಧ್ರಪ್ರದೇಶದ ಮಾರಿಶೆಟ್ಟಿ, ಬೆಸ್ಟ್ ಆಲ್ ರೌಂಡರ್ ಆಗಿ ಕರ್ನಾಟಕದ ಆದಿತ್ಯ ಪಾಟೀಲ್ ಪ್ರಶಸ್ತಿ ಪಡೆದರು.

ಬಹುಮಾನ ವಿತರಣಾ ಸಮಾರಂಭದಲ್ಲಿ ಮಹಾನಗರ ಪಾಲಿಕೆ ಮಾಜಿ ಸದಸ್ಯ ಜಿ.ಎಸ್. ಮಂಜುನಾಥ್, ಕ್ರೀಡಾ ಇಲಾಖೆಯ ಶ್ರೀಹರ್ಷ, ಡಿ.ಎಸ್.ಹೇಮಂತ್, ಮಲ್ಲಿಕಾರ್ಜುನ್ ಕಬಡ್ಡಿ, ರಾಮಲಿಂಗಪ್ಪ, ರಾಜ್ಯ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳಾದ ರವಿ, ಚಂದ್ರು, ಗೋಪಿ, ಕೊಟ್ರೇಶ್ ಮತ್ತಿತರರಿದ್ದರು.

## ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ನೀಡುತ್ತಿರುವ 'ಬಿಡಿಸಿಸಿ ಅಂಡ್ ಐ ಬ್ಯುಸಿನೆಸ್ ಅವಾರ್ಡ್-2025'




**ಬಳ್ಳಾರಿ:** ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ನೀಡುತ್ತಿರುವ 'ಬಿಡಿಸಿಸಿ ಅಂಡ್ ಐ ಬ್ಯುಸಿನೆಸ್ ಅವಾರ್ಡ್-2025' ಪ್ರಶಸ್ತಿಗಳನ್ನು ಆರು ಸಾಧಕರಿಗೆ ಭಾನುವಾರ ಪ್ರದಾನ ಮಾಡಿ, ಗೌರವಿಸಿ ಅಭಿನಂದಿಸಲಾಯಿತು.

ಬಳ್ಳಾರಿಯ ಬಲಿಜ ಭವನದಲ್ಲಿ ಭಾನುವಾರ ನಡೆದ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ 72ನೇ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಸೇವೆ ಸಲ್ಲಿಸಿರುವ ಡಾ. ಯಶವಂತ ಭೂಪಾಲ್ ಅವರಿಗೆ 'ಜೀವಮಾನ ಸಾಧನೆ', ಸೇವಾ ಕ್ಷೇತ್ರದಲ್ಲಿರುವ ಡಾ. ನಾಗರತ್ನ ಅನ್ನಾವರ್ಜುಲ (ಡಾ. ರತ್ನಾ ಸುಯಜ್ಞ) ಅವರಿಗೆ 'ಸೇವಾ ರತ್ನ', ಕೈಗಾರಿಕಾ ಕ್ಷೇತ್ರದಲ್ಲಿ ಸಿರುಗುಪ್ಪದ ಶ್ರೀಮತಿ ವಾಸವಿ ವೆಂಕಣ್ಣ ಅವರಿಗೆ, ಕೃಷಿ ಉತ್ಪನ್ನಗಳು ಮತ್ತು ಮಾರಾಟ ಕ್ಷೇತ್ರದಲ್ಲಿ ಚಾಣಕನೂರು ಮರೇಗೌಡ, ವಾಣಿಜ್ಯೋದ್ಯಮ ಕ್ಷೇತ್ರದಲ್ಲಿ ಎಚ್. ತಿಮ್ಮನಗೌಡ ಮತ್ತು ಕಂಪ್ಲಿಯ ವೆಂಕಟೇಶ್ ಎಣ್ಣಿ ಅವರಿಗೆ 'ವಾಣಿಜ್ಯ ರತ್ನ' ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ ಅವರು, 2024-25ರ ಸಾಲಿನ ಸಂಸ್ಥೆಯ ಪ್ರಗತಿ ಪಕ್ಷಿನೋಟವನ್ನು ಸಭೆಯಲ್ಲಿ ಮಂಡಿಸಿ, 2024-25ರ ಆರ್ಥಿಕ ಲೆಕ್ಕಪರಿಶೋಧನಾ ವರದಿಯನ್ನು ಮಂಡನೆ ಮಾಡಿ, ಅನುಮೋದನೆ ಪಡೆದರು

.'ವಾಣಿಜ್ಯ ರತ್ನ' ಪ್ರಶಸ್ತಿ ಸ್ವೀಕರಿಸಿದ ಶ್ರೀಮತಿ ವಾಸವಿ ವೆಂಕಣ್ಣ ಅವರು, ಸಿರುಗುಪ್ಪದಲ್ಲಿ ರೈಸ್‌ಮಿಲ್‌ಗಳನ್ನು ನಡೆಸುತ್ತಿರುವ ನನ್ನನ್ನು ಗುರುತಿಸಿ, ಪ್ರಶಸ್ತಿ ನೀಡಿದ್ದಕ್ಕಾಗಿ ಸಂಸ್ಥೆಗೆ ನಾನು ಅಭಾರಿಯಾಗಿದ್ದೇನೆ.

ಜಿಲ್ಲೆಯಲ್ಲಿ ಮಹಿಳಾ ಉದ್ಯಮಿಗಳಿಗೆ ಉತ್ತಮ ಅವಕಾಶಗಳಿವೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಉದ್ಯಮಗಳನ್ನು ಪ್ರಾರಂಭಿಸಬೇಕು ಎಂದು ಹೇಳಿದರು.2024-25ರ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ರ‍್ಯಾಂಕ್‌ಗಳನ್ನು ಪಡೆದಿರುವ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಗೌರವಿಸಿ, ಅಭಿನಂದಿಸಲಾಯಿತು. ಸಂಸ್ಥೆಯ ಸಂಸ್ಥಾಪಕರನ್ನು ಸ್ಮರಿಸಲಾಯಿತು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಸ್ವಾಗತ ಕೋರಿದರು. ಎಚ್.ಎ. ದಕ್ಷಿಣಾಮೂರ್ತಿ ಅವರು ಕಾರ್ಯಕ್ರಮ ನಿರೂಪಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷರಾದ ಬಿ. ಮಹಾರುದ್ರಗೌಡ, ಉಪಾಧ್ಯಕ್ಷರುಗಳಾದ ಎಸ್. ದೊಡ್ಡನಗೌಡ, ಸೊಂತ ಗಿರಿಧರ್, ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ಇನ್ನಿತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.


## ನ. 1 ರಂದು ಕಲಾಕುಂಚದಿಂದ ಕನ್ನಡದ ರಾಜ್ಯೋತ್ಸವದಧ್ವಜಾರೋಹಣ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತಿ ವರ್ಷದಂತೆ ನವಂಬರ್ ಒಂದರಂದು ಶನಿವಾರ ಬೆಳಿಗ್ಗೆ 8 ಗಂಟೆಗೆ 70ನೇ ವರ್ಷದ ಕನ್ನಡದ ಪ್ರಯುಕ್ತ ಕಲಾಕುಂಚ ಕಛೇರಿ ಹೊರಾಂಗಣದಲ್ಲಿ ಕನ್ನಡದ ಬಾವುಟದ ಧ್ವಜಾರೋಹಣ ನಡೆಯಲಿದೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಚನ್ನಗಿರಿ ವಿರೂಪಾಕ್ಷಪ್ಪ ಧರ್ಮಶಾಲಾ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಭರತ್ ಚನ್ನಗಿರಿಯವರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಗೌರವ ಅಧ್ಯಕ್ಷರಾದ ಶ್ರೀಮತಿ ವಸಂತಿ ಮಂಜುನಾಥ ಹಾಗೂ ಕಲಾಕುಂಚ ವಿವಿಧ ಬಡಾವಣೆಗಳ ಶಾಖೆಯ ಅಧ್ಯಕ್ಷರುಗಳು, ಪದಾಧಿಕಾರಿಗಳು ಸರ್ವ ಸದಸ್ಯರುಗಳು ಭಾಗವಹಿಸಲಿದ್ದಾರೆ.

ಸರ್ವ ಕನ್ನಡ ಮನಸ್ಸುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಕನ್ನಡ ರಾಜ್ಯೋತ್ಸವ ಧ್ವಜಾರೋಹಣ ಸಮಾರಂಭ ಯಶಸ್ವಿಗೊಳಿಸಬೇಕಾಗಿ ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

## ಕಾನೂನು ಪದವಿಯಲ್ಲಿ ನಂದಿನಿ ರ‍್ಯಾಂಕ್



**ದಾವಣಗೆರೆ:** ಇಲ್ಲಿನ ಆರ್.ಎಲ್. ಕಾನೂನು ಕಾಲೇಜಿನ ವಿದ್ಯಾರ್ಥಿನಿ ನಂದಿನ ಬಿ. ಪಾಟೀಲ್ ಇವರು 2023-24ನೇ ಸಾಲಿನಲ್ಲಿ ಕಾನೂನು ಪದವಿಯಲ್ಲಿ ರಾಜ್ಯಕ್ಕೆ 6ನೇ ರ‍್ಯಾಂಕ್ ಪಡೆದು ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿನಿ ನಂದಿನಿಗೆ ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಶಾಮನೂರು ಶಿವಶಂಕರಪ್ಪ, ಗೌರವ ಜಂಟಿ ಕಾರ್ಯದರ್ಶಿ ಎಸ್. ಎಸ್. ಮಲ್ಲಿಕಾರ್ಜುನ್, ಕಾಲೇಜಿನ ಪ್ರಾಂಶುಪಾಲರು ಮತ್ತು ವಿದ್ಯಾಸಂಸ್ಥೆಯ ಆಡಳಿತ ವರ್ಗದವರು ಅಭಿನಂದಿಸಿದ್ದಾರೆ.

## ಮುಕ್ತ ಚದುರಂಗ ಪಂದ್ಯಾವಳಿಗೆ ಹೆಸರು ನೋಂದಾಯಿಸಲು ಆಹ್ವಾನ

**ದಾವಣಗೆರೆ:** ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ಚೆಸ್ ಅಸೋಸಿಯೇಷನ್ ಹಾಗೂ ಲಯನ್ಸ್ ಕಲ್ಬ್, ವಿದ್ಯಾನಗರ ಇವರ ಸಂಯುಕ್ತಾಶ್ರಯದಲ್ಲಿ ನ.9ರಂದು ಮುಕ್ತ ಚದುರಂಗ (ಚೆಸ್) ಪಂದ್ಯಾವಳಿ-2025ನ್ನು ವಿದ್ಯಾನಗರದ ಪಾರ್ಕ್ ಹಿಂಭಾಗದಲ್ಲಿರುವ ಲಯನ್ಸ್ ಸೇವಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು, ಭಾಗವಹಿಸುವ ಸ್ಪರ್ಧಾಳುಗಳಿಗೆ ಹೆಸರು ನೊಂದಾಯಿಸಲು ನ.7 ಕೊನೆಯ ದಿನವಾಗಿದೆ.

ಜ್ಯೂನಿಯರ್ ಮತ್ತು ಸೀನಿಯರ್ ಎಂದು ಬಾಲಕ-ಬಾಲಕಿಯರಿಗೆ ಪ್ರತ್ಯೇಕ ವಿಭಾಗದಲ್ಲಿ ಸ್ಪರ್ಧೆಗಳು ನಡೆಯಲಿದ್ದು, 20 ಸ್ಪರ್ಧಾರ್ಥಿಗಳಿಗೆ ನಗದು, ಪ್ರಶಸ್ತಿ ಪತ್ರ ನೀಡಲಾಗುತ್ತದೆ. ಜ್ಯೂನಿಯರ್‌ಗಳಿಗೆ 600 ರೂ., ಮತ್ತು ಸೀನಿಯರ್ ವಿಭಾಗಕ್ಕೆ 700 ರೂ., ಪ್ರವೇಶ ಶುಲ್ಕ ನಿಗಧಿಗೊಳಿಸಲಾಗಿದೆ. ಹೆಸರು ನೋಂಧಾಯಿಸಲು ಮತ್ತು ಹೆಚ್ಚಿನ ಮಾಹಿತಿಗೆ ಸುರೇಶ್ ಜೈನ್ ಮೊ: 9844468767, ಎಂ.ಬಿ. ಚಂದ್ರಪ್ಪ ಮೊ: 9964057162ಗೆ ಸಂಪರ್ಕಿಸಬಹುದಾಗಿದೆ.

# ಜಿಎಂ ವಿಶ್ವವಿದ್ಯಾಲಯದಲ್ಲಿ ಐಪಿಎಲ್ ಮಾದರಿ ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳ ಆಯೋಜನೆ

**ದಾವಣಗೆರೆ:** ದಾವಣಗೆರೆ ಜಿಎಂ ವಿಶ್ವವಿದ್ಯಾಲಯದಲ್ಲಿ ಐಪಿಎಲ್ ಮಾದರಿಯಲ್ಲಿ ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳನ್ನು ದಿವಂಗತ ಜಿ.ಮಲ್ಲಿಕಾರ್ಜುನಪ್ಪ ಅವರ ಹೆಸರಿನಡಿ ಜಿಎಂ ಲೀಗ್ ಎಂಬುದಾಗಿ ಆಯೋಜಿಸುತ್ತ ಬಂದಿದ್ದು ಇದೇ ಅಕ್ಟೋಬರ್ 27ರಿಂದ "ಸೀಸನ್ 2" ಶುರುವಾಗುತ್ತಿದೆ ಎಂದು ವಿಶ್ವವಿದ್ಯಾಲಯದ ನಿರ್ದೇಶಕರಾದ ಡಾ.ಹೆಚ್.ಎಸ್.ಕಿರಣ್ ಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೀಸನ್ 2ಗೆ ಅಕ್ಟೋಬರ್ 27 ರಂದು ಮಧ್ಯಾಹ್ನ 2.30 ಗಂಟೆಗೆ ವಿದ್ಯುಕ್ತ ಚಾಲನೆ ಸಿಗಲಿದ್ದು, ಜಿಎಂ ವಿಶ್ವವಿದ್ಯಾಲಯದ ಕುಲಾಧಿಪತಿಗ ಜಿ.ಎಂ.ಲಿಂಗರಾಜು, ಕುಲಪತಿಗ ಡಾ. ಎಸ್.ಆರ್. ಶಂಕಪಾಲ್, ಸಹ ಕುಲಪತಿ ಡಾ. ಹೆಚ್.ಡಿ. ಮಹೇಶಪ್ಪ, ಕುಲಸಚಿವರಾದ ಡಾ. ಸುನೀಲ್ ಕುಮಾರ್ ಬಿ.ಎಸ್ ಸೇರಿದಂತೆ ಜಿಎಂಯು ನಿರ್ದೇಶಕರು, ಡೀನ್ಗಳು, ಪ್ರಾಧ್ಯಾಪಕರುಗಳು, ವಿದ್ಯಾರ್ಥಿಗಳು ಭಾಗವಹಿಸುವರು. ನವೆಂಬರ್ 7 ರವರೆಗೆ ಈ ಪಂದ್ಯಾವಳಿ ನಡೆಯಲಿದೆ. ಆ ಮೂಲಕ ಕ್ರೀಡೆಯ ರಸದೌತಣ ನೀಡಲು ಜಿಎಂಯು ಸಜ್ಜುಗೊಂಡಿದೆ ಎಂದು ಮಾಹಿತಿ ನೀಡಿದರು.

ಜಿಎಂಯು ನಿರ್ದೇಶಕರು, ಡೀನ್ಗಳು, ಪ್ರಾಧ್ಯಾಪಕರುಗಳು ಫ್ರ್ಯಾಂಚೈಸ್‌ಗಳಾಗಿದ್ದು, ಜಿಎಂಯುನ ವಿದ್ಯಾರ್ಥಿಗಳ ಜೊತೆಗೆ ಫಾರಿನ್ ಕ್ರೀಡಾಪಟುಗಳಾಗಿ ದಾವಣಗೆರೆ ಜಿಲ್ಲೆ ಅಷ್ಟೇ ಅಲ್ಲದೇ ವಿವಿಧ ಜಿಲ್ಲೆಗಳಲ್ಲಿ ಪ್ರೌಢಶಾಲೆಯಿಂದ ಹಿಡಿದು ಇಂಜಿನಿಯರಿಂಗ್, ಮೆಡಿಕಲ್, ಫಾರ್ಮಸಿ, ನರ್ಸಿಂಗ್ ಸೇರಿದಂತೆ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಈ ಪಂದ್ಯಾವಳಿಯಲ್ಲಿ ಅವಕಾಶವಿದ್ದು, ಇವರನ್ನು ಬಿಡ್ ಮೂಲಕ ಆಯ್ಕೆಗೊಳಿಸಲಾಗಿದೆ ಎಂದು ಹೇಳಿದರು.

ಜಿಎಂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಜಿ.ಎಂ. ಲಿಂಗರಾಜು, ಕುಲಪತಿಗಳಾದ ಡಾ. ಎಸ್.ಆರ್. ಶಂಕಪಾಲ್ ಅವರುಗಳು ಈ ಲೀಗ್‌ನ ರುವಾರಿಗಳಾಗಿದ್ದು, ಇವರುಗಳ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳ ವ್ಯವಹಾರಗಳ ನಿರ್ದೇಶನಾಲಯ ಹಾಗೂ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗವು ಈ ಲೀಗ್ ನ ನಡೆಸುತ್ತಿದ್ದು, ವಿದ್ಯಾರ್ಥಿಗಳ ವ್ಯವಹಾರಗಳ ನಿರ್ದೇಶನಾಲಯದ ನಿರ್ದೇಶಕರಾದ ಡಾ. ಹೆಚ್.ಎಸ್. ಕಿರಣ್ ಕುಮಾರ್ ಹಾಗೂ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ನಿರ್ದೇಶಕರಾದ ಜಿ.ಬಿ. ಅಜ್ಜಯ್ಯ ಲೀಗ್‌ನ ಜವಾಬ್ದಾರಿ ಹೊತ್ತಿದ್ದಾರೆ ಎಂದರು.ತಂಡಗಳಿಷ್ಟು : ಸೀಸನ್ 2 ರಲ್ಲಿ 4 ವಿವಿಧ ಕ್ರೀಡಾ ಪಂದ್ಯಾವಳಿಗಳು ನಡೆಯಲಿದ್ದು, ಒಟ್ಟು 8 ಪ್ರಾಂಚೈಸಿ ತಂಡಗಳಾಗಿ ಈ ಲೀಗ್ನಲ್ಲಿ ಭಾಗವಹಿಸಲಿದ್ದು, ಕ್ರಿಕೆಟ್ ಹೊರತುಪಡಿಸಿ, ಬಾಲಕ ಮತ್ತು ಬಾಲಕಿಯರ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ತಲಾ ಒಟ್ಟು 10 ಆಟಗಾರರ ಪೈಕಿ ಇಬ್ಬರು ಫಾರಿನ್ ಕ್ರೀಡಾಪಟುಗಳು, ಬ್ಯಾಸ್ಕೆಟ್ ಬಾಲ್ ಬಾಲಕ ಮತ್ತು ಬಾಲಕಿಯರ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ತಲಾ ಒಟ್ಟು 10 ಆಟಗಾರರ ಪೈಕಿ ಇಬ್ಬರು ಫಾರಿನ್ ಕ್ರೀಡಾಪಟುಗಳು ಭಾಗವಹಿಸುವರು. ಬಾಲಕರ ಫುಟ್ ಬಾಲ್ ಪಂದ್ಯಾವಳಿಯಲ್ಲಿ ಒಟ್ಟು 12 ಆಟಗಾರರ ಪೈಕಿ ಮೂವರು ಫಾರಿನ್ ಕ್ರೀಡಾಪಟುಗಳು, ಬಾಲಕರ ಕಬ್ಬಡಿ ಪಂದ್ಯಾವಳಿಯಲ್ಲಿ ಒಟ್ಟು 12 ಆಟಗಾರರ ಪೈಕಿ ಇಬ್ಬರು ಫಾರಿನ್ ಕ್ರೀಡಾಪಟುಗಳು ಭಾಗವಹಿಸುವರು ಎಂದರು.ಸಮಾರೋಪ ಸಮಾರಂಭ ನವೆಂಬರ್ 7,2025 ರಂದು ಸಂಜೆ 5:ಗಂಟೆಗೆ ನಡೆಯಲಿದೆ. ಪ್ರಥಮ ಬಹುಮಾನವಾಗಿ 10 ಸಾವಿರ ನಗದು, ದ್ವಿತೀಯ ಬಹುಮಾನವಾಗಿ 7.5 ಸಾವಿರ ಹಾಗೂ ಟ್ರೋಫಿ ಮತ್ತು ಬಹುಮಾನಗಳನ್ನು ವಿತರಣೆ ಮಾಡಲಾಗುವುದು ಎಂದರು.ಸುದ್ದಿಗೋಷ್ಠಿಯಲ್ಲಿ ಜಿಎಂಯು ಮಾರ್ಕೆಟಿಂಗ್ ಮತ್ತು ಪ್ರಚಾರ ವಿಭಾಗದ ಡೀನ್ ಡಾ. ವೀರಗಂಗಾಧರ್ ಸ್ವಾಮಿ ಟಿ.ಎಂ, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ನಿರ್ದೇಶಕರಾದ ಜಿ.ಬಿ. ಅಜ್ಜಯ್ಯ, ಕ್ರೀಡಾ ಕಾರ್ಯದರ್ಶಿ ಗುರುಶಂಕರ್ ಎ.ಎಸ್, ಪ್ರಧಾನ ಕಾರ್ಯದರ್ಶಿ ರಾಹುಲ್ ಆರ್. ಗದಗಿಮಠ ಉಪಸ್ಥಿತರಿದ್ದರು.

# ಮುಟ್ಟುಗೋಲಾದ ವಾಹನಗಳ ಹರಾಜು

**ಚಿಕ್ಕಮಗಳೂರು:** ಕೊಪ್ಪ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಯ ಆವರಣದಲ್ಲಿ ಮುಟ್ಟುಗೋಲು ಹಾಕಿಕೊಂಡ ವಿವಿಧ ಮಾದರಿಯ ವಾಹನಗಳು ಹಾಗೂ ಅನುಪಯುಕ್ತ ಇಲಾಖಾ ವಾಹನಗಳಾದ ಮಾರುತಿ ಸುಜುಕಿ ವ? ಕಾರ್-1, ಅಂಬಾಸಿಡರ್ ಕಾರ್-1, ಅಟಲ್ ಆಟೋ ರಿಕ್ಷಾ-1, ಮೋಟಾರ್ ಬೈಕ್-7, ಅನುಪಯುಕ್ತ ಇಲಾಖಾ ವಾಹನಗಳಾದ ಬೊಲೇರೋ ಜೀಪ್-1, ಮಹೀಂದ್ರಾ ಜೀಪ್-1 ಇವುಗಳನ್ನು ನವೆಂಬರ್ 20 ರಂದು ಟೆಂಡರ್-ಕಂ-ಬಹಿರಂಗ ಹರಾಜು ಮೂಲಕ ಮಾರಾಟಕ್ಕಿಡಲಾಗಿದ್ದು. 4 ಚಕ್ರದ ವಾಹನಗಳಿಗೆ ರೂ.10,000 ಹಾಗೂ ದ್ವಿಚಕ್ರ ವಾಹನಗಳಿಗೆ ರೂ.5,000 ಗಳನ್ನು ಬಿಡ್ಡುದಾರರಿಂದ ಠೇವಣಿಯಾಗಿ ಪಡೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ತಮ್ಮ ಕಚೇರಿಯಿಂದ ಪಡೆಯಬಹುದು ಎಂದು ಕೊಪ್ಪ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಚಾರ್ಮಾಡಿ ಘಾಟಿನಲ್ಲಿ ಅಡ್ಡಲಾಗಿ ನಿಂತ ಟ್ಯಾಂಕರ್, ಸಂಚಾರಕ್ಕೆ ಅಡಚಣೆ

**ಚಿಕ್ಕಮಗಳೂರು:** ಕೆಲ ಗಂಟೆಗಳ ಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಬೆಂಗಳೂರಿನಿಂದ ಮಂಗಳೂರು ಕಡೆಗೆ ತೆರಳುತ್ತಿದ್ದ ಟ್ಯಾಂಕರ್ ವಾಹನ ಚಾರ್ಮಾಡಿ ತಿರುವಿನಲ್ಲಿ ನಿಯಂತ್ರಣ ತಪ್ಪಿ ರಸ್ತೆಗೆ ಅಡ್ಡಲಾಗಿ ನಿಂತಿತ್ತು. ಇದರಿಂದ ಎರಡು ಗಂಟೆಗೂ ಹೆಚ್ಚು ಕಾಲ ಘಾಟಿಯಲ್ಲಿ ಸಂಚಾರ ಸಂಪೂರ್ಣ ಸ್ಥಗಿತವಾಗಿತ್ತು.

ಬಳಿಕ ಟ್ಯಾಂಕರನ್ನು ಬದಿಗೆ ಸರಿಸಿ ಒಂದೇ ಬದಿಯಲ್ಲಿ ಎರಡೂ ಕಡೆಯ ವಾಹನ ಸಂಚಾರಕ್ಕೆ ಅವಕಾಶ ಕಲ್ಪಿಸಿ ಕೊಡಲಾಯಿತು. ಇದರಿಂದ ಇಡೀ ದಿನ ಘಾಟಿಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಬಸ್‌ಗಳು ಸರಿಯಾದ ಸಮಯಕ್ಕೆ ತಲುಪದೇ ಪ್ರಯಾಣಿಕರು ಪರದಾಡಿದರು ಎಂದು ಸ್ಥಳೀಯರು ತಿಳಿಸಿದರು.

ಚಾರ್ಮಾಡಿ ಘಾಟಿಯಲ್ಲಿ ಭಾರಿ ವಾಹನಗಳ ಸಂಚಾರಕ್ಕೆ ನಿರ್ಬಂಧವಿದ್ದರೂ, ಕೊಟ್ಟಿಗೆಹಾರ ಚೆಕ್‌ಪೋಸ್ಟ್‌ನಲ್ಲಿ ಟ್ಯಾಂಕರ್‌ನ್ನು




ತಡೆಯದ ಕಾರಣ ಸಮಸ್ಯೆಯಾಗಿದೆ. ಘಾಟಿಯಲ್ಲಿ ಭಾರಿ ವಾಹನಗಳನ್ನು ಬಿಡಬಾರದು ಎಂದು ಸಂಚಾರ ದಟ್ಟಣೆಯಲ್ಲಿ ಸಿಲುಕಿದ್ದ ವಾಹನ ಸವಾರ ಸುಬ್ರಮಣ್ಯ ಅವರು ಆಕ್ರೋಶ ವ್ಯಕ್ತಪಡಿಸಿದರು.

# ಹೊಯ್ಸಳರ ಕಾಲದ ವೀರಗಲ್ಲು ಪತ್ತೆ

**ಚಿಕ್ಕಮಗಳೂರು:** ಬೈಗೂರು ಗ್ರಾಮದ ನಿವೇದನ್‌ಗೆ ಸೇರಿದ ಜಮೀನಿನಲ್ಲಿ ಗ್ರಾಪಂ ಪಿಡಿಒ ಶರತ್ ಕುಮಾರ್ ಪಿಡಿ ಇವರ ಸೂಚನೆಯ ಮೇರೆಗೆ ಶಾಸನ ಸಂಶೋಧಕರಾದ ಮೇಕನಗದ್ದೆ ಲಕ್ಷ್ಮಣಗೌಡರು 12ನೇ ಶತಮಾನಕ್ಕೆ ಸೇರಿದ ಹೊಯ್ಸಳರ ಕಾಲದ ವೀರಗಲ್ಲು ಶಾಸನವನ್ನು ಪತ್ತೆ ಹಚ್ಚಿದ್ದಾರೆ.

ಶಾಸನವು ನಾಲ್ಕು ಅಡಿ ಎತ್ತರವಿದ್ದು ಎರಡು ಅಡಿ ಅಗಲವಿದೆ. ಮೂರು ಹಂತಗಳಲ್ಲಿ ಆಕರ್ಷಕ ಶಿಲ್ಪಗಳ ಕೆತ್ತನೆಗಳಿದ್ದು ನಡುವಿನ ಎರಡು ಪಟ್ಟಿಗಳಲ್ಲಿ ಮತ್ತು ಆಚೀಚೆಯ ಎರಡು ಬದಿಗಳಲ್ಲಿ ಬರವಣಿಗೆ ಇದೆ.

ಒಟ್ಟು 8 ಸಾಲುಗಳಿರುವ ಈ ಶಾಸನದಲ್ಲಿ ಮೊದಲ ಹಂತದಲ್ಲಿರುವ ಕೆತ್ತನೆ ಹಾಗೂ ಒಂದಷ್ಟು ವಿವರಗಳು ಸವೆದು ಹೋಗಿವೆ. ಈ ಶಾಸನವು ಹೊಯ್ಸಳ ಆಳ್ವಿಕೆಯ ಕಾಲಕ್ಕೆ ಸಂಬಂಧಿಸಿದ ಕೆಲವು ಅಪರೂಪದ ಮಾಹಿತಿಗಳನ್ನು ತಿಳಿಸುತ್ತದೆ ಎಂದು ಶಾಸನವನ್ನು ಓದಿ ಪಠ್ಯ ತಯಾರಿಸಿರುವ



ಮೈಸೂರಿನ ಶಾಸನ ತಜ್ಞರಾದ ಎಚ್. ಎಂ. ನಾಗರಾಜ್ ರಾವ್ ತಿಳಿಸಿದರು.

ಶಕ ವರ್ಷ 1043ರ ಶಾರ್ವರಿ ಸಂವತ್ಸರದಂದು ಅಂದರೆ 1220-21ನೇ ಇಸವಿಯಲ್ಲಿ ಹೊಯ್ಸಳ ದೊರೆ ಬಿಟ್ಟಿದೇವ ಮತ್ತು ಆತನ ಸಹೋದರ ಉದಯದಿತ್ಯ ಇವರು ಚೋಳಮಂಡಲವನ್ನು ಗೆದ್ದು ರಾಜ್ಯವಾಳುತ್ತಿದ್ದುದರ ಪ್ರಸ್ತಾಪವಿದೆ. ಉದಯದಿತ್ಯನು ಹಾಸನದ ಕೆಲವತ್ತಿಯ ಕೊಪ್ಪದಲ್ಲಿ ಮರಣ ಹೊಂದಿದಾಗ ಆತನೊಂದಿಗೆ ವೇಳೆಯಾಗಿ ಮರಣ ಹೊಂದಿದವರ ಬಗ್ಗೆ ಈಗಾಗಲೇ ಬೇರೆ ಶಾಸನಗಳಲ್ಲಿ ಉಲ್ಲೇಖವಿದೆ ಎಂದರು.

ಅದೇ ರೀತಿ ಉದಯಾದಿತ್ಯನ ಮಗಳು ಏಚಲ ದೇವಿಯವರು ನಿಧನವಾದಾಗ ಸಹ ಹಲವರು ವೇಳೆಯಾಗಿ ಮರಣ ಹೊಂದಿದ ಉಲ್ಲೇಖವೂ ಇತರ ಶಾಸನಗಳಲ್ಲಿ ಕಂಡು ಬರುತ್ತದೆ. ಅದೇ ರೀತಿ ಪ್ರಸ್ತುತ ಶಾಸನದಲ್ಲಿ ಏಚಲ ದೇವಿಯವರು ನಿಧನವಾದಾಗ ಚಿಕ್ಕ ಎಂಬ ವೀರನು ಮರಣ ಹೊಂದಿರುವ ಉಲ್ಲೇಖವಿದೆ. ಶಾಸನದ ನಡುವಿನ ಪಟ್ಟಿಯಲ್ಲಿ ಶಾಪಾಶಯ ವಾಕ್ಯಗಳಿವೆ. ಕೆಲವು ಅಕ್ಷರಗಳು ಸವೆದು ಹೋಗಿದ್ದು ಮಾಹಿತಿ ಅಸ್ಪಷ್ಟವಾಗಿದೆ. ಕಲ್ಲನ್ನು ಬೊಮಣ್ಣ ಎಂಬುವನು ಮಾಡಿಸಿದ ಉಲ್ಲೇಖವಿದೆ.

# ಪೂಜ್ಯರಿಗೆ ಸದ್ಭಕ್ತರಿಂದ ಗುರುವಂದನಾ ಕಾರ್ಯಕ್ರಮ



**ವಿಜಯನಗರ:** ಜಿಲ್ಲೆ ಹರಪನಹಳ್ಳಿ ತಾಲ್ಲೂಕು, ಮತ್ತಿಹಳ್ಳಿ ಗ್ರಾಮದ ಮುತ್ತಿಗಿ ರಸ್ತೆಯಲ್ಲಿ ಬರುವಂತಹ ಪೂಜ್ಯ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರ ಮಠವಿದ್ದು, ಈ ಮಠದ ಆವರಣದಲ್ಲಿ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಾಲಯದ ಕಟ್ಟಡ ನಿರ್ಮಾಣಗೊಳ್ಳುತ್ತಿದ್ದು, ಭಕ್ತಾಧಿಗಳು ಕಾಣಿಕೆ ರೂಪದಲ್ಲಿ ಹಾಗೂ ಯಾವುದೇ ರೀತಿಯ ಸೇವೆಯನ್ನು ಸಲ್ಲಿಸುತ್ತಿರುವುದರಿಂದ ಭಕ್ತಾಧಿಗಳ ಸಹಕಾರದಿಂದ ದೇವಾಲಯವು ನಿರ್ಮಾಣಗೊಳ್ಳುತ್ತಿದೆ. ಹಾಗೆಯೇ ಸದ್ಭಕ್ತರಾದಂತಹ ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲ್ಲೂಕು, ಬೂದನೂರು ಗ್ರಾಮದ ಶ್ರೀಮತಿ ಲಲಿತಾ ಎ. ಕೋಂ. ಶ್ರೀ ಹೊನ್ನತ್ತಪ್ಪ (ಪಿ.ಎಲ್.ಡಿ. ಅಧ್ಯಕ್ಷರು) ಹಾಗೂ ಕುಟುಂಬಸ್ತರುಗಳು ಸೇರಿ ಪೂಜ್ಯರಾದಂತಹ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರನ್ನು ತಮ್ಮ ವಾಸ ಗೃಹಕ್ಕೆ ದಿನಾಂಕ: 24-10-2025 ರ ಶುಭ ಶುಕ್ರವಾರ ದಿನದಂದು ಬರಮಾಡಿಕೊಂಡು ಪೂಜ್ಯರನ್ನು ತುಂಬು ಆದರದಿಂದ ಸ್ವಾಗತಿಸಿ ಪೂಜ್ಯರಿಗೆ ಶಾಲು ಹೊದಿಸಿ ಮಾಲೆ ಹಾಕಿ ಫಲ ತಾಂಬೂಲ ಕೊಟ್ಟು ಆರತಿ ಬೆಳಗುವುದರೊಂದಿಗೆ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಪೂಜ್ಯರು ದಂಪತಿಗಳಿಗೂ ಹಾಗೂ ಕುಟುಂಬಸ್ಥರೆಲ್ಲರಿಗೂ ಆಶೀರ್ವದಿಸಿದರು. ದಂಪತಿಗಳು ಶ್ರೀ ಪಂಚಮುಖಿ ಆಂಜನೇಯ ದೇವಸ್ಥಾನದ ನಿರ್ಮಾಣಕ್ಕೆ ಕಾಣಿಕೆಯನ್ನು ನೀಡಿದರು. ಪೂಜ್ಯರು ಎಲ್ಲರನ್ನು ಆಶೀರ್ವದಿಸಿ "ನಿಮ್ಮ ಅಪಾರವಾದ ನಂಬಿಕೆ ಭಕ್ತಿ ನಿಮ್ಮನ್ನು ಗೆಲ್ಲಿಸುತ್ತದೆ"

ಎಂದು ನುಡಿದು ಹಾರೈಸಿದರು. ಈ ಸಂದರ್ಭದಲ್ಲಿ ಶ್ರೀಮತಿ ಲಲಿತಾ ಎ. ಕೋಂ. ಹೊನ್ನತ್ತಪ್ಪ ಹಾಗೂ ಕುಟುಂಬಸ್ಥರಾದ ಶ್ರೀ ಕೊಟ್ರೇಶ್ ಎ., ಶ್ರೀಮತಿ ಶೋಭಾ ಎ., ಶ್ರೀಮತಿ ಸರಸ್ವತಿ ಎ., ಶ್ರೀ ಶರಣಪ್ಪ ಎ. ಹಾಗೂ ಶ್ರೀ ರೊಟ್ಟಿ ವೀರಣ್ಣ, ಶ್ರೀ ವೀರಣ್ಣ ಗೌಡ್ರು, ಶ್ರೀ ಷಣ್ಮುಖಪ್ಪ, ಶ್ರೀಮತಿ ಶಶಿಕಲಾ, ಶ್ರೀಮತಿ ಜ್ಯೋತಿ ಹಾಗೂ ಊರಿನ ಹಿರಿಯರು, ಗ್ರಾಮಸ್ಥರುಗಳು ಇನ್ನಿತರರು ಉಪಸ್ಥಿತರಿದ್ದರು.

# ನಾಳೆಯಿಂದ ಮೊಂತಾ ಚಂಡ ಮಾರುತ ಆರ್ಭಟ ಸಾಧ್ಯತೆ

**ಅಮರಾವತಿ:** ನಾಳೆ ಬೆಳಿಗ್ಗೆ ವೇಳೆಗೆ ಮೊಂತಾ ಚಂಡಮಾರುತ ತೀವ್ರಗೊಳ್ಳುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.ನೈಋತ್ಯ ಮತ್ತು ಪಕ್ಕದ ಆಗ್ನೆಯ ಬಂಗಾಳ ಕೊಲ್ಲಿಯ ಮೇಲಿನ ಹವಾಮಾನ ವ್ಯವಸ್ಥೆಯು ಕಳೆದ ಆರು ಗಂಟೆಗಳಲ್ಲಿ ಗಂಟೆಗೆ 15 ಕಿಮೀ ವೇಗದಲ್ಲಿ ವಾಯುವ್ಯ ದಿಕ್ಕಿಗೆ ಚಲಿಸಿತು ಮತ್ತು ಇಂದು ಬೆಳಿಗ್ಗೆ 5.30 ಕ್ಕೆ ಪಶ್ಚಿಮ ಮಧ್ಯ ಮತ್ತು ಆಗ್ನೆಯ ಬಂಗಾಳ ಕೊಲ್ಲಿಯ ನೈಋತ್ಯ ಮತ್ತು ಪಕ್ಕದ ಪ್ರದೇಶಗಳ ಮೇಲೆ ಕೇಂದಿಕೃತವಾಗಿತ್ತು.

ಇದು ಮುಂದಿನ 12 ಗಂಟೆಗಳಲ್ಲಿ ನೈಋತ್ಯ ಮತ್ತು ಪಕ್ಕದ ಪಶ್ಚಿಮ ಮಧ್ಯ ಬಂಗಾಳ ಕೊಲ್ಲಿಯ ಮೇಲೆ ವಾಯುವ್ಯ ದಿಕ್ಕಿಗೆ ಚಲಿಸುವ ಸಾಧ್ಯತೆಯಿದೆ ಮತ್ತು ನಂತರ ಉತ್ತರ-ವಾಯುವ್ಯ ದಿಕ್ಕಿಗೆ ಚಲಿಸುವ ಸಾಧ್ಯತೆಯಿದೆ ಮತ್ತು ನಾಳೆ ಬೆಳಿಗ್ಗೆ ವೇಳೆಗೆ ತೀವ್ರ ಚಂಡಮಾರುತವಾಗಿ ತೀವ್ರಗೊಳ್ಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆಯ ಅಧಿಕೃತ ಪ್ರಕಟಣೆ ತಿಳಿಸಿದೆ.

ಹವಾಮಾನ ಇಲಾಖೆಯ ಪ್ರಕಾರ, ಇಂದು ಬೆಳಿಗ್ಗೆ 5.30 ರ ಹೊತ್ತಿಗೆ ಮೊಂತಾ 12.2 ಡಿಗ್ರಿ ಉತ್ತರ ಮತ್ತು 85.3 ಡಿಗ್ರಿ ಪೂರ್ವ ಅಕ್ಷಾಂಶದಲ್ಲಿ, ಕಾಕಿನಾಡದಿಂದ ದಕ್ಷಿಣಕ್ಕೆ ಸುಮಾರು 620 ಕಿಮೀ, ವೈಜಾಗ್ ನಿಂದ ದಕ್ಷಿಣಕ್ಕೆ 650 ಕಿಮೀ, ಚೆನ್ನೈನಿಂದ ಪೂರ್ವಕ್ಕೆ 560 ಕಿಮೀ, ಒಡಿಶಾದ ಗೋಪಾಲಪುರದಿಂದ 790 ಕಿಮೀ ದಕ್ಷಿಣಕ್ಕೆ ಮತ್ತು ಪೋರ್ಟ್ ಬ್ಲೇರ್ (ಅಂಡಮಾನ್ ಮತ್ತು ನಿಕೋಬಾರ್ ದ್ವಿಪಗಳು) ನಿಂದ 810 ಕಿಮೀ ಪಶ್ಚಿಮಕ್ಕೆ ಇದೆ.

ನಂತರ, ಹವಾಮಾನ ವ್ಯವಸ್ಥೆಯು ಉತ್ತರ-ವಾಯುವ್ಯಕ್ಕೆ ಚಲಿಸುವ ನಿರೀಕ್ಷೆಯಿದ್ದು, ನಾಳೆ ಸಂಜೆ ಮತ್ತು ರಾತ್ರಿಯ ಸಮಯದಲ್ಲಿ ಕಾಕಿನಾಡದ ಸುತ್ತಮುತ್ತಲಿನ ಆಂಧ್ರಪ್ರದೇಶದ ಕರಾವಳಿಯನ್ನು ಮಚಲಿಪಟ್ನಂ ಮತ್ತು ಕಳಿಂಗಪಟ್ನಂ ನಡುವೆ ತೀವ್ರ ಚಂಡಮಾರುತವಾಗಿ ಗಂಟೆಗೆ 110 ಕಿಮೀ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಏತನ್ಮಧ್ಯೆ, ಮುಂದಿನ ಮೂರು ಗಂಟೆಗಳಲ್ಲಿ ಅನಕಾಪಲ್ಲಿ, ಕಾಕಿನಾಡ, ಕೋನಸೀಮಾ, ಶ್ರೀಕಾಕುಳಂ, ನೆಲ್ಲೂರು, ತಿರುಪತಿ, ವಿಶಾಖಪಟ್ಟಣಂ, ವಿಜಯನಗರ ಮತ್ತು ಪಶ್ಚಿಮ ಗೋದಾವರಿ ಜಿಲ್ಲೆಗಳಲ್ಲಿ ಗಂಟೆಗೆ 40 ಕಿ.ಮೀ ವೇಗದಲ್ಲಿ ಬಿರುಗಾಳಿ ಸಹಿತ ಲಘುವಾದ ಗುಡುಗು ಸಹಿತ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಆಂಧ್ರಪ್ರದೇಶ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ (ಎಪಿಎಸ್‌ಡಿಎಂಎ) ವ್ಯವಸ್ಥಾಪಕ ನಿರ್ದೇಶಕ ಪ್ರಖರ್ ಜೈನ್ ಜನರು ಮನೆಯೊಳಗೆ ಇರುವಂತೆ ಸಲಹೆ ನೀಡಿದರು. ಕಾಕಿನಾಡ, ಕೋನಸೀಮಾ, ಪಶ್ಚಿಮ ಗೋದಾವರಿ, ಕೃಷ್ಣಾ, ಬಾಪಟ್ಲ, ಪ್ರಕಾಶಂ ಮತ್ತು ನೆಲ್ಲೂರು ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಿಂದ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಅವರು ಹೇಳಿದರು. ಅಂತೆಯೇ ಶ್ರೀಕಾಕುಳಂ, ವಿಜಯನಗರಂ, ಪಾರ್ವತಿಪುರಂ ಮಾನ್ಯಂ, ಅಲ್ಲೂರಿ ಸೀತಾರಾಮರಾಜು, ವಿಶಾಖಪಟ್ಟಣಂ ಮತ್ತು ಅನಕಪಲ್ಲಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದರು. ಪೂರ್ವ ಗೋದಾವರಿ, ಎಲೂರು, ಎನ್‌ಟಿಆರ್, ಗುಂಟೂರು, ಪಲ್ನಾಡು, ಚಿತ್ತೂರು ಮತ್ತು ತಿರುಪತಿ ಜಿಲ್ಲೆಗಳಲ್ಲಿ ಇದೇ ರೀತಿಯ ಹವಾಮಾನವನ್ನು ನಿರೀಕ್ಷಿಸಲಾಗಿದೆ ಎಂದು ಜೈನ್ ಹೇಳಿದ್ದಾರೆ.

## ಕೇವಲ 2000ರೂ.ಗಾಗಿ ಸ್ನೇಹಿತನನ್ನೇ ಕೊಂದು ಪೊಲೀಸರಿಗೆ ಶರಣಾದ ಯುವಕ

**ಬೆಳಗಾವಿ:** ಕೇವಲ 2000ರೂಗೆ ಸ್ನೆಹಿತನನ್ನೇ ಕೊಲೆ ಮಾಡಿದ ಆರೋಪಿ ಪೊಲೀಸ್ ಠಾಣೆ ಹೋಗಿ ಶರಣಾದ ಘಟನೆ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಗಿರಿಯಾಲ ಗ್ರಾಮದಲ್ಲಿ ಘಟನೆ ನಡೆದಿದೆ.ಗಿರಿಯಾಲ ಗ್ರಾಮದ ಮಂಜುನಾಥ ಗೌಡರ (30) ಕೊಲೆಯಾದ ದುರ್ದೈವಿಯಾಗಿದ್ದು ,ದಯಾನಂದ ಗುಂಡ್ಲೂರ ಬಂಧಿತವ ಆರೋಪಿ.ಕಳೆದ ವಾರ ದಯಾನಂದ 2 ಸಾವಿರ ಹಣ ಸಾಲವನ್ನಾಗಿ ಸ್ನೆಹಿತ ಮಂಜುನಾಥ ಬಳಿ ಪಡೆದಿದ್ದ. ಒಂದು ವಾರದೊಳಗೆ ಹಣ ಮರಳಿಸುವುದಾಗಿ ಹೇಳಿದ್ದ. ಆದರೆ ಇದರ ಬಗ್ಗೆ ಮಾತನಾಡದೆ ದಯಾನಂದ ಸುಮನಾಗಿದ್ದ.

ನೆನ್ನೆ ರಾತ್ರಿ ಸಾಲದ ಹಣ ನೀಡುವಂತೆ ಮಂಜುನಾಥ ಕೇಳಿದ್ದ ಆದರೆ ದಯಾನಂದ ಜಗಳ ಆರಂಭಿಸಿದ್ದ. ವಾಗ್ವಾದ ನಡೆದು ಇಬ್ಬರ ಜಗಳ ವಿಕೋಪಕ್ಕೆ ತಿರುಗಿತ್ತು.ಇಬ್ಬರನ್ನು ಬಿಡಿಸಿ ಗ್ರಾಮಸ್ಥರು ಮನೆಗೆ ಕಳಿಸಿದ್ದರು.ಆದರೆ ರಾತ್ರಿ ನಡೆದ ಜಗಳದ ಸಿಟ್ಟಿನಲ್ಲೇ ಬೆಳಗಿನ ಜಾವ ಎದುರಾದ ಮಂಜುನಾಥನ ಮೇಲೆ ಕೊಡ್ಲಿಯಿಂದ ಹೊಡೆದು ದಯಾನಂದ ಪರಾರಿಯಾಗಿದ್ದಾನೆ. ತೀವ್ರ ಗಾಯಗೊಂಡ ಮಂಜುನಾಥ ರಕ್ತಸ್ರಾವದಿಂದ ಆಸ್ಪತ್ರೆಗೆ ಸಾಗಿಸುವ ಮುನ್ನವೇ ಉಸಿರು ಚಲ್ಲಿದ್ದಾನೆ.ಆದರೆ ರಾತ್ರಿ ನಡೆದ ಜಗಳದ ಸಿಟ್ಟಿನಲ್ಲೇ ಬೆಳಗಿನ ಜಾವ ಎದುರಾದ ಮಂಜುನಾಥನ ಮೇಲೆ ಕೊಡ್ಲಿಯಿಂದ ಹೊಡೆದು ದಯಾನಂದ ಪರಾರಿಯಾಗಿದ್ದಾನೆ. ತೀವ್ರ ಗಾಯಗೊಂಡ ಮಂಜುನಾಥ ರಕ್ತಸ್ರಾವದಿಂದ ಆಸ್ಪತ್ರೆಗೆ ಸಾಗಿಸುವ ಮುನ್ನವೇ ಉಸಿರು ಚಲ್ಲಿದ್ದಾನೆ.

ಮೊಂಜುನಾಥ ಸಾವನ್ನಪ್ಪಿದ ವಿಷಯ ತಿಳಿಯುತ್ತಿದಂತೆ ಪೊಲೀಸ್ ಠಾಣೆಗೆ ಬಂದು ದಯಾನಂದ ಶರಣಾಗಿದ್ದಾನೆ. ಬೈಲಹೊಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರೈತ ಮಕ್ಕಳಿಗೆ ಜೇನುಗಾರಿಕೆ ತರಬೇತಿ

**ಚಿಕ್ಕಮಗಳೂರು:** 2025-26ನೇ ಸಾಲಿಗೆ ತೋಟಗಾರಿಕೆ ಇಲಾಖೆ ಕೊಡಗು ಜಿಲ್ಲೆ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಭಾಗಮಂಡಲ ಜೇನುಗಾರಿಕೆ ತರಬೇತಿ ಕೇಂದ್ರದಲ್ಲಿ ಇಲಾಖೆಯ ವತಿಯಿಂದ ರೈತರ ಮಕ್ಕಳಿಗೆ ಉಚಿತವಾಗಿ 3 ತಿಂಗಳ ಜೇನುಗಾರಿಕೆ ತರಬೇತಿಯನ್ನು ನವೆಂಬರ್ 4 ರಿಂದ 2026ರ ಫೆಬ್ರವರಿ 3 ರವರೆಗೆ ಆಯೋಜಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಸಾಮಾನ್ಯ (ಇತರೆ) ವರ್ಗದ 18 ರಿಂದ 35 ವಯೋಮಿತಿಯ ಒಬ್ಬರು ಪುರುಷ ಅಭ್ಯರ್ಥಿಗೆ ಈ ತರಬೇತಿಯಲ್ಲಿ ಭಾಗವಹಿಸಲು ಅವಕಾಶವಿದೆ.ಅರ್ಜಿಗಳನ್ನು ಅಕ್ಟೋಬರ್ 27 ರವರೆಗೆ ತೋಟಗಾರಿಕಾ ಜಂಟಿ ನಿರ್ದೇಶಕರು (ಜಿ.ಪಂ.), ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಕಚೇರಿ, ಬೋಳರಾಮೇಶ್ವರ ದೇವಸ್ಥಾನದ ಹತ್ತಿರ, ಚಿಕ್ಕಮಗಳೂರು ಇಲ್ಲಿ ಪಡೆದುಕೊಳ್ಳಬಹುದು ಅಥವಾ ಇಲಾಖಾ ವೆಬ್‌ಸೈಟ್(<https://horticulturedir.karnataka.gov.in/>)ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿ ಶುಲ್ಕದ ಬಾಬು ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ ರೂ. 20 ಗಳ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (ಐಪಿಒ) ಅಥವಾ ಡಿಮಾಂಡ್ ಡ್ರಾಫ್ಟ್ (ಡಿಡಿ) ಅನ್ನು ತೋಟಗಾರಿಕೆ ಜಂಟಿ ನಿರ್ದೇಶಕರು (ಜಿ.ಪಂ.) ಚಿಕ್ಕಮಗಳೂರು ರವರ ಹೆಸರಿನಲ್ಲಿ ಪಡೆದು ಅರ್ಜಿ ಜೊತೆಗೆ ಲಗತ್ತಿಸಬೇಕು.ತರಬೇತಿಗೆ ಪ್ರವೇಶ ಬಯಸುವ ಅಭ್ಯರ್ಥಿ ಹತ್ತನೇ ತರಗತಿ. (ಎಸ್.ಎಸ್.ಎಲ್.ಸಿ) ಪರೀಕ್ಷೆಯಲ್ಲಿ ಉತ್ತೀರ್ಣನಾಗಿರಬೇಕು. ತಂದೆ, ತಾಯಿ ಅಥವಾ ಪೋಷಕರ ಹೆಸರಿನಲ್ಲಿ ಕಡ್ಡಾಯವಾಗಿ ಜಮೀನನ್ನು ಹೊಂದಿರಬೇಕು ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಈ ಬಗ್ಗೆ ಪಹಣಿಯನ್ನು ನೀಡುವುದು ಕಡ್ಡಾಯ. ತರಬೇತಿ ಅವಧಿಯಲ್ಲಿ ಅಭ್ಯರ್ಥಿಯು ವಸತಿಗೃಹದಲ್ಲಿ ತಂಗುವುದು ಕಡ್ಡಾಯವಾಗಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅಕ್ಟೋಬರ್ 30ರ ಸಂಜೆ 5 ಗಂಟೆಯವರೆಗೆ ಅವಕಾಶವಿದೆ. ಸಂದರ್ಶನ ನಡೆಸಿ ಆಯ್ಕೆ ಪಟ್ಟಿಯನ್ನು ಅಕ್ಟೋಬರ್ 31 ರಂದು ಪ್ರಕಟಿಸಲಾಗುತ್ತದೆ. ಹೆಚ್ಚಿನ ವಿವರಕ್ಕೆ ತೋಟಗಾರಿಕೆ ಜಂಟಿ ನಿರ್ದೇಶಕರು (ಜಿ.ಪಂ.), ಚಿಕ್ಕಮಗಳೂರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಚಿಕ್ಕಮಗಳೂರು, ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಕಳಸ ಹಾಗೂ ಬೀಜುವಳ್ಳಿ ತೋಟಗಾರಿಕೆ ಕ್ಷೇತ್ರ ಹಾಗೂ ತರಬೇತಿ ಕೇಂದ್ರ ಮೂಡಿಗೆರೆ ಅವರನ್ನು ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ (08262-295043, 229164) ಯನ್ನು ಸಂಪರ್ಕಿಸಬಹುದು.

# ಬಿಡದಿ ಕೈಗಾರಿಕಾ ಸಂಘದ ಕಾರ್ಯಗಾರ

**ರಾಮನಗರ:** ಬಿಡದಿ ಕೈಗಾರಿಕಾ ಸಂಘದ (ಬಿಐಎ) ಸಭಾಂಗಣದಲ್ಲಿ ಅ.28ರಂದು ಬೆಳಿಗ್ಗೆ 10.30ಕ್ಕೆ ಇಂಡಸ್ಟ್ರಿಯಲ್ ಪಾಲಿಸಿ 2025-30, ಜಡ್‌ಇಡಿ ಅಂಡ್ ಲೀನ್ ಮ್ಯಾನುಫ್ಯಾಕ್ಚರಿಂಗ್ ಕುರಿತು ಕಾರ್ಯಗಾರವನ್ನು ಆಯೋಜಿಸಲಾಗಿದೆ. ಪ್ರತಿಷ್ಠಿತ ಸಂಸ್ಥೆಯಿಂದ ಆಗಮಿಸುವ ಪರಿಣಿತ ಭೋಧಕರು ಎಂಎಸ್‌ಎಂಇ ಉದ್ದಿಮೆದಾರರಿಗೆ ಅತ್ಯುಪಯುಕ್ತ ಮಾಹಿತಿ ನೀಡುವರು.

ಆರ್‌ಎಎಂಪಿ ಯೋಜನೆಯು ಭಾರತ ಸರ್ಕಾರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯ (ಎಂಎಸ್‌ಎಂಇ ಮಿನಿಸ್ಟ್ರಿ) ಆರಂಭಿಸಿದ ಒಂದು ಪ್ರಮುಖ ಯೋಜನೆ.

ಇದರ ಉದ್ದೇಶ ಎಂಇಎಂಇಗಳ ಕೈಗಾರಿಕಾ ನೀತಿ 2025-30ರ ಬಗ್ಗೆ ಜಾಗೃತಿ ಮೂಡಿಸುವುದು. ಜಡ್‌ಇಡಿ (ಜೀರೋ ಡಿಫೆಕ್ಟ್ ಜೀರೋ ಎಫೆಕ್ಟ್) ತತ್ವದ ಮೂಲಕ ಉತ್ಪಾದನಾ ಗುಣಮಟ್ಟವನ್ನು ಹೆಚ್ಚಿಸಲು ಸಹಕರಿಸುವುದು ಹಾಗೂ ಲೀನ್ ಮ್ಯಾನುಫಾಕ್ಚರಿಂಗ್ ಮೂಲಕ ಎಂ.ಎಸ್.ಎಂ.ಇ ಗಳ ವ್ಯರ್ಥ ಸಮಯ ಕಡಿಮೆ ಮಾಡಿ ಕಾರ್ಯಕ್ಷಮತೆ ಹೆಚ್ಚಿಸಲು ಸಹಕರಿಸುವುದು.

ಆದ್ದರಿಂದ ಘಟಕಗಳ ಪ್ರತಿನಿಧಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, 2ನೇ ಮಹಡಿ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ) 562159. ದೂ.ಸಂ: 080-22220122/0212/884569687 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ದೀರ್ಘಕಾಲ Earphone ಹಾಕಿಕೊಳ್ಳುತ್ತೀರಾ? ಕಿವಿಗೆ Fungal infections ಬರಬಹುದು ಎಚ್ಚರ!

ಮನೆಯಿಂದಾಚೆ ಕಾಲಿಡುತ್ತಿದ್ದಂತೆ ಇಯರ್‌ಫೋನ್ ಕಿವಿಯೇರುತ್ತದೆ. ಬಸ್, ರೈಲು, ಮೆಟ್ರೊ ಪ್ರಯಾಣಿಕರನ್ನು ಗಮನಿಸಿದರೆ ಹತ್ತರಲ್ಲಿ ಎಂಟು ಮಂದಿ ಕಿವಿಗೆ ಇಯರ್‌ಫೋನ್ ಹಾಕಿ ಹಾಡು ಕೇಳುತ್ತಿರುತ್ತಾರೆ. ಕೆಲವರು ಸಿನಿಮಾ ವೀಕ್ಷಣೆ, ವಿಡಿಯೊ ಗೇಮ್‌ನಲ್ಲಿ ಮುಳುಗಿರುತ್ತಾರೆ. ಹದಿ ಹರೆಯದವರಲ್ಲಿ ಇಯರ್‌ಫೋನ್ ಗೀಳು ಹೆಚ್ಚಾಗಿ ಕಂಡುಬರುತ್ತಿದೆ.

ಇಯರ್‌ಫೋನ್ ಹಾಕಿಕೊಂಡು ಮ್ಯೂಸಿಕ್ ಕೇಳಲು, ವಿಡಿಯೋ ನೋಡಲು, ಫೋನ್‌ನಲ್ಲಿ ಮಾತಾಡಲು ಖುಷಿ ಆಗುತ್ತದೆ. ಆದರೆ, ಅದರಿಂದಾಗುವ ಅಡ್ಡಪರಿಣಾಮಗಳ ಬಗ್ಗೆ ಯಾರೂ ಗಮನ ಹರಿಸುವುದಿಲ್ಲ.


ನಿಮಗೆ ಅರಿವಿರುವಂತೆ, ಇಯರ್‌ಫೋನ್ ಅಥವಾ ಇಯರ್ ಬಡ್ ಏನೇ ಇದ್ದರೂ ಕಿವಿಯ ಹತ್ತಿರದಲ್ಲೇ

ಇದ್ದು ಶಬ್ದವು ಕಿವಿಯ ಒಳಗೆ ಕೇಳಿಸುವಂತೆ ಮಾಡುತ್ತದೆ. ಅತ್ಯಂತ ಹತ್ತಿರದಿಂದ ಶಬ್ದ ಕಿವಿಗೆ ಕೇಳುವುದರಿಂದ ಕಿವಿಗೆ ಗಂಭೀರ ಸಮಸ್ಯೆಗಳಾಗಬಹುದು. ಇದು ಶಾಶ್ವತ ಹಾನಿಗೂ ಕಾರಣವಾಗಬಹುದು.

ದೀರ್ಘಕಾಲಿಕ ಇಯರ್‌ಫೋನ್ ಬಳಕೆಯಿಂದ ಚರ್ಮದ ಅಲರ್ಜಿ, ಫಂಗಲ್ ಇನ್ಫೆಕ್ಷನ್ (ಶಿಲೀಂಧ್ರ ಸೋಂಕು) ಎದುರಾಗಬಹುದು.

ಇತ್ತೀಚೆಗೆ ಇಎನ್‌ಟಿ ಚಿಕಿತ್ಸಾಲಯಗಳಲ್ಲಿ ಬರುತ್ತಿರುವ ಸಾಕಷ್ಟು ಜನರು ಈ ಸಮಸ್ಯೆಗಳಿಂದ ಬಳಲುತ್ತಿರುವುದು ಕಂಡು ಬರುತ್ತಿದೆ.

ಇಂುುರ್ ಫ಼ೋನ್ ಗ್ ಳಿಂದ್



ಉಂಟಾಗುವ ಕಾಂಟ್ಯಾಕ್ಟ್ ಡರ್ಮಟೈಟಿಸ್ (ಇಯರ್‌ಫೋನ್‌ಗಳ ರಬ್ಬರ್, ಪ್ಲಾಸ್ಟಿಕ್ ಮತ್ತು ಲೋಹದ ಭಾಗಗಳಿಗೆ ಅಲರ್ಜಿಯ ಪ್ರತಿಕ್ರಿಯೆ) ಪ್ರಕರಣಗಳೂ ಕೂಡ ಹೆಚ್ಚಾಗುತ್ತಿದೆ.

ಇದು ಕಿವಿಯೊಳಗೆ ಮತ್ತು ಸುತ್ತಲೂ ತುರಿಕೆ, ಕೆಂಪು ಅಥವಾ ಸಿಪ್ಪೆ ಸುಲಿಯುವಿಕೆಗೆ ಕಾರಣವಾಗುತ್ತದೆ, ಜೊತೆಗೆ ಕಿವಿಯೊಳಗೆ ಸಿಲುಕಿಕೊಳ್ಳುವ ಬೆವರು ಮತ್ತು ತೇವಾಂಶದಿಂದ ಸೋಂಕುಗಳು ಕಂಡು ಬರುತ್ತಿರುವುದು ವರದಿಯಾಗಿವೆ.

# ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ

**ಚಿತ್ರದುರ್ಗ** :ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಕರ್ನಾಟಕ ಸರ್ಕಾರದ ಭೋವಿ ಅಭಿವೃದ್ಧಿ ನಿಗಮಕ್ಕೆ ನೂತನ ಅಧ್ಯಕ್ಷರಾದ ಎಂ.ರಾಮಪ್ಪ ತಿಳಿಸಿದರು.

ಕರ್ನಾಟಕ ಸರ್ಕಾರದ ಭೋವಿ ಅಭಿವೃದ್ಧಿ ನಿಗಮಕ್ಕೆ ನೂತನ ಅಧ್ಯಕ್ಷರಾಗಿ ಪ್ರಥಮ ಭಾರಿಗೆ ಚಿತ್ರದುರ್ಗಕ್ಕೆ ಆಗಮಿಸಿದ ಅವರು ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ನಾನು ಬಡತನದ ಹಿನ್ನೆಲೆಯಿಂದ ಬಂದಿದ್ದೇನೆ. ಬಡವರ ಕಷ್ಟಕಾರ್ಪಣ್ಯಗಳು ಹತ್ತಿರದಿಂದ ಅನುಭವಿಸಿದ್ದೇನೆ. ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ರಾಜ್ಯ ಪ್ರವಾಸ ಮಾಡಿ ಸಮಾಜದ ಸ್ಥಿತಿಗಳನ್ನು ಸ್ವತಃ ಅರ್ಥೈಸಿಕೊಂಡು ಸ್ಪಂದಿಸುತ್ತೇನೆ. ಬಡವರು ಮುಗ್ದ ಜನರು ಯಾರ ಶಿಫಾರಸ್ಸು ಪಡೆಯದೆ ದಲ್ಲಾಳಿಗಳನ್ನು ಸಂಪರ್ಕಿಸಿದೆ ನೇರವಾಗಿ ನಿಗಮಕ್ಕೆ ಭೇಟಿ ನೀಡಿ, ಸಂವಿಧಾನದ ಅಡಿಯಲ್ಲಿ ಶಾಸಕರ ಸಚಿವರು ಗುರುತಿಸುವ ಅರ್ಹ ವ್ಯಕ್ತಿಗಳಿಗೂ ಹಾಗೂ ನಿರ್ಲಕ್ಷ್ಯಕ್ಕೆ ಒಳಪಟ್ಟ ಉತ್ಸಾಹಿ ಯುವಕರಿಗೆ ಸ್ಪಂದಿಸುವ ಕಾರ್ಯಕ್ಕೆ ಮೊದಲನೇ ಆದ್ಯತೆ ನೀಡುತ್ತೇನೆ ನಿಗಮಕ್ಕೆ




ನೇಮಕಗೊಳ್ಳಲು ಕಾರಣೀಭೂತರಾದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಪಕ್ಷದ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಸಚಿವ ಶಿವರಾಜ ತಂಗಡಗಿಯವರಿಗೆ ಗೌರವ ತರುವಂತೆ ಘನವ್ಯಕ್ತಿತ್ವದಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ಕಛೇರಿ ಕೆಲಸದ ಜೊತೆ ಜೊತೆಯಲ್ಲಿ ರಾಜ್ಯಾಪ್ರವಾಸ ಮಾಡಿ ಜನರ ಜೀವನ ಸ್ಥಿತಿಗತಿಯನ್ನು ಖುದ್ದಾಗಿ ಅರ್ಥೈಸಿಕೊಂಡು ಜನರಿಗೆ ಸಹಾಯ ಸ್ಪಂದನೆ ಸಹಕಾರ ಮಾಡಲಾಗುವುದು. ಜನರಿಗೆ ಸ್ಪಂದಿಸುವ ಮನೋಭಾವದೊಂದಿಗೆ ಪಕ್ಷಕ್ಕೆ ಶಕ್ತಿ ತುಂಬುವ ಕಾರ್ಯನ್ಮೂಖಿಗೊಳ್ಳುವೆ. ಸರ್ಕಾರ ನೀಡುವ ಯೋಜನೆಗಳನ್ನು ಸಮುದಾಯದ ಕಟ್ಟಕಡೆಯ ವ್ಯಕ್ತಿಗಳಿಗೆ ಮುಟ್ಟಿಸುವ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಿಸಿಸಿ ಅಧ್ಯಕ್ಷರಾದ ತಾಜ್ ಪೀರ್, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಆರ್.ಕೆ.ಸರ್ದಾರ್, ಓಬಿಸಿ ಅಧ್ಯಕ್ಷರಾದ ಎನ್.ಡಿ.ಕುಮಾರ್, ಲಕ್ಷ್ಮೀಕಾಂತ್, ಅಂಜನಪ್ಪ, ಮುದಾಸಿರ್ ನವಾಜ್, ಕನಕದಾಸ್, ಮಹಡಿ ಶಿವಮೂರ್ತಿ, ಗೀತಾ ನಂದಿನಿಗೌಡ, ಖುದ್ದುಸ್ ಆಲ್ಲಾಭಕ್ಷಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರದ ಪಾರ್ಶ್ವನಾಥ ವಿದ್ಯಾಸಂಸ್ಥೆ ವತಿಯಿಂದ ದೀಪಾವಳಿ ಆಚರಣೆ



**ಚಿತ್ರದುರ್ಗ:** ಚಿತ್ರದುರ್ಗ ನಗರದ ಪಾರ್ಶ್ವನಾಥ ವಿದ್ಯಾಸಂಸ್ಥೆವತಿಯಿಂದ ಶನಿವಾರ ಶಾಲಾ ಆವರಣದಲ್ಲಿ ದೀಪಾವಳಿ ಹಬ್ಬವನ್ನು ಮಕ್ಕಳ ಸಮ್ಮುಖದಲ್ಲಿ ಆಚರಣೆಯನ್ನು ಮಾಡಲಾಯಿತು.

ಈ ಸಮಯದಲ್ಲಿ ಸುಮಾರು 1500 ದೀಪಗಳನ್ನು ಹಚ್ಚುವುದರ ಮೂಲಕ ದೀಪಾವಳಿಯನ್ನು ಆಚರಣೆ ಮಾಡಲಾಯಿತು.

ಶ್ರೀ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಶಾಲಾ ಆಧ್ಯಕ್ಷರಾದ ಬಾಬುಲಾಲ್ ಪೈಯಾದ್ ದೀಪವನ್ನು ಹಚ್ಚುವುದರ ಮೂಲಕ ಉದ್ಘಾಟಿಸಿ ಮಾತನಾಡಿ, ಈ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿ ಹಬ್ಬವಾಗಿ ಆಚರಣೆಯನ್ನು ಮಾಡಿ, ಹೆಚ್ಚಾಗಿ ಶಬ್ದವನ್ನು ಮಾಡುವಂತ ಹಾಗೂ ಹೆಚ್ಚಾಗಿ ಮಾಲಿನ್ಯವನ್ನು ಉಂಟು ಮಾಡುವಂತ ಪಟಾಕಿಗಳನ್ನು

ಹಚ್ಚ ಬೇಡಿ ಇದರಿಂದ ನಮ್ಮ ಪರಿಸರಕ್ಕೆ ಹಾನಿಯಾಗುವುದ್ದಲ್ಲದೆ ನಮ್ಮ ಸುತ್ತಾ-ಮುತ್ತಲ್ಲಿನ ಪ್ರಾಣಿ ಪಕ್ಷಿಗಳಿಗೂ ಸಹಾ ತೊಂದರೆಯಾಗಲಿದೆ ಅವುಗಳಿಗೆ ತೊಂದರೆಯಾಗದಂತೆ

ನೋಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ, ಮಕ್ಕಳು ಪಟಾಕಿಯನ್ನು ಹಚ್ಚುವಾಗ ಪೋಷಕರ ಸಹಾಯವನ್ನು ಪಡೆಯಿರಿ ನೀವೇ ಪಟಾಕಿಯನ್ನು ಹಚ್ಚುವಂತ ಕಾರ್ಯಕ್ಕೆ ಹೋಗಬೇಡಿ ಈ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಣೆಯನ್ನು ಮಾಡಿ ಎಂದು ಮಕ್ಕಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಕಾರ್ಯದರ್ಶಿ ಸುರೇಶ್ ಕುಮಾರ್, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರಾದ ಶಾಂತ ಕುಮಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯರಾದ ನಾಜೀಮಾ ಸ್ವಾಲೇಹ, ಪ್ರೌಢ ಶಾಲಾ ಮುಖ್ಯಸ್ಥರಾದ ಜನಕರೆಡ್ಡಿ, ಶಾಲೆಯ ಆಡಳಿತ ಮಂಡಳಿ, ಭೋದಕ ಹಾಗೂ ಭೋದಕೇತರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಮಕ್ಕಳು ದೀಪಾವಳಿಯ ಹಬ್ಬದ ಅಂಗವಾಗಿ ದೀಪದ ಹಾಡುಗಳಿಗೆ ನೃತ್ಯವನ್ನು ಮಾಡಿದರು.

# ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ

**ಗದಗ:** 2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಸ್ಪರ್ಧೆಯನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಲಾಯನ್ಸ್ ಶಿಕ್ಷಣ ಸಂಸ್ಥೆ ಹಾಗೂ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ, ಗದಗ ಇವರ ಸಹಯೋಗದೊಂದಿಗೆ ಅಕ್ಟೋಬರ್ 25 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸನ್ಮಾರ್ಗ ಪದವಿ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದೆ.

ಸ್ಪರ್ಧೆಗಳ ವಿವರ :

ಸಾಂಸ್ಕೃತಿಕ ಸ್ಪರ್ಧೆ: ಜನಪದ ನೃತ್ಯ ( ತಂಡ) (10 ಜನ ಸ್ಪರ್ಧಾಳುಗಳು) – ಸ್ಪರ್ಧಾ ಸಮಯ 15 ನಿಮಿಷ ; ಜನಪದ ಗೀತೆ ( ತಂಡ ) ಪ್ರಾದೇಶಿಕ ಭಾಷೆ ( 10 ಜನ ಸ್ಪರ್ಧಾಗಳುಗಳು)– ಸ್ಪರ್ಧ ಸಮಯ 7 ನಿಮಿಷ; ಕಥೆ ಬರೆಯುವುದು (ವೈಯಕ್ತಿಕ ) (1000 ಪದಗಳಿಗೆ ಮೀರದಂತೆ ) ಕನ್ನಡ/ ಆಂಗ್ಲ/ ಹಿಂದಿ ಭಾಷೆಯಲ್ಲಿ – ಸ್ಪರ್ಧಾ ಸಮಯ 60 ನಿಮಿಷ; ಚಿತ್ರಕಲೆ (ವೈಯಕ್ತಿಕ) ಎ 3 ಸೈಜ್ 11.7 * 16.5 “ □ 90 ನಿಮಿಷ; ಘೋಷಣೆ ( ವೈಯಕ್ತಿಕ ಸ್ಪರ್ಧೆ) ಆಂಗ್ಲ /ಹಿಂದಿ ಭಾಷೆಯಲ್ಲಿ ಇರಬೇಕು. ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 7 ನಿಮಿಷಗಳು ಭಾಷಣ ಮಾಡಬೇಕು– ಸ್ಪರ್ದಾ ಸಮಯ 7 ನಿಮಿಷ; ಕವಿತೆ ಬರೆಯುವುದು ( ವೈಯಕ್ತಿಕ ) ( 1000 ಪದಗಳಿಗೆ ಮೀರದಂತೆ ) ಕನ್ನಡ / ಆಂಗ್ಲ / ಹಿಂದಿ ಭಾಷೆಯಲ್ಲಿ – ಸ್ಪರ್ಧಾ ಸಮಯ 90 ನಿಮಿಷ.

ಇನೋವೇಷನ್ ಟ್ರಾ ಕ್ : ಎಕ್ಸಿಬಿಷನ್ ಆಫ್ ಸೈನ್ಸ್ ಮೇಳ ( ಗುಂಪು) ರಾಜ್ಯ ಮಟ್ಟದವರಗೆ ಮಾತ್ರ ಆಯೋಜಿಸಲಾಗುವುದು.

ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ 15 ರಿಂದ 29 ವರ್ಷ ವಯೋಮಾನದೊಳಗಿನ ಯುವಜನರನ್ನು ಮಾತ್ರ ಆಧಾರ ಕಾರ್ಡ ಅಥವಾ ಅಧಿಕೃತ ಜನ್ಮ ದಾಖಲೆಗಳನ್ನು ಆಧರಿಸಿ ಆಯ್ಕೆ ಪರಿಗಣಿಸಲಾಗುವುದು. ಭಾಗವಹಿಸುವ ಸ್ಪರ್ಧಾಳುಗಳು ಗದಗ ಜಿಲ್ಲೆಯವರಾಗಿರಬೇಕು ಅಥವಾ ಅನ್ಯ ಜಿಲ್ಲೆಯವರು ಭಾಗವಹಿಸಿದಲ್ಲಿ ಗದಗ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಸಂಸ್ಥೆಯಿಂದ ಗುರುತಿನ ಚೀಟಿ/ ದೃಢೀಕರಣ ಪತ್ರ ಸಲ್ಲಿಸೇಕು. ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಸತತಾಗಿ ಮೂರು ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೂ ಅಂತಹ ಯುವ ಜನರು ಭಾಗವಹಿಸುವಂತಿಲ್ಲ. ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ. ಬಾಗವಹಿಸುವವರು ಅಕ್ಟೋಬರ್ 24 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಗದಗ ಇಲ್ಲಿ ಕಚೇರಿ ವೇಳೆಯಲ್ಲಿ ಬಂದು ಹೆಸರನ್ನು ನೊಂದಾಯಿಸಿಕೊಳ್ಳತಕ್ಕದ್ದು. ಅಥವಾ ಸನ್ಮಾರ್ಗ ಪದವಿ ಪೂರ್ವ ಕಾಲೇಜು, ಮುಂಡರಗಿ ರಸ್ತೆ, ಗದಗ ಇಲ್ಲಿ ನೇರವಾಗಿ ಅಕ್ಟೋಬರ್ 25 ರಂದು ಬೆಳಿಗ್ಗೆ 10 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಅವಕಾಶ ಒದಗಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಆಯೋಜಿಸುವ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದವರಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು. ರಾಜ್ಯ ಮಟ್ಟಕ್ಕೆ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ಕಳುಹಿಸಿಕೊಡಲಾಗುವುದು.

ಭಾಗವಹಿಸುವ ಸ್ಪರ್ಧಾಳುಗಳಿಗೆ ಯಾವುದೇ ರೀತಿಯ ಪ್ರವಾಸ ಭತ್ಯೆ ನೀಡಲಾಗುವುದಿಲ್ಲ. ಮಧ್ಯಾಹ್ನ ಲಘು ಉಪಹಾರದ ವ್ಯವಸ್ತೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದೂರವಾಣಿ ಸಂಖ್ಯೆ 08372-238345 ಸಂಪರ್ಕಿಸಬಹುದಾಗಿದೆ.

# ಪಟಾಕಿ ಸ್ಟಾಲ್‌ಗಳಲ್ಲಿ ಮಕ್ಕಳನ್ನು ಬಳಸದಂತೆ ಸೂಚನೆ

**ಚಿಕ್ಕಮಗಳೂರು:** ದೀಪಾವಳಿ ಪಟಾಕಿ ತಯಾರಿಕೆ ಮಾರಾಟ ಹಾಗೂ ಇತರೆ ಅಪಾಯಕಾರಿ ಉದ್ದಿಮೆಗಳಲ್ಲಿ ಹಾಗೂ ಅಂಗಡಿಗಳಲ್ಲಿ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳದಂತೆ ಕಾರ್ಮಿಕ ಇಲಾಖೆ ಸೂಚಿಸಿದೆ.

ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆ 1986 ತಿದ್ದುಪಡಿ 2016 ಅನ್ನು ಸರ್ಕಾರ ಜಾರಿಗೊಳಿಸಿದೆ. ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಎಲ್ಲಿಯಾದರೂ ಈ ವಯಸ್ಸಿನವರು ನೇಮಕ ಮಾಡಿರುವುದು ಕಂಡು ಬಂದರೆ ಪಟಾಕಿ ಅಂಗಡಿ, ಉದ್ದಿಮೆಗಳ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ



**ಗದಗ :** ಕರ್ನಾಟಕ ಲೋಕಾಯುಕ್ತ ಗದಗ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಇವರುಗಳ ಸಹಯೋಗದಲ್ಲಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ-2025ನ್ನು ಸೋಮವಾರ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಶ್ರೀ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎನ್ ಶಿವನಗೌಡ್ರ ಉದ್ಘಾಟಿಸಿದರು. ಭ್ರಷ್ಟಾಚಾರ ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬ ಜವಾಬ್ದಾರಿಯುತ ನಾಗರಿಕರು ಯಾವ ಯಾವ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸಿ.ಎಸ್.ಶಿವನಗೌಡ್ರ ವಿವರಿಸಿದರು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ, ಎಸ್. ಗುಡಿಮನಿ ಅಧ್ಯಕ್ಷತೆ ವಹಿಸಿದ್ದರು.

ಪೊಲೀಸ್ ಉಪಾಧೀಕ್ಷಕ ವಿಜಯ ಬಿರಾದಾರ ಅವರು ಮಾತನಾಡಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹವನ್ನು ಆಚರಿಸುವ ಉದ್ದೇಶವನ್ನು ವಿವರಿಸಿದರು. ಭ್ರಷ್ಟಾಚಾರ ತಡೆಗಟ್ಟದೇ ಹೋದರೆ ಸಮಾಜದ ಪ್ರತಿ ವರ್ಗದ ನಾಗರಿಕರು ಸಮಸ್ಯೆಗಳನ್ನು ಅನುಭವಿಸಬೇಕಾಗುತ್ತದೆ. ಮುಂದಿನ ಪೀಳಿಗೆಯವರು ಸಮಾಜದಲ್ಲಿ ಮತ್ತು ಸಾರ್ವಜನಿಕ ಕ್ಷೇತ್ರಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಕಚೇರಿಯ ಅಧಿಕಾರಿ ಪರಮೇಶ್ವರ ಜಿ ಕವಟಗಿ, ಶ್ರೀಮತಿ ಎಸ್ ಎಸ್ ತೇಲಿ, ಪೊಲೀಸ್ ಇನ್ಸಪೆಕ್ಟರ್ ಯು.ಎನ್.ಸಂಗನಾಳ, ನೀಲಕಂಠಪ್ಪ ಪಿ ಅಂಬಿಗೇರ, ಮುತರೆಡ್ಡಿ, ಬಾರಡ್ಡಿ , ಮಂಜುನಾಥ ಎಸ್ ದಿಡಗೂರ, ಚನ್ನವೀರಪ್ಪ ಹುಣಸಿಕಟ್ಟಿ, ಜಯದೇವ ಮೆಣಸಗಿ, ಪ್ರಕಾಶ ಉಗಲಾಟದಿ, ಸಿದ್ರಾಮಪ್ಪ ಉಮಚಗಿ , ರಾಘವೇಂದ್ರ ಕಾಲವಾಡ, ಅಶೋಕ ಎಸ್ ಸಂಕಣ್ಣವರ, ಅರವಿಂದ ಕಾಮತ ಉಪಸ್ಥಿತರಿದ್ದರು.

# ಅಪಾಯಕಾರಿ ಉದ್ದಿಮೆಗಳಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ನಿಷೇಧ

**ದಾವಣಗೆರೆ :** ದಾವಣಗೆರೆ ಜಿಲ್ಲಾದ್ಯಂತ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆಯನ್ನು ಜಾರಿಗೆ ತಂದಿರುತ್ತದೆ.

ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದೆ. ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರೆ ಪ್ರಕ್ರಿಯೆಗಳು ಅಪಾಯಕಾರಿ ಉದ್ದಿಮೆಗಳಲ್ಲಿ ಬರುವುದರಿಂದ ಈ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ, ಬಳಸಿಕೊಳ್ಳದಂತೆ ತಿಳಿಸಲಾಗಿದೆ. ತಪ್ಪಿದಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೆಧ ಮತ್ತು ನಿಯಂತ್ರಣ) ಕಾಯ್ದೆಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಸಹಾಯಕ ಕಾರ್ಮಿಕ ಆಯುಕ್ತರು ತಿಳಿಸಿದ್ದಾರೆ.

# ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025-26 ನೇ ಸಾಲಿನಲ್ಲಿ ಕೃಷಿ ಕ್ಷೇತ್ರದಲ್ಲಿ ಸಾಧನಗೈದ ಜಿಲ್ಲೆಯ ಆಸಕ್ತ ರೈತರಿಂದ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆತ್ಮ ಯೋಜನೆಯಡಿ ಕೃಷಿಯಲ್ಲಿ ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಸಾಕಾಣಿಕೆ ಚಟುವಟಿಕೆಯಲ್ಲಿ ಸಾಧನೆ ಮಾಡಿದವರು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ.ನಿಗದಿತ ನಮೂನೆ ಅರ್ಜಿಯನ್ನು ನ.3 ರ ಸಂಜೆ 5.30 ರೊಳಗೆ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ರೈತ ಸಂಕರ್ಪ ಕೇಂದ್ರದ ಅಧಿಕಾರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳ

**ಚಿಕ್ಕಮಗಳೂರು:** ನಗರದ ಜಿಲ್ಲಾ ಪಂಚಾಯಿತಿ ಸಮೀಪದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಪ್ರಧಾನ ಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಬಿ.ಇ., ಡಿಪ್ಲೊಮಾ, ಪದವಿ, ಪಿ.ಯು.ಸಿ., ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ಹಾಗೂ ಐ.ಟಿ.ಐ.ನ ವಿವಿಧ ವೃತ್ತಿಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಈ ಅಪ್ರೆಂಟಿಶಿಪ್ ಮೇಳದಲ್ಲಿ ತಮ್ಮ ಎಲ್ಲಾ ಮೂಲ ದಾಖಲಾತಿಗಳನ್ನು ಅಧಾರ್ ಸಂಖ್ಯೆ ಮತ್ತು ಇ-ಮೇಲ್ ಐಡಿಯೊಂದಿಗೆ ಹಾಜರಾಗಬಹುದು.

ಈ ಮೇಳದಲ್ಲಿ ವಿವಿಧ ಉದ್ದಿಮೆಗಳು ಪಾಲ್ಗೊಳ್ಳುತ್ತಿದ್ದು, ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳನ್ನು ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಜಿಲ್ಲೆಯ ಎಲ್ಲ ಉದ್ದಿಮೆಗಳು ಈ ಮೇಳದಲ್ಲಿ ಭಾಗವಹಿಸಿ ತಮ್ಮ ಉದ್ದಿಮೆಯನ್ನು ಅಪ್ರೆಂಟಿಶಿಪ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಲು ಮತ್ತು ಅಪ್ರೆಂಟಿಶಿಪ್ ತರಬೇತಿಗೆ ನೋಂದಣಿ ಮಾಡಿಸಿರುವ ಅಭ್ಯರ್ಥಿಗಳನ್ನು ತಮಗೆ ಅವಶ್ಯಕವಿರುವ ಖಾಲಿ ಸ್ಥಾನಗಳಿಗೆ ಭರ್ತಿಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಪ್ರೆಂಟಿಶಿಪ್ ಮೇಳದಲ್ಲಿ

ಅರ್ಹ ವಿದ್ಯಾರ್ಹತೆ ಹೊಂದಿರುವ ಎಲ್ಲ ಅಭ್ಯರ್ಥಿಗಳು ಹಾಗೂ ಉದ್ದಿಮೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮೇಳದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9611596629, 9964070245, 9480489306, 9886028437, 7411869736, 9972594567, 8553651973, 7019174607 ಹಾಗೂ 8792139703 ಸಂಖ್ಯೆಗಳನ್ನು ಸಂಪರ್ಕಿಸಬಹುದು .

# ಇಂಗ್ಲೆಂಡ್ ವಿರುದ್ಧ ಸೋಲಿನ ಹೊಣೆ ಹೊತ್ತುಕೊಂಡ ಸ್ಮೃತಿ ಮಂಧಾನ

**ಇಂದೋರ್:** ಮಹಿಳಾ ವಿಶ್ವಕಪ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ನಾಲ್ಕು ರನ್‌ಗಳ ಹೃದಯವಿದ್ರಾವಕ ಸೋಲಿಗೆ ಭಾರತದ ಉಪನಾಯಕಿ ಸ್ಮೃತಿ ಮಂಧಾನಾ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

289 ರನ್‌ಗಳ ಗುರಿಯನ್ನು ಹೊಂದಿದ್ದ ಭಾರತ, ಆರಂಭಿಕ ಆಟಗಾರ್ತಿ ಮಂಧಾನ (88) ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರೊಂದಿಗೆ 125 ಮತ್ತು ದೀಪ್ತಿ ಶರ್ಮಾ ಅವರೊಂದಿಗೆ 67 ರನ್‌ಗಳ ಎರಡು ನಿರ್ಣಾಯಕ ಪಾಲುದಾರಿಕೆಗಳನ್ನು ಗಳಿಸುವ ಮೂಲಕ ಉತ್ತಮ ಹಾದಿಯಲ್ಲಿ ಸಾಗಿತು.

ಆದರೆ ಅವರ ತಪ್ಪಾದ ಸಮಯಕ್ಕೆ




ಲಾಫ್‌ಮಾಡಿದ ಶಾಟ್ ಲಾಂಗ್-ಆಫ್ ಮುಳುವಾಯಿತು. ಏಕೆಂದರೆ ರಿಚಾ ಘೋಷಷ್ ನೇರವಾಗಿ ಕವರ್‌ಗೆ ಒಂದನ್ನು ಡ್ರಿಲ್ ಮಾಡಿದರು ಮತ್ತು ನಂತರ, ದೀಪ್ತಿ ಸ್ಲಾಗ್ ಅನ್ನು ತಪ್ಪಿಸಿದರು ಏಕೆಂದರೆ ಭಾರತ ನಿರ್ಣಾಯಕ ವಿಕೆಟ್‌ಗಳನ್ನು ಕಳೆದುಕೊಂಡು ಗುರಿಯನ್ನು ತಲುಪಲು ಕಷ್ಟವಾಯಿತು.

ಆ ಸಮಯದಲ್ಲಿ ಎಲ್ಲರ ಶಾಟ್ ಆಯ್ಕೆಗಳು ನಮ್ಮ ಶಾಟ್ ಆಯ್ಕೆಗಳೊಂದಿಗೆ ನಾವು ಉತ್ತಮವಾಗಿ ಮಾಡಬಹುದಿತ್ತು ಎಂದು ನಾನು ಭಾವಿಸುತ್ತೇನೆ. ವಿಶೇಷವಾಗಿ ಅದು ನನ್ನಿಂದ ಪ್ರಾರಂಭವಾಯಿತು, ಆದ್ದರಿಂದ ಶಾಟ್ ಆಯ್ಕೆ ಉತ್ತಮವಾಗಿರಬೇಕಿತ್ತು ಎಂದು ಹೀಗಾಗಿ ಸೋಲಿನ ಜವಾಬ್ದಾರಿಯನ್ನು ನಾನೇ ತೆಗೆದುಕೊಳ್ಳುತ್ತೇನೆ ಎಂದು ಅವರು ಹೇಳಿದರು.ನಮಗೆ ಪ್ರತಿ ಓವರ್‌ಗೆ ಆರು (ರನ್‌ಗಳು) ಮಾತ್ರ ಬೇಕಾಗಿತ್ತು. ಬಹುಶಃ ನಾವು ಆಟವನ್ನು ಆಳವಾಗಿ ತೆಗೆದುಕೊಳ್ಳಬೇಕಾಗಿತ್ತು. ಕುಸಿತವು ನನ್ನಿಂದಲೇ ಪ್ರಾರಂಭವಾದ ಕಾರಣ ನಾನು ಅದನ್ನು ನನ್ನ ಮೇಲೆ ತೆಗೆದುಕೊಳ್ಳುತ್ತೇನೆ.

ವೈಮಾನಿಕ ಹೊಡೆತಗಳನ್ನು ತಪ್ಪಿಸುವ ತನ್ನದೇ ಆದ ಯೋಜನೆಯಿಂದ ವಿಮುಖಳಾದಾಗ ಭಾವನೆಗಳು ತನ್ನ ಮೇಲೆ ಮೇಲುಗೈ ಸಾಧಿಸಿದವು ಎಂದು ಎಡಗೈ ಆಟಗಾರ್ತಿ ಹೇಳಿದರು.

ನಾವು ಬ್ಯಾಟಿಂಗ್ ಮಾಡುತ್ತಿದ್ದಾಗ ನಾವು ಗೆಲುವು ಸಾಧಿಸಲು ಸಾಧ್ಯವಾಗುತ್ತದೆ ಎಂದು ನನಗೆ ಸಾಕಷ್ಟು ವಿಶ್ವಾಸವಿತ್ತು, ಆದರೆ ಇದು ಕ್ರಿಕೆಟ್, ನೀವು ಎಂದಿಗೂ ಮುಂದೆ ಯೋಚಿಸಲು ಸಾಧ್ಯವಿಲ್ಲ.ಆಸ್ಟ್ರೇಲಿಯಾ ವಿರುದ್ಧದ ಹಿಂದಿನ ಪಂದ್ಯದಲ್ಲಿ ಭಾರತದ ಪ್ರದರ್ಶನದಂತೆಯೇ

ಈ ಕುಸಿತವೂ ಇತ್ತು, ಅಲ್ಲಿ ಅಗ್ರ ಕ್ರಮಾಂಕವು ಘನ ವೇದಿಕೆಯನ್ನು ಒದಗಿಸಿತು, ಮಧ್ಯಮ ಮತ್ತು ಕೆಳ ಕ್ರಮಾಂಕದ ಬ್ಯಾಟ್ಸ್‌ಮನ್‌ಗಳು ಕುಸಿಯಲು ಮಾತ್ರ.ಆದಾಗ್ಯೂ, ಮಂಧಾನ ಕೂಡ ಬ್ಯಾಟಿಂಗ್ ಘಟಕವನ್ನು ಸಮರ್ಥಿಸಿಕೊಂಡರು.

# ಮೂರು ಬಸ್‌ಗಳ ನಡುವೆ ಭೀಕರ ಅಪಘಾತ, ಇಬ್ಬರು ಮಹಿಳೆಯರು ಸಾವು

**ಮಂಡ್ಯ:** ಜಿಲ್ಲೆಯ ಮಳವಳ್ಳಿ ತಾಲೂಕಿನ ಬಾಚನಹಳ್ಳಿ ಸಮೀಪದ ರಾಷ್ಟ್ರಿಯ ಹೆದ್ದಾರಿಯಲ್ಲಿ ಸಾರಿಗೆ ಸಂಸ್ಥೆ ಬಸ್ ಗಳ ನಡುವೆ ಭೀಕರ ಸರಣಿ ಅಪಘತ ಸಂಭವಿಸಿ ಇಬ್ಬರು ಮಹಿಳೆಯರು ಮೃತಪಟ್ಟಿರುವ ಘಟನೆ ಸಂಜೆ ನಡೆದಿದೆ.

ಕೊಳ್ಳೆಗಾಲ ತಾಲೂಕಿನ ಕರಿಯನಪುರ ಮಹಾದೇವ ಎಂಬುವವರ ಪತ್ನಿ ನಾಗಮ(60) ಹಾಗೂ ಹಲಗಪುರ ಗ್ರಾಮದ ಬಸವಣ್ಣ ಎಂಬುವವರ ಪತ್ನಿ ರತ್ನಮ(46) ಸಾವನ್ನಪ್ಪಿದ್ದು, ಎಪ್ಪತ್ತಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ.

ಇವರಲ್ಲಿ 40ಕ್ಕೂ ಹೆಚ್ಚು ಪ್ರಯಾಣಿಕರನ್ನು ಜಿಲ್ಲೆಯ ವಿವಿಧೆಡೆ ಆಸ್ಪತ್ರೆಗಳಿಗೆ ಹಾಗೂ ಉಳಿದ ಗಾಯಾಳುಗಳನ್ನು ಕೊಳ್ಳೆಗಾಲದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸಿ ಮೈಸೂರಿಗೆ ರವಾನಿಸಲಾಗಿದೆ. ಇವರ ಪೈಕಿ ಇಬ್ಬರು ಬಸ್ ಚಾಲಕರು ಸೇರಿ ಎಂಟು ಜನರ ಸ್ಥಿತಿ ಚಿಂತಜನಕವಾಗಿದೆ ಎನ್ನಲಾಗಿದೆ.

ಘಟನೆ ವಿವರ: ನಿನ್ನೆ ಸಂಜೆ ಬಾಚನಹಳ್ಳಿ ಸಮೀಪ ಜೋರು ಮಳೆ ಬರುತ್ತಿದ್ದ ಸಂದರ್ಭದಲ್ಲಿ ಕೊಳ್ಳೆಗಾಲ ಕಡೆಯಿಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನ ಚಾಲಕ ರಸ್ತೆಯ ತಿರುವಿನಲ್ಲಿ ಮುಂದೆ ಹೋಗುತ್ತಿದ್ದ ಬೈಕ್ ಹಿಂದಿಕ್ಕಲು ಏಕಾಏಕಿ ಮುನ್ನುಗ್ಗಿದಾಗ ಈ ವೇಳೆ ಎದುರಿನಿಂದ ಬರುತ್ತಿದ್ದ ಮತ್ತೊಂದು ಕೆಎಸ್‌ಆರ್‌ಟಿಸಿ ಬಸ್‌ಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ.ಈ ಬಸ್ ಹಿಂಬದಿ ಬರುತ್ತಿದ್ದ ಮತ್ತೊಂದು ಬಿಎಂಟಿಸಿ ಬಸ್ ಕೂಡ ಚಾಲಕನ ನಿಯಂತ್ರಣ ಕಳೆದುಕೊಂಡು ಡಿಕ್ಕಿ ಸಂಭವಿಸಿ ಅವಘಡ ಸಂಭವಿಸಿದೆ. ಬಸ್‌ಗಳ ಸರಣಿ ಅಪಘಾತದ ತೀವ್ರತೆಗೆ ಮೂರು ಬಸ್‌ಗಳು ನಜ್ಜುಗುಜ್ಜಾಗಿ ಬಸ್ ಗಳಲ್ಲಿದ್ದ ಬಹಳಷ್ಟು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.ಘಟನೆಯಿಂದ ಬಸ್‌ನ ಮೂವರು ಚಾಲಕರು ಗಾಯಗೊಂಡರೇ ಇಬ್ಬರು ಚಾಲಕರ ಸ್ಥಿತಿ ಗಂಭೀರವಾಗಿದೆ.ಬಸ್‌ಗಳ ಅಪಘಾತದಿಂದ ಒಂದು ಗಂಟೆಗೂ ಹೆಚ್ಚು ಸಮಯ ರಾಷ್ಟ್ರಿಯ ಹೆದ್ದಾರಿಯಲ್ಲಿ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಅಪಘಾತದ ವಿಷಯ ತಿಳಿಯುತ್ತಿದ್ದಂತೆ ತಾಲೂಕಿನ ಎಲ್ಲಾ ಠಾಣೆಗಳ ಪೊಲೀಸರು ದೌಡಾಯಿಸಿ ವಿವಿಧೆಗಳಿಂದ ಆಂಬ್ಯುಲ್ಸ್ ಮತ್ತು ರಸ್ತೆ ಮಾರ್ಗದಲ್ಲಿ ಬರುವ ವಾನಗಳಲ್ಲಿ ಗಾಯಾಳು ರೋಗಿಗಳನ್ನು ಪಟ್ಟಣದ ತಾಲೂಕು ಆಸ್ಪತ್ರೆಗೆ ಕಳುಹಿಸಿದರು.ವಿಷಯ ತಿಳಿಯುತ್ತಿದ್ದಂತೆ ನೂರಾರು ಸಂಖ್ಯೆಯಲ್ಲಿ ಜನರು ಜಮಾವಣೆಗೊಂಡು ಬಸ್ ಗಳಲ್ಲಿ ಪ್ರಯಾಣ ಮಾಡುತ್ತಿದ್ದವರು ತಮವರೆ ಎಂಬ ವಿಷಯ ತಿಳಿಯಲು ಮುಗಿಬಿದ್ದರು. ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಸಂಜಯ್ ರವರು ರಜೆಯಲ್ಲಿದ್ದ ತಮ ವೈದ್ಯರ ತಂಡವನ್ನು ತುರ್ತಾಗಿ ಆಸ್ಪತ್ರೆಗೆ ಬರಮಾಡಿಕೊಂಡು ಪ್ರಥಮ ಚಿಕಿತ್ಸೆ ನೀಡಿ ಗಂಭೀರವಾಗಿ ಗಾಯಗೊಂಡಿದ್ದ ಪ್ರಯಾಣಿಕರನ್ನು ಆಂಬ್ಯಲೆನ್ಸ್ ಗಳ ಮೂಲಕ ಜಿಲ್ಲಾಸ್ಪತ್ರೆ ಸೇರಿದಂತೆ ವಿವಿಧೆಡೆ ಆಸ್ಪತ್ರೆಗಳಿಗೆ ಕಳುಹಿಸಲಾಯಿತು.

# ಅರ್ಜಿ ಆಹ್ವಾನ

**ದಾವಣಗೆರೆ :** ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ ಉತ್ತರ ವೃತ್ತದ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳವರು ಅಗತ್ಯ ದಾಖಲಾತಿಗಳ ವಿವರಗಳನ್ನು ಅಕ್ಟೋಬರ್ 29 ರೊಳಗೆ ದಾವಣಗೆರೆ ತಾಲ್ಲೂಕು ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ತಾಲ್ಲೂಕು ಕಚೇರಿಯನ್ನು ಸಂಪರ್ಕಿಸಬೇಕೆಂದು ತಹಶೀಲ್ದಾರ್ ಅಶ್ವಥ್ ತಿಳಿಸಿದ್ದಾರೆ.

# ಪ್ರಭಾರ ಸ್ವೀಕಾರ

**ಗದಗ :** ಶೈಲೇಂದ್ರ ಬಿರಾದಾರ ಹಿರಿಯ ಸಹಾಯ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಗದಗ ಇವರು ತೋಟಗಾರಿಕೆ ಜಂಟಿ ನಿರ್ದೇಶಕರು (ಜಿ.ಪಂ ಗದಗ ಹುದ್ದೆಯ ಹೆಚ್ಚುವರಿ ಪ್ರಭಾರ ಇತ್ತೀಚಿಗೆ ವಹಿಸಿಕೊಂಡಿರುತ್ತಾರೆ. ಆದ್ದರಿಂದ ಇನ್ನು ಮುಂದೆ ಕಛೇರಿಗೆ ಬರಬೇಕಾದ ಎಲ್ಲಾ ಸರ್ಕಾರಿ, ಅರೇ ಸರ್ಕಾರಿ ರಹಸ್ಯೆ ಪತ್ರಗಳು ಹಾಗೂ ಇನ್ನಿತರೆ ಪತ್ರಗಳನ್ನು ಈ ಕೆಳಕಂಡ ವಿಳಾಸಕ್ಕೆ ವ್ಯವಹರಿಸಲು ತಿಳಿಸಿದೆ.ತೋಟಗಾರಿಕೆ ಜಂಟಿ ನಿರ್ದೇಶಕರು (ಜಿಲ್ಲಾ ಪಂಚಾಯತ್) ಗದಗ ವೀರನಾರಾಯಣ ವನ, ಭೀಷ್ಮ ಕೆರೆ ಹತ್ತಿರ, ಗದಗ ಮೋಬೈಲ್ ನಂಬರ್: 9448999231 ಕಛೇರಿ ದೂರವಾಣಿ ಸಂಖ್ಯೆ: 08372 295116--jdhgadag@gmail.com

# ಸಚಿವ ಮಲ್ಲಿಕಾರ್ಜುನ್ ರಾಜೀನಾಮೆ ನೀಡಿ, ತನಿಖೆಗೆ ಸಹಕರಿಸಲಿ: ಯಶವಂತರಾವ್

**ದಾವಣಗೆರೆ:** ಕೊಪ್ಪಳ ಜಿಲ್ಲೆಯಲ್ಲಿಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಬ್ರಹ್ಮಾಂಡ ಭ್ರಷ್ಟಚಾರ ನಡೆದಿದ್ದು, ಕೂಡಲೇ ಸರ್ಕಾರ ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕೆಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಡಳಿತರೂಡ ಕಾಂಗ್ರೆಸ್ ಪಕ್ಷದ ಶಾಸಕ ಬಸವರಾಜ ರಾಯರೆಡ್ಡಿ ಕೊಪ್ಪಳ ಜಿಲೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಸುಮಾರು 400 ಕೋಟಿ ಹಗರಣ ನಡೆದಿದೆ. ಆದ್ದರಿಂದ ಅಲ್ಲಿನ ಅಧಿಕಾರಿಗಳನ್ನು ಅಮಾನತ್ತು ಮಾಡಿ ತನಿಖೆ ಮಾಡಿಸಬೇಕೆಂದು ಸಿಎಂಗೆ ಪತ್ರ ಬರೆದಿದ್ದಾರೆ. ಆದ್ದರಿಂದ ಸಚಿವ ಮಲ್ಲಿಕಾರ್ಜುನ್ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.

ಕೊಪ್ಪಳ ಜಿಲ್ಲೆಯೊಂದರಲ್ಲೇ 400 ಕೋಟಿ ಹಗರಣ ನಡೆದಿದೆ ಎಂದಾದರೆ, ಇನ್ನೂ ರಾಜ್ಯದಲ್ಲಿ ಎಷ್ಟು ಕೋಟಿ ಹಗರಣ ನಡೆದಿದೆ? ಎಂಬುದನ್ನು ಸರ್ಕಾರ ಅರಿತು ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಪದೇ ಪದೇ ದಾವಣಗೆರೆ ಸ್ಮಾರ್ಟ್ ಸಿಟಿ ಸೇರಿದಂತೆ ಎಲ್ಲಾ ಕಡೆ ಹಗರಣ ಆಗಿದೆ ಎನ್ನುವ ಮಲ್ಲಿಕಾರ್ಜುನ್, ಅವರ ಸರ್ಕಾರ ಬಂದು ಎರಡೂವರೆ ವರ್ಷವಾದರೂ ತನಿಖೆ ನಡೆಸಿಲ್ಲ. ಆದ್ದರಿಂದ ಇಲ್ಲಿಯೂ ತನಿಖೆ ನಡೆಸಲಿ ಹಾಗೂ ತಮ್ಮ ಮೇಲೂ ತನಿಖೆ ನಡೆಯಲಿ ಅಲ್ಲಿವರೆಗೆ ಸಚಿವರಾಗಿ ರಾಜೀನಾಮೆ ನೀಡಲಿ. ತನಿಖೆ ನಂತರ ತಾವು ತಪ್ಪಿತಸ್ಥರಲ್ಲ ಎಂದಾದರೆ ಸಚಿವ ಸ್ಥಾನದಲ್ಲಿ ಮುಂದುವರೆಯಲಿ ಎಂದರು.

ಹರಿಹರ ಶಾಸಕ ಬಿ.ಪಿ.ಹರೀಶ್ ಮಾತನಾಡಿ, ನಾನು ಇತ್ತೀಚೆಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ನನ್ನ ಕ್ಷೇತ್ರಕ್ಕೆ ಸಂಬಂಧಿಸಿದ ಅರಣ್ಯ ಭೂಮಿ ಹಾಗೂ ಸರ್ಕಾರಿ ಭೂಮಿ ಒತ್ತುವರಿ ಮಾಡಿರುವುದರ ಬಗ್ಗೆ ಪತ್ರ ಬರೆದಿದ್ದೆ. ನಂತರ ಸ್ಥಳೀಯ ಎಂಎಲ್ಎ ಸಮ್ಮುಖದಲ್ಲಿ ತನಿಖೆ ನಡೆಸಿ ಸರ್ಕಾರಕ್ಕೆ ಮಾಹಿತಿ ನೀಡುವಂತೆ ಡಿಸಿಗಳಿಗೆ ಆದೇಶ ಮಾಡಿದ್ದರು. ಆಗ ವಿಜಯನಗರ ಜಿಲ್ಲೆ ಡಿಸಿ 2 ತಿಂಗಳು ಸಮಯ ಕೇಳಿದ್ದರು. ಆದರೆ ದಾವಣಗೆರೆ ಡಿಸಿ ನನಗೆ ಮಾಹಿತಿ ನೀಡದೆ ಸರ್ಕಾರಕ್ಕೆ ಯಾವುದೇ ಒತ್ತುವರಿ ನಡದಿಲ್ಲ ಎಂದು ಸುಳ್ಳು ಮಾಹಿತಿ ನೀಡಿದ್ದಾರೆ. ಈ ಬಗ್ಗೆ ಪ್ರಶ್ನೆ ಮಾಡಿದರೆ ಸಬೂಬು ಹೇಳುತ್ತಾರೆ. ಆದರೆ ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಅಧಿಕಾರಿಗಳು ಸೋಮವಾರ ತನಿಖೆಗೆ ಬರುವುದಾಗಿ ತಿಳಿಸಿದ್ದು ಸತ್ಯಾಸ್ಯತೆ ಹೊರಬರಲಿದೆ ಎಂದು ಹೇಳಿದರು.

ದೂಡ ಅಧ್ಯಕ್ಷ ದಿನೇಶ್ ಶೆಟ್ಟಿ ನನ್ನ ಆಪ್ತ ಸ್ನೇಹಿತ. ಅವನ ಮನೆತನವೇ ಹಾಗೇ, ಸೇವೆ ಮಾಡುವುದು. ಅವನ ಅಪ್ಪನಂತೆ ಅವನು ಹಣ, ಅಧಿಕಾರದಲ್ಲಿರುವವರ ಸೇವೆ ಮಾಡಿ ಈಗ ದೂಡ ಅಧ್ಯಕ್ಷ ಆಗಿದ್ದಾನೆ. ಮುಂದೆ ಎಂಎಲ್ಎ ಯೂ ಆಗಲಿ ಎಂದು ವ್ಯಂಗ್ಯವಾಡಿದ ಅವರು, ಶೆಟ್ಟಿ ನಾನು ಹುಚ್ಚುನಾಯಿ ಕಡಿದಂತೆ ಆಡುತ್ತಿದ್ದೇನೆ ಎಂದು ಹೇಳಿದ್ದಾರೆ. ಹೌದು, ನನಗೆ ಹುಚ್ಚು ಕಡಿದ ರೀತಿ ಆಡುತ್ತಿದ್ದೇನೆ. ಆ ಹುಚ್ಚು ನಾಯಿ ಯಾರು? ರಾಜ್ಯದಲ್ಲಿ ಲೂಟಿ ಮಾಡುತ್ತಿರುವ ನಮ್ಮ ಜಿಲ್ಲಾ ಉಸ್ತುವಾರಿ ಸಚಿವರ? ರೈತರ ಆಸ್ತಿ ಕಬಳಿಸುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವರ? ಅದನ್ನು ದಿನೇಶ್ ಶೆಟ್ಟಿಯೇ ಹೇಳಬೇಕು. ಆ ಹುಚ್ಚುನಾಯಿಯ ಹುಚ್ಚು ಹೋಗವ ರೀತಿಯಲ್ಲಿ ಅವರ ಭ್ರಷ್ಟಾಚಾರವನ್ನು ಬಯಲಿಗೆ ಎಳೆಯುತ್ತೇನೆ. ಇನ್ಮುಂದೆ ವಾರಕ್ಕೊಂದು ಅವರ ಹಗರಣಗಳ ಬಗ್ಗೆ ಸಾಕ್ಷಿ ಸಮೇತ ಹುಚ್ಚು ಬಿಡಿಸುತ್ತೇನೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಬಿ.ಎಸ್. ಜಗದೀಶ್, ಟಿಂಕರ್ ಮಂಜಣ್ಣ, ಶಿವನಗೌಡ ಪಾಟೀಲ್ ಇದ್ದರು.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಗದಗ :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2025–26 ನೇ ಸಾಲಿಗೆ ಮತಿಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಭೌದ್ಧರು, ಸಿಖ್ಖರು,

ಫಾರ್ಸಿಗಳ ಸಮುದಾಯದವರಿಗೆ ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರುವ. ಈ ಕೆಳಗಿನ ಸಾಲದ ಯೋಜನೆಗಳಿಗೆ ಸಾಲ ಸೌಲಭ್ಯ ಒದಗಿಸಲು ನಿಗಮದ ಅಂತರಜಾಲ https://kmdconline.karnataka.gov.in ರಲ್ಲಿ ಅರ್ಜಿಗಳನ್ನು ಅಹ್ವಾನಿಸಲಾಗಿದ್ದು, ಈ 03 ವಿವಿಧ ಯೋಜನೆಗಳಿಗೆ ದಿನಾಂಕ:15–11–2025 ರವರಗೆ ವಿಸ್ತರಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೌಕರರ ಕುಟುಂಬದ ಸದಸ್ಯರು ಯೋಜನೆಗಳಿಗೆ ಅರ್ಹರಾಗಿರುವುದಿಲ್ಲ.

ಸಾಂತ್ವನ ಯೋಜನೆ: 2025–26 ನೇ ಸಾಲಿಗೆ ಅಲ್ಪಸಂಖ್ಯಾತ ಸಮುದಾಯದ ರಾಜ್ಯದಲ್ಲಿನ ವಿಶೇಷ ಹಾಗೂ ದುರ್ಬಲ ವರ್ಗದ ಫಲಾನುಭವಿಗಳಿಗೆ ಗರಿಷ್ಟ 5.00 ಲಕ್ಷರೂರವರಗೆಘಟಕ ವೆಚ್ಚಕ್ಕೆ ಶೇ50 ರಷ್ಟು ಸಹಾಯಧನ ಮತ್ತುಶೇ.3ರ ಬಡ್ಡಿದರದಲ್ಲಿ ಶೇ50 ರಷ್ಟು ಸಾಲವನ್ನು ನೀಡಲಾಗುವುದು. ಹಾಗೂ ರಾಜ್ಯದಲ್ಲಿ ಕೋಮು ಗಲಭೆ ಮತ್ತು ಕೋಮು ಹಿಂಸಾಚಾರದ ಸಂದರ್ಭಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿದ್ದರೆ ಅಂತಹ ಪ್ರಕರಣಗಳಲ್ಲಿ ಕನಿಷ್ಟ ರೂ.2.00 ಲಕ್ಷ ನಷ್ಟವಾಗಿದ್ದರೆ ಸಾಲ ಸೌಲಭ್ಯಒದಗಿಸಲಾಗುವುದು.

ಸಮುದಾಯ ಆಧಾರಿತ ತರಬೇತಿ ಯೋಜನೆ:– ಅಲ್ಪಸಂಖ್ಯಾತರ ಸಮುದಾಯದ ನಿರುದ್ಯೋಗಿ ಯುವಕ–ಯುವತಿಯರಿಗೆ ಸ್ವ–ಉದ್ಯೋಗ/ ಒಓಅ , ಃಕಔ ಗಳು ಮತ್ತು ಇತರೆ ಚಟುವಟಿಕೆಗಳಲ್ಲಿ ಉದ್ಯೋಗಕ್ಕಾಗಿಹೈವಿ ವಹಿಕಲ್‌ಡ್ರೈವಿಂಗ್, ಡ್ರೋನ್ ಚಾಲನ ತರಬೇತಿ, ಬ್ಯೂಟಿ ಪಾರ್ಲರ್ ಕೋರ್ಸ್ (ಪುರುಷ ಮತ್ತು ಮಹಿಳೆಯರಿಗೆ) ತರಬೇತಿಯನ್ನು ನೀಡುತ್ತವೆ. ಹಾಗೂ ಹೆಚ್ಚುವರಿಯಾಗಿಅಂತಿಮ ವರ್ಷದ ಬಿ,ಇ/ ಬಿ.ಟೆಕ್ , ಸಿ ಎಸ್, ಐಟಿ, ಇಸಿ, ಇಇಇ, ಎಂಸಿಎ, ಎಂಎಸ್ ಸಿ ಅನ್ನು ಕಂಪ್ಯೂಟರ್ ಸೈನ್ಸ್ನಲ್ಲಿ ಓದುತ್ತಿರುವ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಪ್ರಾಜೆಕ್ಟ್ ಆಧಾರಿತ ಕಲಿಕೆಯ ಕಾರ್ಯಕ್ರಮಗಳು (ಪ್ರಾಕ್ಟಿಕಮ್) ಸಹ ಲಭ್ಯವಿದೆ. ನಿಗಮದ ವತಿಯಿಂದ ತರಬೇತಿ ನೀಡಲಾಗುವುದು. ವಯೋಮಿತಿ 18 ರಿಂದ 45 ವರ್ಷಗಳು ಇರಬೇಕು.

ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ:–ಅಲ್ಪಸಂಖ್ಯಾತ ಸಮುದಾಯದ ಸ್ವ–ಸಹಾಯ ಗುಂಪುಗಳಿಗೆ ವಿವಿಧರೀತಿಯ ಸ್ವಯಂ ಉದ್ಯೋಗ ಚಟುವಟಿಕೆಯಲ್ಲಿ ತೊಡಗಿಸಿ ಅವರನ್ನು ಆರ್ಥಿಕ ಸ್ವಾವಲಂಭಿಯನ್ನಾಗಿ ಮಾಡುವ ಸಲುವಾಗಿ ರಾಷ್ಟ್ರೀಕೃತ/ ಶೆಡ್ಯೂಲ್ ಬ್ಯಾಂಕ್/ RBI ನಿಂದ ಮಾನ್ಯತೆ ಪಡೆದ ವಿವಿಧಆರ್ಥಿಕ ಸಂಸ್ಥೆಗಳಿಂದ ಪಡೆಯುವ ಸಾಲಕ್ಕೆ ಘಟಕವೆಚ್ಚದಶೇ.50 ಅಥವಾ ಗರಿಷ್ಠ 2.00 ಲಕ್ಷ ಸಹಾಯಧನವನ್ನು ನಿಗಮದಿಂದ ಒದಗಿಸಲಾಗುವುದು, ಸಹಾಯಧನವು ಬ್ಯಾಕ್‌ಎಂಡ್ ಸಬ್ಸಿಡಿಯಾಗಿದ್ದು ಸ್ವ–ಸಹಾಯ ಸಂಘಗಳು ಆರ್ಥಿಕ ಬ್ಯಾಂಕಗಳಿಂದ ಪಡೆದ ಸಾಲದ ಮರುಪಾವತಿ

ಹೊಂದಾಣಿಕೆ ಮಾಡಲಾಗವುದು.

ಜಿಲ್ಲೆಯ ಅರ್ಹ ಅಲ್ಪಸಂಖ್ಯಾತರ ಜನರು ಮೇಲ್ಕಂಡ 2025–26 ನೇ ಸಾಲಿನ ಈ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ:15–11–2025 ವಿಸ್ತರಿಸಲಾಗಿದೆ. ಜಿಲ್ಲೆಯ ಅರ್ಹ ಅಲ್ಪಸಂಖ್ಯಾತರ ಜನರು ಮೇಲ್ಕಂಡ 2025–26 ನೇ ಸಾಲಿನ ಈ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ:15–11–2025 ವಿಸ್ತರಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅರ್ಜಿ ಹಾಗೂ ದಾಖಲಾತಿಗಳನ್ನು ನಕಲು ಪ್ರತಿಯನ್ನು ಜಿಲಾ ಕಛೇರಿಗೆ ಸಲ್ಲಿಸಲುಅಗತ್ಯವಿರುವುದಿಲ್ಲ.

ಹಾಗೂ ಜಿಲ್ಲಾ ಕಛೇರಿಯಲ್ಲಿ ಯಾವುದೇ ಅರ್ಜಿಗಳ ಜೊತೆ ದಾಖಲಾತಿಗಳನ್ನು ಸ್ವೀಕರಿಸುವುದಿಲ್ಲ. ಹಾಗೂ ನಿಗಮದ ಅಂತರಜಾಲ https://kmdconline.karnataka.gov.in ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08372–295147 ಸಂಪರ್ಕಿಬೇಕೆಂದು. ಹಾಗೂ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿಯಮಿತ ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೋರಾಟಕ್ಕೆ ಖಡ್ಗ ಬೇಕಿಲ್ಲ, ಪೆನ್ನು ಬೇಕಿದೆ; ಕೆ. ಎಸ್ ಬಸಂತಪ್ಪ



**ದಾವಣಗೆರೆ :** ಮಹಿಳೆಯರು ತಮ್ಮ ಹಕ್ಕಿಗಾಗಿ ಖಡ್ಗದ ಬದಲು, ಪೆನ್ನು ಹಿಡಿದು ಜೋರಾಡಬೇಕು, ಶಾಸಕ ಕೆ.ಎಸ್. ಬಸವಂತಪ್ಪ ಕರೆನೀಡಿದರು.

ನಗರದ ಕುವೆಂಪು ಕನ್ನಡ ಭವನದಲ್ಲಿ ಗುರುವಾರ ನಡೆದ ವೀರರಾಣಿ ಕಿತ್ತೂರು ಚೆನ್ನಮ್ಮನ 2ಜಯಂತಿ ಹಾಗೂ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

'ರಾಣಿ ಚೆನ್ನಮ್ಮ ಕಷ್ಟಕಾಲದಲ್ಲಿ ಹೋರಾಡಿ ಸಾಮ್ರಾಜ್ಯ ಕಟ್ಟಿದ್ದರು. ಚೆನ್ನಮ್ಮನ ಹೋರಾಟ, ಆದರ್ಶ ಮುಂದಿನ ಪೀಳಿಗೆಗೆ ಸ್ಪೂರ್ತಿಯಾಗಬೇಕು. ಇಂದು ಹೋರಾಟಕ್ಕೆ ಖಡ್ಗ ಹಿಡಿವ ಅವಶ್ಯಕತೆ ಇಲ್ಲ, ಪೆನ್ನು ಹಿಡಿಯಬೇಕಿದೆ. ಚೆನ್ನಮ್ಮ ಎಲ್ಲಾ ಸಮಾಜದವರ ಒಳಿತಿಗಾಗಿ ಹೋರಾಡಿದರು. ಈಗ ಹೋರಾಟದಲ್ಲಿ ಬರೀ ಸ್ವಾರ್ಥ ತುಂಬಿದೆ. ಹೋರಾಟದಿಂದ ತಮಗೇನಾದರೂ ಲಾಭವಿದೆಯೇ ಎಂದು ಚಿಂತಿಸುವವರ ಸಂಖ್ಯೆ ಹೆಚ್ಚಿದೆ. ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಎಲ್ಲರೂ ಹೋರಾಡಬೇಕು. ಮಾಜಿ ಸಚಿವೆ ನಾಗಮ್ಮ ಕೇಶವಮೂರ್ತಿ ಕಟ್ಟಿದ ಮಹಿಳಾ ಸಮಾಜದಂತೆ ಸಂಘ –ಸಂಸ್ಥೆಗಳು ಮಹಿಳೆಯರ ರಕ್ಷಣೆ ಮಾಡುವಂತಾಗಬೇಕು. ಪಂಚಮಸಾಲಿಗಳು ಲಿಂಗಾಯತರಲ್ಲಿ ಬಹುಸಂಖ್ಯಾತರಾಗಿದ್ದು, ಕೃಷಿಯಿಂದಲೇ ಜೀವನ ನಡೆಸುತ್ತಿದ್ದಾರೆ. ಬಡವರೇ ಹೆಚ್ಚಾಗಿದ್ದಾರೆ. ಸರ್ಕಾರಕ್ಕೆ ಒತ್ತಡಹಾಕಿ ಪಂಚಮಸಾಲಿಗಳಿಗೆ ಕಾರ್ಯಕ್ರಮ ರೂಪಿಸಲು ಯತ್ನಿಸುವೆ. ಸಮಾಜದ ಪರ ಕೆಲಸ ಮಾಡುತ್ತೇನೆ, ಎಂದರು.

ಸಾಹಿತಿ ಡಾ. ದಾದಾಪೀರ್ ನವಿಲಿಹಾಳ್ ಉಪನ್ಯಾಸ ನೀಡಿ, ಗಂಡನಿಲ್ಲದೆಯೂ ರಾಣಿಯಾಗಬಹುದು ಎಂಬುದನ್ನು ತೋರಿಸಿದ್ದು ಚೆನ್ನಮ್ಮ. ಮಲ್ಲಸರ್ಜನಿಗೆ ಚೆನ್ನಮ್ಮ ಎರಡನೇ ಹೆಂಡತಿಯಾಗಿದ್ದಳು. ಆಂಗ್ಲರ ಆಳ್ವಿಕೆ ಮುಂದುವರಿಯಲು ಸಂಸ್ಥಾನಗಳ ಒಳಜಗಳ ಕಾರಣ. ಮಲ್ಲಸರ್ಜ ಮರಣಾನಂತರ ಚೆನ್ನಮ್ಮ ನೇರ ಆಡಳಿತದ ಚುಕ್ಕಾಣಿ ಹಿಡಿದಿದ್ದಳು. ರಾಣಿ ಚೆನ್ನಮ್ಮ ಕಟ್ಟಿಕೊಟ್ಟ ಪರಂಪರೆಯನ್ನು ನಾವು ಮುಂದುವರಿಸಬೇಕು. ಭೂತಕಾಲದ ಸುಳ್ಳುಗಳನ್ನು ವರ್ತಮಾನದ ಕಾಲಕ್ಕೆ ತಂದಿಡಬಾರದು. ನಮಗೆ ಅನ್ಯರ ಬಗ್ಗೆ ಕರುಣೆ, ಸಹಿಷ್ಣುತೆ ಇರಬೇಕು. ರಾಣಿ ಚೆನ್ನಮ್ಮ ಸಹನೆಯ ಪ್ರತಿನಿಧಿಯಾಗಿ ಕಂಡುಬರುತ್ತಾರೆ. ಮುಂದಿನ ಪೀಳಿಗೆಗೆ ರಾಷ್ಟ್ರೀಯತೆ ಕಟ್ಟಿಕೊಡಲು ಚೆನ್ನಮ್ಮನ ಬದುಕು ಸಹಕಾರಿ ಎಂದರು.

ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಸಿ. ಉಮಾಪತಿ, ಮಹನೀರ ಹೆಸರಿನಲ್ಲಿ ರಾಜಕೀಯ ಸಲ್ಲದು. ಸಮಾಜ ಒಡೆಯಬಾರದು, ನಾವೆಲ್ಲರೂ ಒಂದೇ ಎಂಬುದನ್ನು ತೋರಿಸಬೇಕು. ನಮ್ಮ ಮಕ್ಕಳಿಗೆ ಸಂಸ್ಕಾರ ಬೇಕಿದೆ. ಇತಿಹಾಸ ಅರ್ಥೈಸುವ ಕೆಲಸ ತಾಯಂದಿರಿಂದ ಆಗಬೇಕು, ಎಂದು ಕರೆ ನೀಡಿದರು.

ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ್ ಗೋಪನಾಳ್, ರಾಣಿ ಚೆನ್ನಮ್ಮ ಮೂರ್ತಿ ಪ್ರತಿಮೆ ಇಂದಿಗೂ ಆಗಿಲ್ಲ. ಪ್ರತಿಮೆ ನಿರ್ಮಾಣಕ್ಕೆ ಸಮಾಜ ಬಾಂಧವರು ಹಣ ಹಾಕಿ, ಚೆನ್ನಮ್ಮ ಮೂರ್ತಿ ನಿರ್ಮಿಸೋಣ. ಜನ ಕೇವಲ ಶ್ರೀಮಂತರ ಹಿಂದೆ ಹೋಗುವುದಿಲ್ಲ ಜನಸಾಮಾನ್ಯರಿಗೂ ಸ್ಪಂದಿಸುತ್ತಾರೆ ಎಂಬುದು ಇಂದು ಸಾಬೀತಾಗಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ಸಂದೇಶವನ್ನು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ವಾಚಿಸಿದರು.

ವರಾಣಿ ಚೆನ್ನಮ್ಮನ ಜೀವನ ಸಾಧನೆ ಕುರಿತು ನಡೆಸಿದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾಧಿಕಾರಿ ಕೆ. ಎಂ ಗಂಗಾಧರ ಸ್ವಾಮಿ, ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ದೂಡಾ ಅಧ್ಯಕ್ಷ ಕೆ ಶೆಟ್ಟಿ ದೂಡ ಸದಸ್ಯೆ ವಾಣಿ ಬಕ್ಕೇಶ್, ಲಿಂಗಾಯತ ಪಂಚಮಸಾಲಿ ಟ್ರಸ್ಟ್ ದಾವಣಗೆರೆ ಜಿಲ್ಲಾಧ್ಯಕ್ಷ ಚಿಕ್ಕ ಮೇಗಳಗೆರೆ ಚನ್ನಬಸಪ್ಪ, ಯುವ ಘಟಕದ ಅಧ್ಯಕ್ಷ ಅಭಿ ಕಾಟನ್ ಬಕ್ಕೇಶ್, ಕ್ಯಾರಕಟ್ಟೆ ಗೌಡ್ರು,

ಮತ್ತು ಪಂಚಮಸಾಲಿ ಸಮಾಜದ ವಿವಿಧ ಘಟಕಗಳ ಅಧ್ಯಕ್ಷರು, ಸದಸ್ಯರು ಇದ್ದರು.

# ಕಲಾಕುಂಚದಿಂದ ಮೈಸೂರು ಶಾಖೆಯ ಅಧ್ಯಕ್ಷರಾಗಿ ಡಾ. ನಾಗರಾಜ್ ವಿ. ಬೈರಿ ಆಯ್ಕೆ



**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಮೈಸೂರು ಶಾಖೆಯ ಅಧ್ಯಕ್ಷರಾಗಿ ಡಾ. ನಾಗರಾಜ್ ವಿ. ಬೈರಿ ಆಯ್ಕೆಯಾಗಿದ್ದಾರೆ ಎಂದು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಉಪಾಧ್ಯಕ್ಷರಾಗಿ ನ.ಗಂಗಾಧರಪ್ಪ, ಪ್ರಧಾನ ಕಾರ್ಯದರ್ಶಿ ಶ್ರೀಮತಿ ಸಂಗೀತ ಪ್ರಸನ್ನ ನಾಡಿಗ್, ಖಜಾಂಚಿಯಾಗಿ ಪಿ.ಸಿದ್ದೇಶ್ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಚಂದ್ರಶೇಖರ್, ಸಂತೋಷ್‌ಕುಮಾರ್, ಪ್ರಭು ಕೆ., ವೆಂಕಟೇಶ್ ಎಸ್.ವೆಂಕಟೇಶ್, ಮಹಾದೇವ್, ಶ್ರೀಮತಿ ವಂದನಾ ಶ್ರೀಧರ್‌ನಾಯಕ್, ಮಹಾಬಲೇಶ್ವರ ಬೈರಿ ಅಯ್ಕೆಯಾಗಿದ್ದಾರೆ. ಸದ್ಯದಲ್ಲೆ ಕಲಾಕುಂಚ ಮೈಸೂರು ಶಾಖೆ ಉದ್ಘಾಟನೆಯ ಜೊತೆಗೆ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಪರೀಕ್ಷೆಯ ಪೂರ್ವಭಾವಿ ಸಿದ್ಧತಾ ಉಚಿತ ಕಾರ್ಯಾಗಾರ ನಡೆಯಲಿದೆ ಎಂದು ದಾವಣಗೆರೆಯ ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಕಟಿಸಿದ್ದಾರೆ.

# ಅಪಘಾತ ವಿಮೆ ನೀಡದೆ ಸೇವಾ ನ್ಯೂನತೆ: ಬಡ್ಡಿ ಸಹಿತ ನೀಡಲು ಆದೇಶ

**ಚಿಕ್ಕಮಗಳೂರು:** ಅಪಘಾತವಾದ ವಾಹನದ ವಿಮೆ ಮೊತ್ತವನ್ನು ನೀಡದೆ ಸೇವಾ ನ್ಯೂನತೆ ಎಸಗಿದ ಆರೋಪದಲ್ಲಿ ದಿ ನ್ಯೂ ಇಂಡಿಯಾ ಅಶ್ಯುರೆನ್ಸ್ ಕಂಪನಿಯ ವಿರುದ್ಧ ತೀರ್ಪು ನೀಡಿರುವ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ವಿಮಾ ಮೊತ್ತವನ್ನು ಬಡ್ಡಿ ಸೇರಿಸಿ ನೀಡುವಂತೆ ಹಾಗೂ ಪರಿಹಾರ ಮತ್ತು ಖರ್ಚು–ವೆಚ್ಚವನ್ನು ಗ್ರಾಹಕನಿಗೆ ನೀಡುವಂತೆ ಆದೇಶ ನೀಡಿದೆ.

ಕಳಸದ ಹಿರೇಬೈಲು ಇಡಕಣಿ ಬೂದಿಗುಂಡಿಯ ಅಶ್ವಿನಿ ಎಂಬುವವರು ದಿ ನ್ಯೂ ಇಂಡಿಯಾ ಅಶ್ಯುರೆನ್ಸ್ ಕಂಪನಿಯಿಂದ ತಮ್ಮ ಮಾಲೀಕತ್ವದ ಹುಂಡೈ ಐ20 ವಾಹನಕ್ಕೆ ವಿಮೆ ಪಡೆದುಕೊಂಡಿದ್ದರು. ಈ ವಾಹನವು 2024ರ ಆಗಸ್ಟ್ 8 ರಂದು ಅಪಘಾತಕ್ಕೀಡಾಗಿತ್ತು. ಈ ಹಿನ್ನೆಲೆಯಲ್ಲಿ ಅಶ್ವಿನಿಯವರು ಕಂಪನಿಯಿಂದ ವಿಮಾ ಪರಿಹಾರವನ್ನು ನೀಡುವಂತೆ ಕೋರಿದ್ದರು. ಆದರೆ ಕಂಪನಿಯ ಬೆಂಗಳೂರಿನ ಎರಡು ಕಡೆಯ ಇಬ್ಬರು ವ್ಯವಸ್ಥಾಪಕರು ಹಾಗೂ ಮಂಗಳೂರು ವ್ಯವಸ್ಥಾಪಕರ ವಿರುದ್ಧ ನಗರದ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಕಳೆದ ಏಪ್ರಿಲ್ 9 ರಂದು ಅಶ್ವಿನಿ ದೂರು ಸಲ್ಲಿಸಿದ್ದರು.ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಸೆಪ್ಟಂಬರ್ 23 ರಂದು ಕಂಪನಿಯು ಸೇವಾ ನ್ಯೂನತೆ ಎಸಗಿರುವುದನ್ನು ಖಾತ್ರಿಪಡಿಸಿದ್ದು, ಕಂಪನಿಯು ವಾಹನವನ್ನು ತನ್ನ ವಶಕ್ಕೆ ಪಡೆದುಕೊಂಡು ವಾಹನದ ವಿಮಾ ಮೊತ್ತ ರೂ.2,00,000 ಗಳನ್ನು ವಾರ್ಷಿಕ ಶೇ.9ರ ಬಡ್ಡಿ ಸೇರಿಸಿ ನೀಡುವಂತೆಯೂ, ರೂ.30,000 ಗಳನ್ನು ಪರಿಹಾರವಾಗಿ ನೀಡುವಂತೆ ಹಾಗೂ ಪ್ರಕರಣದ ಖರ್ಚು–ವೆಚ್ಚವೆಂದು ರೂ. 10,000 ಗಳನ್ನು ದೂರುದಾರರಿಗೆ ನೀಡುವಂತೆ ಆದೇಶಿಸಿದೆ.ಅಧ್ಯಕ್ಷರಾದ ಎನ್.ಆರ್.ಚೆನ್ನಕೇಶವ, ಸದಸ್ಯರಾದ ಈ.ಪ್ರೇಮಾ ಮತ್ತು ಡಾ.ಮಂಜುನಾಥ ಎಂ.ಬಮ್ಮನಕಟ್ಟಿ ಇವರನ್ನು ಒಳಗೊಂಡ ಆಯೋಗವು ಪ್ರಕರಣದ ವಿಚಾರಣೆ ನಡೆಸಿ ಈ ತೀರ್ಪು ನೀಡಿದ್ದು, ವಿಮಾ ಕಂಪನಿಯ ಸೇವಾ ನ್ಯೂನತೆಯನ್ನು ಎತ್ತಿ ಹಿಡಿದಿದ್ದಾರೆ. ದೂರುದಾರರ ಪರವಾಗಿ ವಕೀಲರಾದ ಹಳೆಕೋಟೆ ಎ.ತೇಜಸ್ವಿ ವಾದ ಮಂಡಿಸಿದ್ದರು.

# ಕನ್ನಡ ರಾಜ್ಯೋತ್ಸವದಂದು ರಾಷ್ಟ್ರಧ್ವಜದ ಜೊತೆಗೆ ನಾಢ ಧ್ವಜಾರೋಹಣಕ್ಕೆ ಕ್ರಮ



**ಚನ್ನಪಟ್ಟಣ :** ನವೆಂಬರ್ 1 ರ ಕನ್ನಡ ರಾಜ್ಯೋತ್ಸವದಂದಯ ಜಿಲ್ಲೆಯಲ್ಲಿ ಜಿಲ್ಲಾಡಳಿತ ನಡೆಸುವ ರಾಷ್ಟ್ರಧ್ವಜದ ಜೊತೆಗೆ ನಾಡಧ್ವಜಾರೋಹಣ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಯಶವಂತ್ ಗುರುಕರ್ ಅವರು ಭರವಸೆ ನೀಡಿದ್ದಾರೆ.

ಕನ್ನಡ ನಾಡಿನಲ್ಲಿ ರಾಜ್ಯೋತ್ಸವದ ದಿನ ನಾಡ ಧ್ವಜಾರೋಹಣ ಮಾಡಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲೆಯ ಕನ್ನಡಪರ ಸಂಘಟನೆಗಳು ಈ ಬಗ್ಗೆ ಧ್ವನಿ ಎತ್ತ ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಕನ್ನಡಪರ ಸಂಘಟನೆಗಳ ಜಿಲ್ಲಾಧ್ಯಕ್ಷರುಗಳ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಈ ಬಗ್ಗೆ ಸಂಘಟನೆಗಳ ಅಭಿಪ್ರಾಯ ಪಡೆದು ನವೆಂಬರ್ 1 ರಂದು ಜಿಲ್ಲೆಯ ಜಿಲ್ಲಾಡಳಿತ ನಡೆಸುವ ರಾಷ್ಟ್ರ ಧ್ವಜಾರೋಹಣದ ಜೊತೆಗೆ ನಾಡ ಧ್ವಜಾರೋಹಣ (ಕನ್ನಡಬಾವುಟ) ಮಾಡಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.

ಇದಕ್ಕೂ ಮುನ್ನ ಕನ್ನಡಪರ ಸಂಘಟನೆಗಳ ಜಿಲ್ಲಾಧ್ಯಕ್ಷರುಗಳು ಹಾಗೂ ಪದಾಧಿಕಾರಿಗಳು ಎಡಿಸಿ ಚಂದ್ರಯ್ಯ ಅವರ ಬಳಿ ಈ ಬಗ್ಗೆ ಚರ್ಚೆ ಮಾಡಿದ್ದರು. ಜೊತೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಬಳಿ ಸಹ ಸಭೆ ಮಾಡಿ ಚರ್ಚೆ ಮಾಡಿ ಬೇರೆ ಜಿಲ್ಲೆಗಳಲ್ಲಿ ನವೆಂಬರ್ 1 ರಂದು ಕನ್ನಡ ಬಾವುಟ ಹಾರಿಸುವ ಬಗ್ಗೆ ಮನವರಿಕೆ ಮಾಡಿಕೊಟ್ಟು ನಮ್ಮ ಜಿಲ್ಲೆಯಲ್ಲಿ ಸಹ ಕನ್ನಡ ಬಾವುಟ ಹಾರಿಸಲು ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಲಾಯಿತು. ಅಂತಿಮವಾಗಿ ಜಿಲ್ಲಾಧಿಕಾರಿಗಳು ಈ ಬಗ್ಗೆ ಅಧಿಕಾರಿಗಳು ಮತ್ತು ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳ ಜೊತೆ ಚರ್ಚೆ ಮಾಡಿ ಕನ್ನಡ ರಾಜ್ಯೋತ್ಸವದಂದು ರಾಷ್ಟ್ರಧ್ವಜದ ಜೊತೆಗೆ ಕನ್ನಡ ಬಾವುಟ ಹಾರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

**ನವೆಂಬರ್ 1 ರಂದು ಜಿಲ್ಲೆಯ ಜಿಲ್ಲಾಡಳಿತ ನಡೆಸುವ ರಾಷ್ಟ್ರ ಧ್ವಜಾರೋಹಣದ ಜೊತೆಗೆ ನಾಡ ಧ್ವಜಾರೋಹಣ (ಕನ್ನಡಬಾವುಟ) ಮಾಡಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.**

ಸಭೆಯಲ್ಲಿ ಕಕಜವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್‌ಗೌಡ, ಕಸಾಪ ಜಿಲ್ಲಾಧ್ಯಕ್ಷ ಬಿ.ಟಿ. ನಾಗೇಶ್, ಪ್ರೋ. ಶಿವನಂಜೇಗೌಡ, ಕರುನಾಡ ಸೇನೆಯ ರಾಜ್ಯ ಉಪಾಧ್ಯಕ್ಷ ಜಗದೀಶ್, ಕರವೆ ಪ್ರವೀಣ್‌ಶೆಟ್ಟಿ ಬಣದ ಜಿಲ್ಲಾಧ್ಯಕ್ಷ ರಾಜು ಎಂ.ಎನ್. ಆರ್, ಕರವೇ ಸ್ವಾಭಿಮಾನಿ ಬಣದ ರಾಜ್ಯ ಉಸ್ತುವಾರಿ ಶಿವುಗೌಡ, ಜಿಲ್ಲಾಧ್ಯಕ್ಷ ಕಿರಣ್, ಕಾರ್ಯಧ್ಯಕ್ಷ ಲೋಕೇಶ್, ಮಾಗಡಿ ತಾಲ್ಲೂಕು ಅಧ್ಯಕ್ಷ ವಿನೋದ್‌ರಾಜ್, ಜಿಲ್ಲಾಧ್ಯಕ್ಷ ಜೈಕುಮಾರ್, ತಾಲ್ಲೂಕು ಅಧ್ಯಕ್ಷ ಗಂಗಾಧರ್, ಸಂಘಟನಾ ಕಾರ್ಯದರ್ಶಿ ಜಗದಾಪುರ ಕೃಷ್ಣೇಗೌಡ, ಬಿಳಗುಂಬ ದಿನೇಶ್, ಸುರೇಶ್, ಚೇತನ್‌ಕುಮಾರ್, ಅರುಣ್‌ಕುಮಾರ್, ಜಯಮ್ಮ, ಕುಮಾರ್,

# ವಿಶೇಷ ಉಚಿತ ತಪಾಸಣಾ ಶಿಬಿರ

**ಚಿತ್ರದುರ್ಗ :** ರೋಟರಿ ಕ್ಲಬ್ ಚಿತ್ರದುರ್ಗ,ವಾಸವಿ ಕ್ಲಬ್ ಚಿತ್ರದುರ್ಗ, ಲಕ್ಷ್ಮಿ ಸರ್ಜಿಕಲ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ರಾಣೇಬೆನ್ನೂರು, ಇವರುಗಳ ಸಂಯುಕ್ತಾಶ್ರಯದಲ್ಲಿ ಚಳ್ಳಕೆರೆ ರಸ್ತೆಯ "ಎಸ್.ಆರ್.ಬಿ.ಎಂ.ಎಸ್. ಸೇವಾ ಭವನದಲ್ಲಿ ಶನಿವಾರ ಮೊಣಕಾಲು ಮಂಡಿ ಚಿಪ್ಪು ಮತ್ತು ಚಪ್ಪೆ ಬದಲಾವಣೆ ಆಪರೇಷನ್" ಗಳಿಗಾಗಿ ವಿಶೇಷ ಉಚಿತ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು.

ಈ ದಿನ ಬೆಳಿಗ್ಗೆ 11 ಗಂಟೆಯಿಂದ 3:00 ಗಂಟೆಯವರೆಗೆ ನಡೆದ ಈ ಶಿಬಿರದಲ್ಲಿ 45ಕ್ಕೂ ಹೆಚ್ಚು ಜನ ಪರೀಕ್ಷೆಗೆ ಒಳಗಾಗಿ ಹೆಚ್ಚಿನ ಚಿಕಿತ್ಸೆಗಾಗಿ ಆರು ಜನ ಆಯ್ಕೆಯಾಗಿದ್ದಾರೆ.

ಈ ಕಾರ್ಯಕ್ರಮದಲ್ಲಿ ಡಾ. ಸಂಜೀವ್ ಎಂ.ಮುದ್ರಿ ಹಾಗೂ ಡಾಕ್ಟರ್ ಕೊಟ್ರೇಶ್, ರೋಟರಿ ಅಧ್ಯಕ್ಷರಾದ ಭಾಗ್ಯಲಕ್ಷ್ಮಿ ಮೂರ್ತಿ, ಕಾರ್ಯದರ್ಶಿ ಅನುರಾಧ ವಿಶ್ವನಾಥ್, ವಾಸವಿ ಕ್ಲಬ್ಬಿನ ಅಧ್ಯಕ್ಷರಾದ ರಾಜೇಶ್ವರಿ ಸಿದ್ರಾಮ್,



ಸರ್ವಿಸ್ ಪ್ರಾಜೆಕ್ಟ್ ಚೇರ್ಮನ್ ಎ.ಆರ್. ಲಕ್ಷ್ಮಣ್, ಕ್ಲಬ್ ಟ್ರೈನರ್ ಕನಕ ರಾಜ್, ಎಸ್.ವೀರೇಶ್, ಭಾಗವಹಿಸಿದ್ದರು

# ಒಂದು ದಿನದ ಅಂತರ ಪೀಳಿಗೆಯ ಬಾಂಧವ್ಯ ಮೇಳ

**ದಾವಣಗೆರೆ :** ಅಕ್ಟೋಬರ್ 26 ರಂದು ಬೆಳಿಗ್ಗೆ 10.30ಕ್ಕೆ ನಗರದ ಬಾಪೂಜಿ ಸ್ಕೂಲ್ ಮೈದಾನದಲ್ಲಿ ಒಂದು ದಿನದ ಅಂತರ ಪೀಳಿಗೆಯ ಬಾಂಧವ್ಯ ಮೇಳದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ರಾಜ್ಯ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ದಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾದ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ ಉದ್ಘಾಟಿಸುವರು.

ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷರು ಹಾಗೂ ದಾ.ಜಿ.ಹಿ ನಾ.ಸಂಘದ ಅಧ್ಯಕ್ಷರಾದ ಎಸ್.ಗುರುಮೂರ್ತಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಡಾ.ವೀರಯ್ಯ, ಹಿ.ನಾ.ಸಹಾಯವಾಣಿ ಕೇಂದ್ರದ ಕಾರ್ಯದರ್ಶಿ ಮರಿಯಾಚಾರ್.ಕೆ.ಪಿ, ವಕೀಲರ ಸಂಘದ ಮಾಜಿ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ಭಾಗವಹಿಸುವರು.

# ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶ ಮಂಡಳಿ ಕಚೇರಿಯ ಉದ್ಘಾಟನಾ ಸಮಾರಂಭ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿಗಟೇರಿ ಜಿಲ್ಲಾ ಆಸ್ಪತ್ರೆ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಅ.24 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಾನಸಿಕ ಆರೋಗ್ಯ ವಿಭಾಗ ಜಿಲ್ಲಾ ಆಸ್ಪತ್ರೆ ಇಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿ ಕಚೇರಿಯ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಅಧ್ಯಕ್ಷರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಉದ್ಘಾಟಿಸುವರು. ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ.ನಾಗೇಂದ್ರಪ್ಪ ಎಂ.ಬಿ ಅಧ್ಯಕ್ಷತೆ ವಹಿಸುವರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ ಘನ ಉಪಸ್ಥಿತರಾಗಿರುವರು.

ಮುಖ್ಯ ಅತಿಥಿಗಳಾಗಿ ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಸದಸ್ಯರಾದ ಶೀಲವಂತ ಶಿವಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಮಂಜುನಾಥ ಎಲ್. ಪಾಟೀಲ್, ಜಿಲ್ಲಾ ಆಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ. ನಾಗವೇಣಿ, ಜಿಲ್ಲಾ ಆಸ್ಪತ್ರೆಯ ಮನೋರೋಗ ತಜ್ಞರಾದ ಡಾ.ಮರುಳಸಿದ್ದಪ್ಪ.ಪಿ.ಎಂ, ಮನೋರೋಗ ವಿಭಾಗದ ಮುಖ್ಯಸ್ಥರಾದ ಡಾ.ಅನುಪಮ, ಡಾ.ಮೃತ್ಯುಂಜಯ, ವೈದ್ಯಾಧಿಕಾರಿ ಡಾ.ಸುಧೀಂದ್ರ, ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಸದಸ್ಯರಾದ ಬಿ.ನಾಗಮ್ಮ, ಶಂಕರಮ್ಮ ಭಾಗವಹಿಸುವರು.

## ಆರ್‌ಎಸ್‌ಎಸ್ ರಹಸ್ಯ ಸಂಘಟನೆಯಲ್ಲ– ಶತ್ರುಗಳೂ ಇಲ್ಲ: ನೆಹರು ಮರಿಮೊಮ್ಮಕ್ಕಳು ಅರ್ಥಮಾಡಿಕೊಳ್ಳಲು ಸಮಯ ಬೇಕು: ರಾಮ್ ಮಾಧವ್

**ಬೆಂಗಳೂರು:** ರಾಷ್ಟ್ರೀಯ ಸ್ವಯಂಸೇವಕ ಸಂಘದಲ್ಲಿರುವವರು ಇಂದಿನ ಸ್ವಯಂಸೇವಕರು, ಹಾಗೂ ಅಲ್ಲದವರು ನಾಳೆ ಸ್ವಯಂಸೇವಕರಾಗುತ್ತಾರೆ, ಇದರಲ್ಲಿ ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಇತರರು ಸೇರಿದ್ದಾರೆ ಎಂದು ಬಿಜೆಪಿಯ ಮಾಜಿ ಪ್ರಧಾನ ಕಾರ್ಯದರ್ಶಿ (ಸಂಘಟನಾ) ರಾಮ್ ಮಾಧವ್ ಭಾನುವಾರ ತಿಳಿಸಿದ್ದಾರೆ.




ಸಾರ್ವಜನಿಕ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಶಾಖೆಗಳನ್ನು (ಸಭೆಗಳು) ನಡೆಸಬಾರದು ಎಂದು ಹೇಳುವವರು "ಮೂರ್ಖ"ರಾಗಿರಬೇಕು ಎಂದು ಅವರು ಹೇಳಿದರು. ಸಾರ್ವಜನಿಕ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳ ಮೇಲೆ ನಿರ್ಬಂಧ ಹೇರಬೇಕು ಮತ್ತು ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಭಾಗವಹಿಸುವ ಕರ್ನಾಟಕ ಸರ್ಕಾರಿ ನೌಕರರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಪ್ರಿಯಾಂಕ್ ಖರ್ಗೆ ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದಿದ್ದ ಹಿನ್ನೆಲೆಯಲ್ಲಿಈ ಪ್ರತಿಕ್ರಿಯೆ ಬಂದಿದೆ.

## ಅಪೂರ್ಣ ಅರ್ಜಿಗಳನ್ನು ಸರಿಪಡಿಸಲು ಸೂಚನೆ

**ಚಿಕ್ಕಮಗಳೂರು, ಅ.27:** ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 43 ಅಂಗನವಾಡಿ ಕಾರ್ಯಕರ್ತೆಯರು ಮತ್ತು 289 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ನೇಮಕ ಮಾಡಲು ನವೆಂಬರ್ 4 ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆದರೆ ಆನ್‌ಲೈನ್ ಮೂಲಕ ಸಲ್ಲಿಕೆಯಾಗುತ್ತಿರುವ ಹಲವಾರು ಅರ್ಜಿಗಳು, ಅರ್ಜಿ ಸಲ್ಲಿಕೆಯ ಎಲ್ಲಾ 4 ಹಂತಗಳನ್ನು ಸರಿಯಾಗಿ ಪೂರ್ಣಗೊಳಿಸದೇ ಅಪೂರ್ಣ ಅರ್ಜಿಗಳಾಗಿರುವುದನ್ನು ಗಮನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಸೂಕ್ತ ದಾಖಲೆಗಳೊಂದಿಗೆ ಈ ಕೆಳಗಿನ 4 ಹಂತಗಳನ್ನು ಪೂರ್ಣಗೊಳಿಸಿ ಅರ್ಜಿ ಸಲ್ಲಿಸಲು ತಿಳಿಯಪಡಿಸಿದೆ.

ಒಂದನೇ ಹಂತದಲ್ಲಿ ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು. ಎರಡನೇ ಹಂತದಲ್ಲಿ ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್ಲೋಡ್ ಮಾಡುವುದು. ಮೂರನೇ ಹಂತದಲ್ಲಿ ತಮ್ಮ ದಾಖಲಾತಿಗಳನ್ನು ಅಪ್ ಲೋಡ್ ಮಾಡುವುದು. ನಾಲ್ಕನೇ ಹಂತದಲ್ಲಿ ತಮ್ಮ ಆಧಾರ ಸಂಖ್ಯೆ ನಮೂದಿಸಿ, ಇ– ಹಸ್ತಾಕ್ಷರದೊಂದೊದಿಗೆ ಅರ್ಜಿಯನ್ನು ಪೂರ್ಣಗೊಳಿಸುವುದು.

ಈಗಾಗಲೇ ಅರ್ಜಿ ಸಲ್ಲಿಸಿರುವವರು ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕದ ಮಾಹಿತಿಯನ್ನು https://karnemakaone.kar.nic.in/abcd/home.aspx ಪೋರ್ಟಲ್‌ನಲ್ಲಿ ನಮೂದಿಸಿ ತಮ್ಮ ಅರ್ಜಿಗಳು ಸಂಪೂರ್ಣವಾಗಿ ಎಲ್ಲ 4 ಹಂತಗಳನ್ನು ಪೂರ್ಣಗೊಳಿಸಿರುವ ಬಗ್ಗೆ ನವೆಂಬರ್ 4 ರೊಳಗೆ ಖಚಿತಪಡಿಸಿಕೊಳ್ಳಲು ತಿಳಿಸಿದೆ.

ಹೆಚ್ಚಿನ ಮಾಹಿತಿಗೆ ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆ

**ಚಿಕ್ಕಮಗಳೂರು, ಅ.27:** ಜಿಲ್ಲೆಯ ಚಿಕ್ಕಮಗಳೂರು ತರೀಕೆರೆ ಮತ್ತು ನ.ರಾ.ಪುರ ತಾಲ್ಲೂಕುಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಗೌರವಧನದ ಆಧಾರದ ಮೇಲೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ವಿಕಲಚೇತನರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಬಯಸುವವರು ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ, ವಾಸಸ್ಥಳ ದೃಢೀಕರಣ ಪತ್ರ, ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ ಕಾರ್ಡ್), ಆಧಾರ್ ಕಾರ್ಡ್ ಪ್ರತಿ, ಜಾತಿ ಮತ್ತು ಆದಾಯ ದೃಢೀಕರಣ ಪತ್ರ, ಪಡಿತರ ಚೀಟಿಗಳ ಜೆರಾಕ್ಸ್ ಪ್ರತಿ ಮತ್ತು ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರಗಳನ್ನು ಲಗತ್ತಿಸಿ ನವೆಂಬರ್ 27 ರೊಳಗೆ ಸಲ್ಲಿಸುವಂತೆ ಕೋರಲಾಗಿದೆ.

ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಮುಗುಳವಳ್ಳಿ, ಹಿರೇಕೊಳಲೆ ಹಾಗೂ ದಾಸರಹಳ್ಳಿ ಗ್ರಾಮ ಪಂಚಾಯಿತಿಗಳಿಗೆ ಮೂರು, ತರೀಕೆರೆ ತಾಲ್ಲೂಕಿನ ಧೋರನಾಳು ಗ್ರಾಮ ಪಂಚಾಯಿತಿಯಲ್ಲಿ ಎರಡು ಹಾಗೂ ನ.ರಾ.ಪುರ ತಾಲ್ಲೂಕಿನ ಕಾನೂರು ಗ್ರಾಮ ಪಂಚಾಯಿತಿಯಲ್ಲಿ ಒಂದು ಹುದ್ದೆ ಖಾಲಿ ಇದೆ.

ಹೆಚ್ಚಿನ ಮಾಹಿತಿಗೆ ನಗರದ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ (ದೂರವಾಣಿ ಸಂಖ್ಯೆ: 08262–228171) ಅಥವಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಚಿಕ್ಕಮಗಳೂರಿನ ಕೆ.ಎಸ್.ಮೋಹನ್ ಗೌಡ (81059898820), ಎನ್.ಆರ್.ಪುರ ತಾಲ್ಲೂಕಿನ ಚೆಸ್ಮಿನ್ ಫ್ರಾನ್ಸಿಸ್, (7899778903) ಹಾಗೂ ತರೀಕೆರೆ ತಾಲ್ಲೂಕಿನ ಅಕ್ರಂಬಾಷಾ (9632503867) ಇವರುಗಳಿಗೆ ಅರ್ಜಿಯನ್ನು ಸಲ್ಲಿಸಲು ಜಿಲ್ಲಾ ವಿಕಲ ಚೇತನರ ಕಲ್ಯಾಣಾಧಿಕಾರಿಗಳು ಕೋರಿದ್ದಾರೆ.

## ಬ್ಯೂಟಿ ಪಾರ್ಲರ್ ಉಚಿತ ತರಬೇತಿ

**ಚಿಕ್ಕಮಗಳೂರು, ಅ.27:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 35 ದಿನಗಳ ಉಚಿತ ತರಬೇತಿಯು ನವೆಂಬರ್ 4 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9481506564, 9740982585 ಅನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮಸ್ಥಳದ ಪ್ರಕರಣದ ಅಂತಿಮ ವರದಿ ಸಲ್ಲಿಸಲು ಎಸ್‌ಐಟಿಗೆ ಜಿ.ಪರಮೇಶ್ವರ ಸೂಚನೆ

**ಬೆಂಗಳೂರು:** ಧರ್ಮಸ್ಥಳದ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಅಂತಿಮ ವರದಿಯನ್ನು ಸಲ್ಲಿಸುವಂತೆ ಎಸ್‌ಐಟಿಗೆ ಸೂಚಿಸಲಾಗಿದೆ ಎಂದು ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ಟೋಬರ್ ತಿಂಗಳಲ್ಲಿ ವರದಿ ಕೊಡುವುದಾಗಿ ಎಸ್‌ಐಟಿಯವರು ಹೇಳಿದ್ದರು. 31ರೊಳಗೆ ಕೊಡಬಹುದು ಅಥವಾ ಒಂದೆರಡು ದಿನ ವಿಳಂಬವಾಗಬಹುದು. ಅಂತಿಮ ವರದಿಯನ್ನು ಕೊಡುವಂತೆ ಹೇಳಿದ್ದೇವೆ. ಪತ್ತೆಯಾಗಿರುವ ಮೂಳೆಗಳ ಎಫ್‌ಎಸ್‌ಎಲ್ ವರದಿ, ಕೆಮಿಕಲ್ ರಿಪೋರ್ಟ್ಸ್ ವಿಶ್ಲೇಷಣೆ ಮಾಡಿ ವರದಿ ಕೊಡುತ್ತೇವೆ ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ಸಂಪುಟ ಪುನರ್ ರಚನೆ ಕುರಿತು ಮಾತನಾಡಿದ ಅವರು, ಹೈಕಮಾಂಡ್ ತೀರ್ಮಾನ ನಾವು ಹೇಳಲು ಬರುವುದಿಲ್ಲ. ಅವರು ಏನು ತೀರ್ಮಾನ ಮಾಡುತ್ತಾರೆ ಕಾದು ನೋಡೋಣ. ದಿನನಿತ್ಯ ಮಾಧ್ಯಮದಲ್ಲಿ ಹೇಳಿಕೆ ಕೊಡಬಹುದು



ಅಷ್ಟೇ. ಇಲ್ಲಿವರೆಗೆ ಹೈಕಮಾಂಡ್‌ನವರು ಏನಾದರು ಹೇಳಿದ್ದಾರೆಯೇ ಸಂಪುಟ ಪುನರ್ ರಚನೆ, ನಾಯಕತ್ವ ಬದಲಾವಣೆ ಮಾಡುತ್ತೇವೆ ಎಂಬುದರ ಬಗ್ಗೆ ಹೈಕಮಾಂಡ್‌ನಿಂದ ಯಾವುದೇ ಮಾಹಿತಿ ಇಲ್ಲ. ಏನಾದರು ಹೈಕಮಾಂಡ್‌ನಿಂದ ಸೂಚನೆ ಬಂದಿದ್ದರೆ ನಾವು ಪ್ರತಿಕ್ರಿಯಿಸಬಹುದು. ಹೈಕಮಾಂಡ್ ತಿಳಿಸುವವರೆಗೂ ಯಾವುದಕ್ಕೂ ಮಹತ್ವ ಇರುವುದಿಲ್ಲ ಎಂದರು. ಅಧಿಕಾರ ಹಂಚಿಕೆ, ಎರಡೂವರೆ ವರ್ಷ ಅಂತ ಚರ್ಚೆ ಆಯ್ತು. ಈಗ ಸಂಪುಟ ಪುನರ್ ರಚನೆ ಎನ್ನುತ್ತಿದ್ದಾರೆ. ಲೀಡರ್‌ಶಿಪ್ ಬದಲಾವಣೆ ಅಂತಾಯ್ತು. ದಿನನಿತ್ಯ ಈ ರೀತಿ ಗೊಂದಲಗಳಾಗುತ್ತಿದ್ದರೆ ಆಡಳಿತದ ಮೇಲೆ ಪರಿಣಾಮ ಬೀರುವುದಿಲ್ಲವೆ ಆಡಳಿತ ಚೆನ್ನಾಗಿ ಆಗಬೇಕು ಅಂತಂದರೆ ಇದೆಲ್ಲ ನಿಲ್ಲಬೇಕು. ನೆರೆ ಹಾವಳಿ, ರಸ್ತೆ ಗುಂಡಿ ಬಿದ್ದಿದೆ ಈತರ ಮಾತುಗಳನ್ನು ನಿಲ್ಲಿಸಲು ಆಡಳಿತ ಚುರುಕುಗೊಳಿಸಬೇಕು. ಈ ಒಂದು ಗೊಂದಲದಲ್ಲಿ ನಾವು ಇರುವುದು ಸರಿಯಲ್ಲ ಎಂದು ಹೇಳಿದರು. ನವೆಂಬರ್ 1ರಂದು ಮುಖ್ಯಮಂತ್ರಿಗಳು ಸಂತೋಷಕೂಟ ಏರ್ಪಡಿಸಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವ. ಕನ್ನಡ ರಾಜ್ಯೋತ್ಸವ ಆಚರಣೆ ಸಂದರ್ಭದಲ್ಲಿ ಊಟ ಹಾಕಿಸಿದರೆ, ರಾಜಕೀಯ ದೊಡ್ಡ ಬೆಳವಣಿಗೆ ಎನ್ನಬೇಕಿಲ್ಲ. ಇದಕ್ಕೆ ರಾಜಕೀಯವಾಗಿ ವಿಶ್ಲೇಷಣೆ ಮಾಡುವುದು ಸರಿಯಲ್ಲ. ಸಂಪುಟ ಪುನರ್ ರಚನೆ ಮಾಡುವ ಕುರಿತು ಹೈಕಮಾಂಡ್‌ನವರು ಈವರೆಗೆ ಯಾರು ಹೇಳಿಲ್ಲ. ಈ ಬಗ್ಗೆ ಮುನ್ಸೂಚನೆಯೂ ಇಲ್ಲ ಎಂದು ಹೇಳಿದರು.

ಸಚಿವ ಮುನಿಯಪ್ಪ ಅವರು ಸಿಎಂ ಆಗಲಿ ಎಂದು ಶಿವಮೊಗ್ಗದಲ್ಲಿ ಘೋಷಣೆ ಕೂಗಿರುವ ಬಗ್ಗೆ ಪ್ರತಿಕ್ರಿಯಿಸಿ, ಕೆ.ಹೆಚ್.ಮುನಿಯಪ್ಪ ಅವರು ಏಳು ಬಾರಿ ಎಂಸಂಸದರಾಗಿದ್ದವರು. ಇದು ಸಾಮಾನ್ಯವಲ್ಲ. ಪಕ್ಷದಲ್ಲಿ ಹಿರಿಯರು, ಕೇಂದ್ರದಲ್ಲಿ ಸಚಿವರಾಗಿದ್ದರು. ಈಗ ರಾಜ್ಯದಲ್ಲಿ ಸಚಿವರಾಗಿದ್ದಾರೆ. ಅವರು ಸಮರ್ಥರಿದ್ದು, ಅರ್ಹತೆಯೂ ಇದೆ. ಮುನಿಯಪ್ಪನವರು ಸಿಎಂ ಆದರೆ ನಾನು ಸಂತೋಷ ಪಡುವವನೆ.

ನಾವೆಲ್ಲ ಒಂದು ವರ್ಗಕ್ಕೆ ಸೇರಿದ್ದೇವೆ. ಆ ವರ್ಗಕ್ಕೆ ಅವಕಾಶ ಸಿಕ್ಕಿತಲ್ಲ ಎಂಬುದು ಸಂತೋಷ ಆಗುತ್ತದೆ. ಯಾವ ವರ್ಗ ತುಳಿತಕ್ಕೆ ಒಳಗಾಗಿತ್ತು, ಆ ವರ್ಗಕ್ಕೆ ಆಡಳಿತ ವರ್ಗ ಆಗುತ್ತದೆ ಅಂದರೆ ಸಂತೋಷಪಡಲು ಆಗುವುದಿಲ್ಲವೇ ಎಂದರು.

ದಲಿತ ಸಿಎಂ ಸ್ಥಾನ ಈ ಸಲ ಸಿಗಬೇಕು ಎಂಬ ವಿಶ್ವಾಸ ಏನಾದರು ಇದೇಯೆ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪಕ್ಷದಲ್ಲಿ ತೀರ್ಮಾನ ಮಾಡುವವರು ಯಾರು ನಾವು ಇಲ್ಲಿ ಕುಳಿತುಕೊಂಡು ನಾಲ್ಕು ಜನ ಹೇಳಿದರೆ ಆಗುವುದಿಲ್ಲ. ಹೈಕಮಾಂಡ್‌ನವರು ವಿಶ್ಲೇಷಣೆ ಮಾಡುತ್ತಾರೆ. ಬಿಹಾರದಲ್ಲಿ ಎಲೆಕ್ಷನ್ ನಡೆಯುತ್ತಿದೆ. ತದನಂತರ ಇದಕ್ಕೆ ಅವಶ್ಯಕತೆ ಇದ್ದರೆ ಅವರೇ ಮಾಡುತ್ತಾರೆ ಎಂದು ಹೇಳಿದರು.

# ನ್ಯಾ.ಸೂರ್ಯಕಾಂತ್ ಮುಂದಿನ ಸಿಜೆಐ

**ನವದೆಹಲಿ:** ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯಮೂರ್ತಿ ನ್ಯಾ. ಸೂರ್ಯ ಕಾಂತ್ ಅವರು ದೇಶದ ಮುಂದಿನ ಮುಖ್ಯ ನ್ಯಾಯಮೂರ್ತಿಯಾಗಲಿದ್ದಾರೆ. ಪ್ರಸ್ತುತ ಮುಖ್ಯ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯ್ ಅವರು ನವೆಂಬರ್ 23ರಂದು ನಿವೃತ್ತಿ ಹೊಂದುತ್ತಿದ್ದಾರೆ. ಅವರ ನಿವೃತ್ತಿಯ ನಂತರ ನ್ಯಾ. ಸೂರ್ಯ ಕಾಂತ್ ರವರು ಅಧಿಕಾರ ಸ್ವೀಕರಿಸಲಿದ್ದು, ಫೆಬ್ರವರಿ 9, 2027ರ ವರೆಗೆ ಈ ಹುದ್ದೆಯಲ್ಲಿ ಮುಂದುವರಿಯಲಿದ್ದಾರೆ.



**ಅನುಷ್ಠಾನ ಕಾರ್ಯವಿಧಾನದ ಪ್ರಕಾರ:** ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯಮೂರ್ತಿಯೇ ಮುಖ್ಯ ನ್ಯಾಯಮೂರ್ತಿ ಹುದ್ದೆಗೆ ಪಾತ್ರರೆಂದು ಅನುಷ್ಠಾನ ಕಾರ್ಯವಿಧಾನದಲ್ಲಿ ನಿಗದಿತವಾಗಿದೆ. ಪ್ರಸ್ತುತ ನ್ಯಾ. ಸೂರ್ಯ ಕಾಂತ್ ಅವರು ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಯಾಗಿದ್ದಾರೆ. ಈ ಕಾರಣದಿಂದಾಗಿ ಸಿಜೆಐ ಗವಾಯ್ ಅವರು ಕಾನೂನು ಸಚಿವಾಲಯಕ್ಕೆ ಅವರ ಹೆಸರನ್ನು ತಮ್ಮ ಉತ್ತರಾಧಿಕಾರಿಯಾಗಿ ಸೂಚಿಸಿದ್ದಾರೆ.

**ನ್ಯಾಯಮೂರ್ತಿ ಸೂರ್ಯ ಕಾಂತ್ ರವರು ಯಾರು?**

ಹರಿಯಾಣದ ಹಿಸಾರ್‌ನಲ್ಲಿ ಫೆಬ್ರವರಿ 10, 1962ರಂದು ಜನನ. ಮೇ 24, 2019ರಂದು ಸುಪ್ರೀಂ ಕೆ ನ್ಯಾಯಮೂರ್ತಿಯಾಗಿ ನೇಮಕ. ಅನೇಕ ಐತಿಹಾಸಿಕ ತೀರ್ಪುಗಳಲ್ಲಿ ಭಾಗವಹಿಸಿದ್ದಾರೆ.ಕೆಲವು ಗಮನಾರ್ಹ ತೀರ್ಪುಗಳು/ನ್ಯಾಯಯುತ ವಿಚಾರಣೆಗಳು ನಡೆಸಿದ್ದಾರೆ.

ಅನುಚ್ಛೇದ 370 ರದ್ದತಿ ಸಂಬಂಧಿ ಮೊಕದ್ದಮೆಯನ್ನು ವಿಚಾರಣೆ ಮಾಡಿದ ಬೆಂಚ್ ಸದಸ್ಯ. ಬ್ರಿಟಿಷ್ ಯುಗದ ದೇಶದ್ರೋಹ ಕಾನೂನನ್ನು ತಾತ್ಕಾಲಿಕವಾಗಿ ನಿಲ್ಲಿಸಲು ನಿರ್ದೇಶನ.ಚುನಾವಣಾ ಪಾರದರ್ಶಕತೆ: ಬಿಹಾರದ 65 ಲಕ್ಷ ಮತದಾರರ ವಿವರಗಳನ್ನು ಚುನಾವಣಾ ಆಯೋಗವು ಬಹಿರಂಗಪಡಿಸುವಂತೆ ನಿರ್ದೇಶನ.

ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಶನ್ ಸೇರಿದಂತೆ ಎಲ್ಲಾ ಬಾರ್ ಅಸೋಸಿಯೇಶನ್‌ಗಳಲ್ಲಿ ಮೂರನೇ ಒಂದು ಭಾಗ ಸೀಟುಗಳನ್ನು ಮಹಿಳೆಯರಿಗೆ ಮೀಸಲಿಡುವ ಐತಿಹಾಸಿಕ ತೀರ್ಪು. ಸೇರಿದಂತೆ ಪಂಜಾಬ್ ಭದ್ರತಾ ಉಲ್ಲಂಘನೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 2022ರ ಪಂಜಾಬ್ ಭೇಟಿಯ ಸಂದರ್ಭದ ಭದ್ರತಾ ಉಲ್ಲಂಘನೆಯನ್ನು ತನಿಖೆ ಮಾಡಲು ನ್ಯಾ. ಇಂದು ಮಲ್ಹೋತ್ರಾ ಅವರ ನೇತೃತ್ವದ ಐದು ಸದಸ್ಯರ ಸಮಿತಿ ರಚನೆ. ನ್ ರ್‍ಯಾಂಕ್ ಪೆನ್ಷನ್ ರಕ್ಷಣಾ ಪಡೆಗಳಿಗೆ ಒನ್ ರ್‍ಯಾಂಕ್ –ಒನ್ ಪೆನ್ಷನ್ ಯೋಜನೆಯನ್ನು ಸಂವಿಧಾನಬದ್ಧವೆಂದು ಒಪ್ಪಿಕೊಂಡ ತೀರ್ಪು ನೀಡಿದ್ದಾರೆ.

1967ರ ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯದ ತೀರ್ಪನ್ನು ರದ್ದುಗೊಳಿಸಿದ ಏಳು ನ್ಯಾಯಮೂರ್ತಿಗಳ ಬೆಂಚ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದರು. ನ್ಯಾ. ಸೂರ್ಯ ಕಾಂತ್ ರವರ ನೇತೃತ್ವದಲ್ಲಿ ಸುಪ್ರೀಂ ಕೋರ್ಟ್ ಹೇಗೆ ಮುನ್ನಡೆಯುತ್ತದೆ ಎಂಬುದು ಗಮನ ಸೆಳೆದಿದೆ.

# ಇಂದು ಆಂಧ್ರ ಕರಾವಳಿಗೆ ಅಪ್ಪಳಿಸಲಿರುವ ಮೋಂಥಾ ಚಂಡಮಾರುತ

**ನವದೆಹಲಿ:** ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದ ಸೃಷ್ಟಿಯಾಗಿರುವ ಮೋಂಥಾ ಚಂಡಮಾರುತ ನಾಳೆ ಆಂಧ್ರಪ್ರದೇಶದ ಕರಾವಳಿಗೆ ಅಪ್ಪಳಿಸಲಿದ್ದು, ನಂತರ ಒಡಿಸ್ಸಾ ಕರಾವಳಿಗೂ ಚಂಡಮಾರುತ ಪ್ರವೇಶಿಸಲಿದೆ. ಹಾಗಾಗಿ ಆಂಧ್ರಪ್ರದೇಶ, ಒಡಿಸ್ಸಾ, ತಮಿಳುನಾಡಿನಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.

ಮೋಂಥಾ ಚಂಡಮಾರುತದಿಂದ ಆಂಧ್ರಪ್ರದೇಶದಲ್ಲಿ ಧಾರಾಕಾರ ಮಳೆಯಾಗುವ ಸಾಧ್ಯತೆ ಇದ್ದು, 26 ಜಿಲ್ಲೆಗಳಿಗೆ ರೆಡ್ ಅಲರ್ಟ್ ಮತ್ತು ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಅತಿ ವೇಗದ ಗಾಳಿ ಮತ್ತು ಸಂಭವನೀಯ ಪ್ರವಾಹದ ಬಗ್ಗೆಯೂ ಎಚ್ಚರಿಕೆ ನೀಡಲಾಗಿದೆ.

ಚಂಡಮಾರುತದಿಂದ ಕಾಕಿನಾಡ ಬಳಿಯ ಮಚಲೀಪಟ್ಟಣಂ ಮತ್ತು ಕಳಿಂಗಪಟ್ಟಣಂ ನಡುವೆ ಭೂಕುಸಿತವಾಗುವ ಸಾಧ್ಯತೆ ಇದ್ದು, ಅಧಿಕಾರಿಗಳು ಕಟ್ಟೆಚ್ಚರ ವಹಿಸಿದ್ದಾರೆ.



ಭೂಕುಸಿತ, ಭಾರೀ ಮಳೆ, ಪ್ರವಾಹ ಎಚ್ಚರಿಕೆ ಹಿನ್ನೆಲೆಯಲ್ಲಿ ಎಲ್ಲಾ ಜಿಲ್ಲೆಗಳ ಶಾಲಾ–ಕಾಲೇಜುಗಳಿಗೆ 2 ದಿನ ರಜೆ ಘೋಷಿಸಲಾಗಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚನೆಯನ್ನೂ ನೀಡಲಾಗಿದೆ.

ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದ ಮೋಂಥಾ ಚಂಡಮಾರುತ ಸೃಷ್ಟಿಯಾಗಿದ್ದು, ನಾಳೆ ಆಂಧ್ರ, ಕರಾವಳಿ ಮೂಲಕ ಹಾದು ಒಡಿಸ್ಸಾದ ದಕ್ಷಿಣ ಹಾಗೂ ಕರಾವಳಿ ಪ್ರದೇಶಗಳ ಮೇಲೆ ಅಪ್ಪಳಿಸುವ ಸಾಧ್ಯತೆ ಇದೆ.

ಈ ಚಂಡಮಾರುತದ ಕಾರಣ ಅಕ್ಟೋಬರ್ 29ರ ವರೆಗೆ ತಮಿಳುನಾಡಿನ ಕೆಲವು ಭಾಗಗಳಲ್ಲಿ ಆಂಧ್ರ ಪ್ರದೇಶದ ಕರಾವಳಿ ಭಾಗ ಮತ್ತು ಒಡಿಸ್ಸಾದಲ್ಲಿ ಭಾರಿ ಮಳೆಯಾಗಲಿದೆ ಎಂದು ಅಂದಾಜಿಸಲಾಗಿದ್ದು, ಸುರಕ್ಷಿತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಈಶಾನ್ಯ ಮಳೆ ಮಾರುತಗಳು ಆರಂಭವಾದ ಬಳಿಕ ಮೊದಲ ಬಾರಿಗೆ ಬಂಗಾಳಕೊಲ್ಲಿಯಲ್ಲಿ ಚಂಡಮಾರುತ ಸೃಷ್ಟಿಯಾಗಿದ್ದು, ಈ ಚಂಡಮಾರುತಕ್ಕೆ ಮೋಂಥಾ ಎಂದು ಹೆಸರಿಡಲಾಗಿದೆ.

ಮೋಂಥಾ ಚಂಡಮಾರುತದ ವೇಗ ಹೆಚ್ಚಿದ್ದು, ಚಂಡಮಾರುತದಿಂದ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಯಾವುದೇ ಅವಘಡಗಳಾಗದಂತೆ ಜನರ ಸುರಕ್ಷತೆಗೆ ಆಂಧ್ರ ಮತ್ತು ಒಡಿಸ್ಸಾ ಸರ್ಕಾರಗಳು ಗಮನಹರಿಸಿದ್ದು, ಚಂಡಮಾರುತ ಅಪ್ಪಳಿಸಿ

# ದೇವಗೊಂಡನಹಳ್ಳಿಯ ಮೃತನ ಕುಟುಂಬಕ್ಕೆ 5 ಲಕ್ಷ ರೂ. ಚೆಕ್ ವಿತರಣೆ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ತಾಲ್ಲೂಕು ಲಕ್ಯಾ ಹೋಬಳಿ ದೇವಗೊಂಡನಹಳ್ಳಿಯ ಸೀತಮ್ಮ ಮತ್ತು ಲಕ್ಷ್ಮಣ್‌ಗೌಡ ಎಂಬುವವರ ಪುತ್ರ ಮೂರ್ತಿ ಎಂಬಾತ ದನ ಮೇಯಿಸಲು ಹೋಗಿದ್ದಾಗ ಆಕಸ್ಮಿಕ ಹಳ್ಳದ ನೀರಿನಲ್ಲಿ ಕೊಚ್ಚಿಹೋಗಿದ್ದ ಕುಟುಂಬಕ್ಕೆ ಸಿಎಂ ಪರಿಹಾರ ನಿಧಿಯಿಂದ 5 ಲಕ್ಷ ರೂ ಚೆಕ್‌ನ್ನು ಶಾಸಕ ತಮ್ಮಯ್ಯ ಹಸ್ತಾಂತರಿಸಿದರು.

ಇಂದು ಮೃತನ ಕುಟುಂಬಕ್ಕೆ ತೆರಳಿದ ಅವರು, ಕಂದಾಯ ಸಚಿವ ಕೃಷ್ಣಬೈರೇಗೌಡರ ಆದೇಶದಂತೆ ಚೆಕ್‌ನ್ನು ತಹಶೀಲ್ದಾರ್ ಮೂಲಕ ಇಂದು ವಿತರಿಸಿದರು.

ಮೃತನ ಕುಟುಂಬಕ್ಕೆ ಸಾಂತ್ವಾನ ಹೇಳಿದ ಅವರು, ಮಗನ ಅಗಲಿಕೆಯಿಂದಾಗುವ ಆರ್ಥಿಕ ಸಂಕಷ್ಟವನ್ನು ಭರಿಸುವ ವ್ಯವಸ್ಥೆಯನ್ನು ರಾಜ್ಯಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದಾರೆ ಎಂದರು.



ಸಂಬಂಧಿಕರು ಹಾಗೂ ಸಂಕಷ್ಟ ಹೇಳಿಕೊಂಡು ಬರುವವರ ಮಾತಿಗೆ ಮರುಳಾಗದೆ ಈ ಹಣವನ್ನು ಬ್ಯಾಂಕಿನಲ್ಲಿ ನಿಶ್ಚಿತ ಠೇವಣಿ ಇಟ್ಟು ಇದರಿಂದ ಬರುವ ಬಡ್ಡಿಯಲ್ಲಿ ಜೀವನ ಸಾಗಿಸಲು ಸಲಹೆ ನೀಡಿದರು.

ಸರಳ ಕಾರ್ಯಕ್ರಮಗಳ ಮೂಲಕ ಕುಟುಂಬಕ್ಕೆ ಹಣ ಉಳಿತಾಯ ಮಾಡಿಕೊಳ್ಳಿ ಎಂದು ಮಹಾನ್ ದಾರ್ಶನಿಕರು ಹೇಳಿರುವುದನ್ನು ಈ ಸಂದರ್ಭದಲ್ಲಿ ಉಲ್ಲೇಖಿಸಿದರು.

ಚೆಕ್ ವಿತರಣಾ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ರೇಷ್ಮಾಶೆಟ್ಟಿ, ಗ್ರಾ.ಪಂ ಸದಸ್ಯರಾದ ಯೋಗೀಶ್, ಗೌರಮ್ಮ, ನಾಗೇಗೌಡ, ಲಕ್ಷ್ಮಮ್ಮ, ಗ್ರಾಮಸ್ಥರಾದ ಸಗನೇಗೌಡ, ಕೆಂಗೇಗೌಡ, ಸಣ್ಣೇಗೌಡ, ಅಚ್ಚುತರಾವ್, ಮೊಗಣ್ಣಗೌಡ ಮತ್ತಿತರರು ಉಪಸ್ಥಿತರಿದ್ದರು.

## ಪಥ ಸಂಚಲನ ನಡೆಸಲು ಅನುಮತಿ ನೀಡಿ: ಜೈ ಭೀಮ ಸೇನೆ ಒತ್ತಾಯ



**ಕಲಬುರಗಿ:** ಭಾರತದ ಪ್ರಜಾಪ್ರಭುತ್ವದ ಹಿರಿಮೆಯನ್ನು ಜನಜಾಗೃತಗೊಳಿಸಲು ಮತ್ತು ಪ್ರಬುದ್ಧ ಭಾರತದ ಸಂವಿಧಾನದ ಆಶಯಗಳನ್ನು ಸಾಕಾರೊಳಿಸಲು ನ.2 ರಂದು ಜೈಭೀಮ ಸೇನೆ ವತಿಯಿಂದ ಚಿತ್ತಾಪುರದಲ್ಲಿ ಪಥಸಂಚನಲ ನಡೆಸಲು ನಿರ್ಧರಿಸಿದ್ದು, ಇದಕ್ಕೆ ಅನುಮತಿ ನೀಡಬೇಕು.

ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಅವರ ಕುಟುಂಬದವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದವರನ್ನು ಕೂಡಲೇ ಬಂಧಿಸಬೇಕು ಮತ್ತು ಆರೆಸ್‌ಎಸ್ ಬ್ಯಾನ್ ಮಾಡಬೇಕು ಎಂದು ಒತ್ತಾಯಿಸಿ ಜೈಭೀಮ ಸೇನೆ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಲಾಯಿತು.

ಸೇನೆ ರಾಜ್ಯ ಸಂಚಾಲಕ ಗುಂಡಪ್ಪ ಲಂಡನಕರ್, ಜಿಲ್ಲಾ ಅಧ್ಯಕ್ಷ ರಾಹುಲ್ ಎಸ್.ಉಪಾರೆ, ಸಿದ್ಧಾರ್ಥ ದಿಕಸಂಗಿಕರ್, ಅಮಿತ್‌ಕುಮಾರ ಎಂ.ಮಾಲೆ, ಅರಣಕುಮಾರ ವಿ., ರೇವಣ್ಣ ಬಾವಿಮನಿ, ದತ್ತು ಬಿ. ಬುಕ್ಕನ್, ನಿರಗುಣ ಬಳಿಚಕ್ರ, ನಾಗರಾಜ ಪಟ್ಟಣಕರ, ದರ್ಶನ ಮುಡ್ಡಿ, ಮಹ್ಮದ್ ಸದ್ದಾಂ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಮಾನವನ ಸ್ವಾರ್ಥಪರ ಅಭಿವೃದ್ಧಿ ಪರಿಸರ ನಾಶಕ್ಕೆ ಕಾರಣ : ಕೃಪಾಕರ, ಸೇನಾನಿ

**ಚಿಕ್ಕಮಗಳೂರು :** ಮನುಷ್ಯನ ದುರಾಸೆಯಿಂದ ಕೂಡಿದ ಸ್ವಾರ್ಥಪರ ಅಭಿವೃದ್ಧಿಯೇ ಇಂದು ಪರಿಸರದ ನಾಶಕ್ಕೆ ಮೂಲ ಕಾರಣವಾಗಿದೆ" ಎಂದು ಕಾಡು ನಾಯಿಗಳ ಕುರಿತಾದ ಸಾಕ್ಷ್ಯ ಚಿತ್ರಕ್ಕಾಗಿ ಪ್ರತಿಷ್ಠಿತ ಅಂತರಾಷ್ಟ್ರೀಯ ಗ್ರೀನ್ ಆಸ್ಕರ್ ಪ್ರಶಸ್ತಿ ವಿಜೇತರು, ಖ್ಯಾತ ವನ್ಯಜೀವಿ ಛಾಯಾಗ್ರಾಹಕರು ಮತ್ತು ಪರಿಸರ ಸಂರಕ್ಷಕರು ಆದ ಕೃಪಾಕರ ಮತ್ತು ಸೇನಾನಿಯವರು ಹೇಳಿದರು. ಇವರು ಇತ್ತೀಚೆಗೆ ಚಿಕ್ಕಮಗಳೂರಿನ ಸರ್ಕಾರಿ ನೌಕರರ ಸಂಘದ ಭವನದಲ್ಲಿ ಚಿಕ್ಕಮಗಳೂರು ಜಿಲ್ಲಾ ಪದವಿಪೂರ್ವ ಕಾಲೇಜುಗಳ ಕನ್ನಡ ಭಾಷಾ ಉಪನ್ಯಾಸಕರ ವೇದಿಕೆಯ ವತಿಯಿಂದ ನಡೆದ "ಪರಿಸರ ಜಗತ್ತು" ಕುರಿತಾದ ವಿಚಾರ ಸಂಕಿರಣ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳು ಮತ್ತು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದರು.



ಈ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದ ಚಿಕ್ಕಮಗಳೂರು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ಮಂಜುಳ ಕೆ ಮಾತನಾಡಿ ಮಾನವನ ಬದುಕಿನ ಹಿನ್ನೆಲೆಯಲ್ಲಿ ಪ್ರಕೃತಿಯ ಮಹತ್ವವನ್ನು ತಿಳಿಸುತ್ತಾ ವಿದ್ಯಾರ್ಥಿಗಳಲ್ಲಿ ವಿದ್ಯಾರ್ಥಿ ದೆಸೆಯಿಂದಲೇ ಪರಿಸರ ಪ್ರಜ್ಞೆ ಬೆಳೆಯುವಂತೆ ಮಾಡುವುದು ಶಿಕ್ಷಕರ ಮತ್ತು ಪೋಷಕರ ಜವಾಬ್ದಾರಿ ಎಂದು ತಿಳಿಸಿದರು.

ಈ ಕಾರ್ಯಕ್ರಮಕ್ಕೆ ಸ್ಥಳಾವಕಾಶ ಒದಗಿಸಿಕೊಟ್ಟ ಚಿಕ್ಕಮಗಳೂರು ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಶ್ರೀ ದೇವೇಂದ್ರರವರು ಇಂತಹ ಒಂದು ಕಾರ್ಯಕ್ರಮದಲ್ಲಿ ನಾನು ಪಾಲ್ಗೊಂಡಿರುವುದು ನನ್ನ ಬದುಕಿನ ಅವಿಸ್ಮರಣೀಯ ಸಂದರ್ಭ ಎಂದು ಹೇಳಿ ಕಾರ್ಯಕ್ರಮಕ್ಕೆ ಶುಭ ಕೋರಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಕನ್ನಡ ಭಾಷಾ ಉಪನ್ಯಾಸಕರ ವೇದಿಕೆಯ ಅಧ್ಯಕ್ಷರಾದ ಶ್ರೀ ಕೆ ಆರ್ ಶಿವಕುಮಾರ್ ಅವರು ವಹಿಸಿದ್ದರು. ಮುಖ್ಯ ಅತಿಥಿಗಳಾದ ಕೃಪಾಕರ ಮತ್ತು ಸೇನಾನಿಯವರನ್ನು ಉಪನ್ಯಾಸಕರಾದ ಶ್ರೀ ಮಂಜುನಾಥ್ ರವರು ವಿಶೇಷವಾಗಿ ಪರಿಚಯಿಸಿದರು. ಉಪನ್ಯಾಸಕರಾದ ಶ್ರೀ ಎಚ್ ಟಿ ಗಿರೀಶ್ ರವರು ಸ್ವಾಗತಸಿದರೆ ಅತಿಥಿಗಳನ್ನು ಕನ್ನಡ ಭಾಷಾ ಉಪನ್ಯಾಸಕರ ಸಂಘದ ಗೌರವಾಧ್ಯಕ್ಷರಾದ ಶ್ರೀ ವಿರೂಪಾಕ್ಷ ಜಿ ಬಿ ವಂದಿಸಿದರು. ಉಪನ್ಯಾಸಕಿಯಾದ ಶ್ರೀಮತಿ ನವೀನ ಪ್ರಾರ್ಥನೆಯನ್ನು ಹಾಡಿದರೆ, ಕಾರ್ಯಕ್ರಮದ ನಿರ್ವಹಣೆಯನ್ನು ಪೂರ್ಣಪ್ರಜ್ಞ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಶ್ರೀ ರಚನ್ ರವರು ನಡೆಸಿಕೊಟ್ಟರು.

# ಪುರಸಭೆ ಅಧಿಕಾರಿಗಳಿಂದ ದೌರ್ಜನ್ಯ : ಕರ್ನಾಟಕ ರಕ್ಷಣಾ ವೇದಿಕೆಯಿಂದ ದೂರು

**ತರೀಕೆರೆ:** ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ತಾಲೂಕು ಘಟಕ, ಕನ್ನಡ ಸೇನೆ ಕರ್ನಾಟಕ ತಾಲೂಕು ಘಟಕ, ಕನ್ನಡಪರ ಸಂಘಟನೆಗಳ ಒಕ್ಕೂಟ ವತಿಯಿಂದ ರಸ್ತೆಯ ಬದಿಯಲ್ಲಿದ್ದ ಪೆಟ್ಟಿಗೆ ಅಂಗಡಿಗಳ ಧ್ವಂಸ, ಅಮೂಲ್ಯ ವಸ್ತುಗಳ ನಾಶ ಹಾಗೂ ಬಡ ಕುಟುಂಬಗಳ ಮೇಲೆ ದಬ್ಬಾಳಿಕೆ ಮತ್ತು ದೌರ್ಜನ್ಯ ಮಾಡಿರುವ ಪುರಸಭೆ ಮುಖ್ಯ ಅಧಿಕಾರಿಗಳು ದೌರ್ಜನ್ಯ ಮಾಡಿರುವ ಕುರಿತು ಉಪ ವಿಭಾಗಾಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.

ನಾನು ಮತ್ತು ನನ್ನೊಂದಿಗೆ ಇರುವ ಏಳು ಬಡ ಕುಟುಂಬಗಳ ಮೇಲೆ ದಬ್ಬಾಳಿಕೆ ಮಾಡಿದ್ದು, ತುಂಬಾ ನೋವಿನಿಂದ ಈ ದೂರು ಪತ್ರವನ್ನು ಬರೆಯುತ್ತಿದ್ದೇವೆ. ನಮ್ಮ ಕುಟುಂಬಗಳ ನಿರ್ವಹಣೆಗೆ



ತಾತ್ಕಾಲಿಕ ಶೀಟ್‌ಗಳಲ್ಲಿ ಜೆರಾಕ್ಸ್ ಅಂಗಡಿ, ಟೀ ಅಂಗಡಿ, ಹೇರ್ ಸಲೂನ್ ಮುಂತಾದ ಸಣ್ಣ ಸಣ್ಣ ವ್ಯಾಪಾರ ನಡೆಸುತ್ತಿದ್ದೇವೆ. ಈ ಅಂಗಡಿಗಳು ನಮ್ಮ ಮಕ್ಕಳ ಬದುಕಿನ ಆಶಾಕಿರಣ, ನಮ್ಮ ಹೊಟ್ಟೆಯ ಹೊರೆ ತೀರಿಸುವ ಏಕಮಾತ್ರ ದಾರಿ ಎಂದು ದೂರು ಪತ್ರದಲ್ಲಿ ಬಡ ಕುಟುಂಬಗಳು ಅಲವತ್ತುಕೊಂಡಿವೆ. ಅಂಗಡಿಯಲ್ಲಿ ದೇವರ ಪೂಜೆ ಮಾಡುತ್ತಿದ್ದಾಗ ಪುರಸಭೆ ಮುಖ್ಯಾಧಿಕಾರಿ, ಸಿಬ್ಬಂದಿ ಜೆ.ಸಿ.ಬಿ. ಯಂತ್ರದೊಂದಿಗೆ ಉದ್ದೇಶಪೂರ್ವಕವಾಗಿ ಆಗಮಿಸಿ ನಮ್ಮ ಅಂಗಡಿಯನ್ನು ಧ್ವಂಸ ಮಾಡಿದರು. ನಾವು ಬಹಳ ಕಷ್ಟಪಟ್ಟು ಖರೀದಿಸಿದ್ದ ಅಮೂಲ್ಯ ವಸ್ತುಗಳನ್ನು ನಮ್ಮ ಗಮನಕ್ಕೆ ತಾರದೆ ಏಕಾಏಕಿ ಧ್ವಂಸ ಮಾಡಿ ನಷ್ಟಪಡಿಸಿದ್ದಾರೆ ಎಂದಿವೆ.

ಈ ಅಂಗಡಿಯನ್ನು ಧ್ವಂಸ ಮಾಡಿದ ಪರಿಣಾಮವಾಗಿ ನಾವು ಅದಾಯವಿಲ್ಲದೆ ನಿರಾಶ್ರಿತರಾಗಿ ಕಣ್ಣೀರಿನಲ್ಲಿ ಬದುಕುತ್ತಿರುವ ಪರಿಸ್ಥಿತಿ ಉಂಟಾಗಿದೆ. ಮುಖ್ಯವಾಗಿ ಈ ಜಾಗ ಪುರಸಭೆಗೆ ಸೇರಿರುವುದಿಲ್ಲ. ಆದ್ದರಿಂದ ಇದು ಸಂಪೂರ್ಣವಾಗಿ ಅಕ್ರಮ ಕೃತ್ಯವಾಗಿದೆ. ಇದಕ್ಕೆ ಪುರಸಭೆ ಅಧಿಕಾರಿಗಳು ಹೊಣೆಗಾರರು. ಮಾನವೀಯತೆ ಇಲ್ಲದ ಕೃತ್ಯಕ್ಕೆ ಹೊಣೆಗಾರರಾದ ಅಧಿಕಾರಿಗಳು, ಸಿಬ್ಬಂದಿ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪತ್ರದಲ್ಲಿ ಒತ್ತಾಯಿಸಿದ್ದಾರೆ.

ನಮ್ಮ ಅಂಗಡಿಯಲ್ಲಿ ಧ್ವಂಸವಾದ ಅಮೂಲ್ಯ ವಸ್ತುಗಳಿಗೆ ಹಾಗೂ ಜೀವನೋಪಾಯ ನಷ್ಟಕ್ಕೆ ಪರಿಹಾರ ನೀಡಬೇಕು, ನಮ್ಮಂತಹ ಬಡಕುಟುಂಬಗಳಿಗೆ ಸಣ್ಣ ವ್ಯಾಪಾರಗಳನ್ನು ಮುಂದುವರಿಸಲು ರಕ್ಷಣೆ ಒದಗಿಸಬೇಕು ಎಂದು ದೂರು ಪತ್ರದಲ್ಲಿ ಹೇಳಿವೆ.

ಈ ಸಂದರ್ಭದಲ್ಲಿ ಕರವೇ ರಾಜ್ಯ ಸಂಚಾಲಕ ಜಿ.ಆರ್. ವಿಶ್ವನಾಥ್ ಕಾಶಿ, ಕನ್ನಡ ಸೇನೆ ತಾಲೂಕು ಅಧ್ಯಕ್ಷ ವಿಕಾಸ್, ಕರವೇ ತಾಲೂಕು ಅಧ್ಯಕ್ಷ ನವೀನ್, ಗಿರೀಶ್ ಹಾಲುಕಂಬಿ ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**